ಸಂಪುಟ: ೦೭/ ಸಂಚಿಕೆ: ೧೮೭/ ರವಿವಾರ ದಿನಾಂಕ : ೧೪-೦೯-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 187/ SUNDAY Date : 14-09-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00



## ರಾಜ್ಯದಲ್ಲಿ ಸೆಪ್ಟೆಂಬರ್ 16ವರೆಗೆ ಮಳೆ ಅಬ್ಬರ

**ಬೆಂಗಳೂರು:** ರಾಜ್ಯದಲ್ಲಿ ಮಳೆ ಅಬ್ಬರ ಇನ್ನೊಂದಿಷ್ಟು ದಿನ ಮುಂದುವರೆಯಲಿದ್ದು ಮುಂದಿನ ನಾಲ್ಕು ದಿನ ಅಂದರೆ ಸೆಪ್ಟೆಂಬರ್ 16ರವರೆಗೂ ಮಳೆ ಆರ್ಭಟ ಮುಂದುವರೆಯಲಿದೆ ಎಂದು ಹವಾಮಾನ ಇಲಾಖೆ ಮಾಹಿತಿ ನೀಡಿದೆ. ಸೆಪ್ಟೆಂಬರ್ 16ವರೆಗೂ ರಾಜ್ಯದ ವಿವಿಧ ಭಾಗಗಳಲ್ಲಿ ಮಳೆ ಆರ್ಭಟ ಜೋರಾಗಿರಲಿದ್ದು, ಉತ್ತರ ಹಾಗೂ ದಕ್ಷಿಣ ಕರ್ನಾಟಕ ಭಾಗದ ಹಲವು ಜಿಲ್ಲೆಗಳಲ್ಲಿ ಮುಂದಿನ ನಾಲ್ಕೈದು ದಿನ ಮಳೆ ಮತ್ತಷ್ಟು ಬಿರುಸುಗೊಳ್ಳುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. **ಬೆಂಗಳೂರಿಗೆ ಯೆಲ್ಲೋ ಅಲರ್ಟ್ ಜಾರಿ** ಇನ್ನು ರಾಜಧಾನಿ ಬೆಂಗಳೂರಿನಲ್ಲಿ ಮಳೆ ಅಬ್ಬರ ಮತ್ತೊಂದಿಷ್ಟು ದಿನ ಮುಂದುವರೆಯುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮಾಹಿತಿ ನೀಡಿದ್ದು, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ಕೋಲಾರ, ಬಳ್ಳಾರಿ, ಮೈಸೂರು, ಮಂಡ್ಯ, ತುಮಕೂರು, ಬೆಳಗಾವಿ, ಬೀದರ್, ಗದಗ, ರಾಯಚೂರು, ಯಾದಗಿರಿ ಹಾಗೂ ವಿಜಯನಗರ ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ನೀಡಲಾಗಿದೆ.

## ವಾರ್ಷಿಕ ಆದಾಯ 1.20 ಲಕ್ಷಕ್ಕಿಂತ ಮೇಲಿದ್ದವರ ಬಿಪಿಎಲ್ ಕಾರ್ಡ್ ರದ್ದತಿಗೆ ಯೋಚನೆ

**ದಾವಣಗೆರೆ:** ವಾರ್ಷಿಕ ಆದಾಯ 1 ಲಕ್ಷದ 20 ಸಾವಿರ ರೂಪಾಯಿಗಿಂತ ಮೇಲ್ಪಟ್ಟವರ ಬಿಪಿಎಲ್ ಕಾರ್ಡ್ ರದ್ದು ಮಾಡಬೇಕು ಎಂಬುದು ಕೇಂದ್ರ ಸರ್ಕಾರದ ತೀರ್ಮಾನ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಹೆಚ್. ಮುನಿಯಪ್ಪ ಹೇಳಿದರು.

ಶನಿವಾರ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರವೇ ಒಂದು ಸರ್ವೆ ಮಾಡಿಸಿದೆ. ಆ ಸರ್ವೆ ಪ್ರಕಾರ 1 ಲಕ್ಷದ 20 ಸಾವಿರಕ್ಕಿಂತ ಹೆಚ್ಚು ವಾರ್ಷಿಕ ಆದಾಯ ಹೊಂದಿರುವವರ ಬಿಪಿಎಲ್‌ಕಾರ್ಡ್ ರದ್ದು ಮಾಡಬೇಕು ಎಂದು ಹೇಳಿದ್ದಾರೆ. ಅದರ ಬಗ್ಗೆ ನಾವು ಯೋಚನೆ ಮಾಡುತ್ತಿದ್ದೇವೆ, ಅದನ್ನು ಮಾಡಬೇಕಾಗುತ್ತದೆ ಎಂದು ತಿಳಿಸಿದರು.

**ಅನರ್ಹ ಬಿಪಿಎಲ್ ಕಾರ್ಡ್ ರದ್ದತಿಗೆ ಕ್ರಮ ಕೈಗೊಳ್ಳುವಂತೆ ಸಿಎಂ ಖಡಕ್ ಸೂಚನೆ:** ರಾಜ್ಯದಲ್ಲಿ ಅನರ್ಹ ಬಿಪಿಎಲ್ ಕಾರ್ಡ್‌ಗಳನ್ನು ರದ್ದುಪಡಿಸಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಆದರೆ, ಅರ್ಹ ಬಿಪಿಎಲ್ ಕಾರ್ಡುದಾರರಿಗೆ ಯಾವುದೇ ತೊಂದರೆಯಾಗದಂತೆ ನೋಡಿಕೊಳ್ಳಬೇಕು. ಅರ್ಹರು ಯಾರಾದರೂ ಬಿಟ್ಟು ಹೋಗಿದ್ದರೆ ಅವರಿಗೆ ಬಿಪಿಎಲ್ ಕಾರ್ಡ್ ನೀಡಲು ಕ್ರಮ ಕೈಗೊಳ್ಳಬೇಕು ಎಂದು ಇತ್ತೀಚಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದ್ದರು.ಈಗಾಗಲೇ ಗುರುತಿಸಲಾಗಿರುವ ಅನರ್ಹ ಬಿಪಿಎಲ್ ಪಡಿತರ ಚೀಟಿದಾರರ ಪೈಕಿ 3,65,614 ಪಡಿತರ ಚೀಟಿಗಳನ್ನು ರದ್ದು/ವರ್ಗ ಬದಲಾವಣೆ ಮಾಡಲಾಗಿದೆ. ಅನ್ನಭಾಗ್ಯ ಯೋಜನೆಯಡಿ ಅಕ್ಕಿಯ ಜೊತೆಗೆ ಪೌಷ್ಟಿಕ ಧಾನ್ಯ, ಅಗತ್ಯ ಆಹಾರ ಸಾಮಗ್ರಿಗಳನ್ನು ಒಳಗೊಂಡ ಕಿಟ್ ಒದಗಿಸುವ ಕುರಿತು ಪರಿಶೀಲನೆ ನಡೆಸಲಾಗಿದ್ದು, ಈ ಕುರಿತು ಪ್ರಸ್ತಾವನೆ ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚನೆ ಕೊಟ್ಟಿದ್ದರು.



### ಒಳಮೀಸಲಾತಿಯಿಂದ ಅನ್ಯಾಯವಾಗಿಲ್ಲ

ಒಳ ಮೀಸಲಾತಿ ಕುರಿತು ಮಾತನಾಡಿ, ಒಳ ಮೀಸಲಾತಿ ಜಾರಿಯಾದ ಮೇಲೆ ಮೊಟ್ಟ ಮೊದಲ ಸಭೆ ದಾವಣಗೆರೆಯಲ್ಲಿ ಮಾತನಾಡುತ್ತಿದ್ದೇವೆ. ಐತಿಹಾಸಿಕ ತೀರ್ಮಾನವನ್ನು ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್? ಸೇರಿದಂತೆ ನಾವೆಲ್ಲರೂ ಮಾಡಿದ್ದೇವೆ. 35 ವರ್ಷಗಳ ಹೋರಾಟಕ್ಕೆ ಫಲ ಸಿಕ್ಕಿದೆ. 101 ಜಾತಿಗಳಿಗೆ ಸಮಾನವಾಗಿ ಹಂಚಿಕೆ ಮಾಡಲಾಗಿದೆ. ಸಮುದಾಯಗಳು ಇದರ ಸದುಪಯೋಗ ಮಾಡಿಕೊಳ್ಳಬೇಕು. ಒಳ ಮೀಸಲಾತಿಯಿಂದ ಯಾರಿಗೂ ಅನ್ಯಾಯವಾಗಿಲ್ಲ, ಆಗೋದು ಇಲ್ಲ. ಅಂತಹದ್ದೇನಾದರೂ ಇದ್ದರೆ, ಸರಿ ಮಾಡುವ ಕೆಲಸ ಮಾಡೋಣ ಎಂದರು. ಒಳ ಮೀಸಲಾತಿ ನೀಡಿದ ಬಳಿಕ ರಾಜ್ಯದಲ್ಲಿ ಮೊದಲ ವಿಜಯೋತ್ಸವ ದಾವಣಗೆರೆಯಲ್ಲಿ ಆಚರಿಸಲಾಗುತ್ತಿದೆ.

## ಧರ್ಮಸ್ಥಳ ಪ್ರಕರಣ ತನಿಖೆ ವಿಳಂಬವಾಗುತ್ತಿಲ್ಲ

**ಧರ್ಮಸ್ಥಳ** ಪ್ರಕರಣದಲ್ಲಿ ಎಸ್‌ಐಟಿ ತನಿಖೆ ವಿಳಂಬವಾಗುತ್ತಿರುವುದರ ಬಗ್ಗೆ ಮಾಧ್ಯಮದವರ ಪ್ರಶ್ನೆಗೆ ಮೈಸೂರಿನಲ್ಲಿ ಪ್ರತಿಕ್ರಿಯಿಸಿದ ಅವರು, ತನಿಖೆ ವಿಳಂಬವಾಗುತ್ತಿಲ್ಲ. ಎಸ್‌ಐಟಿ ತನಿಖೆ ಮಾಡುತ್ತಿದ್ದು, ಸರಕಾರ ಇದರಲ್ಲಿ ಹಸ್ತಕ್ಷೇಪ ಮಾಡುವುದಿಲ್ಲ. ಹಾಗೆಂದು ಅನಗತ್ಯವಾಗಿ ವಿಳಂಬ ಮಾಡುವಂತಿಲ್ಲ. ನನಗೆ ತಿಳಿದಂತೆ ವಿಳಂಬವಾಗುತ್ತಿಲ್ಲ ಎಂದು ಹೇಳಿದರು.

ದಸರಾ ಉದ್ಘಾಟಕರ ವಿಚಾರದಲ್ಲಿ ಉದ್ಘಾಟನೆಗೆ ಅವಕಾಶ ಕೊಡಬಾರದು ಎಂದು ನ್ಯಾಯಾಲಯಕ್ಕೆ ಅರ್ಜಿ ಹಾಕಿರುವ ಬಗ್ಗೆ ಮಾತನಾಡಿ, ನ್ಯಾಯಾಲಯದಲ್ಲೇ ವಿಷಯ ಇತ್ಯರ್ಥವಾಗಲಿ ಎಂದ ಅವರು, ದಸರಾ ಒಂದು ಧರ್ಮಕ್ಕೆ ಸೇರಿದ ಕಾರ್ಯಕ್ರಮವಲ್ಲ. ಸಾಂಸ್ಕೃತಿಕವಾಗಿ ಎಲ್ಲ ಧರ್ಮದ ಜನರು ಇದರಲ್ಲಿ ಭಾಗವಹಿಸುತ್ತಾರೆ. ದಸರಾ ನಾಡಹಬ್ಬವಾಗಿದ್ದು, ಒಂದು ಧರ್ಮದವರು ಮಾತ್ರ ಭಾಗವಹಿಸಬೇಕು ಎಂದೇನೂ ಇಲ್ಲ. ಸಾರ್ವತ್ರಿಕ ಹಬ್ಬದಲ್ಲಿ ಎಲ್ಲ ಜಾತಿ ಮತ್ತು ಧರ್ಮದವರು ಭಾಗವಹಿಸಬಹುದು ಎಂದರು.

**ರಾಜಕಾರಣಕ್ಕಾಗಿ ಆಕ್ಷೇಪ:** ಮಹಾರಾಷ್ಟ್ರ ಮುಖ್ಯಮಂತ್ರಿಗಳು ಆಲಮಟ್ಟಿ ಅಣೆಕಟ್ಟನ್ನು ಎತ್ತರಿಸುವ ಬಗ್ಗೆ ಆಕ್ಷೇಪ ವ್ಯಕ್ತಪಡಿಸಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ನ್ಯಾಯಮಂಡಳಿಯೇ ಅಣೆಕಟ್ಟನ್ನು 519 ಮೀ.ಗಳಿಂದ 524 ಮೀ.ವರೆಗೆ ಏರಿಸಲು 2010 ರಲ್ಲಿ ಹೇಳಿದೆ. 15 ವರ್ಷಗಳಾಗಿದ್ದು ರಾಜಕಾರಣಕ್ಕಾಗಿ ಆಕ್ಷೇಪ ತೆಗೆದಿದ್ದಾರೆ ಎಂದರು.

**ಜಾತಿ ಗಣತಿ ಮತಾಂತರಗೊಂಡ ಜಾತಿಯನ್ನೇ ಪರಿಗಣಿಸಲಾಗುವುದು:** ರಾಜ್ಯ ಸರಕಾರ ಕೈಗೊಳ್ಳುತ್ತಿರುವ ಜಾತಿ ಗಣತಿಯಲ್ಲಿ ಹೊಸ ಜಾತಿಗಳನ್ನು ಸರಕಾರ ಸೇರ್ಪಡೆ ಮಾಡುತ್ತಿದೆ ಎಂಬ ಬಿಜೆಪಿ ಆರೋಪಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಕೇಂದ್ರ ಸರಕಾರ ಕೈಗೊಂಡಿರುವ ಜಾತಿ ಗಣತಿ ಬಗ್ಗೆ ಏನು ಹೇಳುತ್ತಾರೆ ಎಂದು ಪ್ರಶ್ನಿಸಿದರು. ಯಾರಾದರೂ ಮತಾಂತರಗೊಂಡಿದ್ದರೆ ಅವರ ಈಗಿನ ಜಾತಿಯನ್ನೇ ಪರಿಗಣಿಸಲಾಗುವುದು. ಮತಾಂತರವಾಗುವುದು ಬೇಡ ಎಂದರೂ ವ್ಯವಸ್ಥೆಯ ಪರಿಣಾಮವಾಗಿ ಮತಾಂತರಗೊಳ್ಳುತ್ತಾರೆ. ಹಿಂದೂ ಸಮಾಜದಲ್ಲಿ ಸಮಾನತೆ ಇದ್ದಿದ್ದರೆ, ಸಮಾನ ಅವಕಾಶಗಳಿದ್ದರೆ, ಏಕೆ ಮತಾಂತರಗೊಳ್ಳುತ್ತಾರೆ? ಅಸ್ಪೃಶ್ಯತೆ ಏಕೆ ಬಂತು, ಅದನ್ನು ನಾವು ಹುಟ್ಟುಹಾಕಿದ್ದೇವೆಯೇ? ಎಂದರು. ಅಸಮಾನತೆ ಹಿಂದೂ, ಮುಸ್ಲಿಂ, ಕ್ರಿಶ್ಚಿಯನ್ ಧರ್ಮದಲ್ಲಿ ಮತಾಂತರವಾಗಿದ್ದಾರೆ. ಅದು ಅವರ ಹಕ್ಕು ಎಂದರು.



### ಹಾಸನ ಅಪಘಾತ ಪ್ರಕರಣ

## ಪರಿಹಾರ ನೀಡುವುದು ಸಾವಿಗೆ ಸಮಾನವಲ್ಲ

**ಮೈಸೂರು:** ಅಪಘಾತ ಸಂದರ್ಭದಲ್ಲಿ ಮೃತರ ಕುಟುಂಬದವರಿಗೆ ಸರ್ಕಾರ ಪರಿಹಾರ ನೀಡುವುದು ಸಾವಿನ ನಷ್ಟಕ್ಕೆ ಸಮಾನ ಎಂದಲ್ಲ. ಮೃತರ ಕುಟುಂಬಕ್ಕೆ ಸಾಂತ್ವನ ಹೇಳಲು, ತಮ್ಮವರನ್ನು ಕಳೆದುಕೊಂಡ ಕುಟುಂಬಕ್ಕೆ ಆರಂಭಿಕ ದಿನಗಳಲ್ಲಿ ಆರ್ಥಿಕ ಸಂಕಷ್ಟಗಳು ಬಾಧಿಸದಿರಲಿ ಎಂಬ ಉದ್ದೇಶದಿಂದ ಪರಿಹಾರ ನೀಡಲಾಗುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ಮೈಸೂರಿನ ಮಂಡಕಳ್ಳಿ ವಿಮಾನ ನಿಲ್ದಾಣದಲ್ಲಿ ಶನಿವಾರ ಮಾಧ್ಯಮದವರೊಂದಿಗೆ ಅವರು ಮಾತನಾಡುತ್ತಿದ್ದರು.

ಹಾಸನದಲ್ಲಿ ರಸ್ತೆ ಅಪಘಾತದಲ್ಲಿ ಮಡಿದವರ ಕುಟುಂಬದವರಿಗೆ 5 ಲಕ್ಷ ಪರಿಹಾರ ಘೋಷಣೆ ಮಾಡಿದ್ದು, ಅದನ್ನು 10 ಲಕ್ಷಕ್ಕೆ ಏರಿಸಬೇಕೆಂದು ಬಿಜೆಪಿಯವರು ಹೇಳಿರುವ ಬಗ್ಗೆ ಪ್ರತಿಕ್ರಿಯೆ ನೀಡಿದ ಮುಖ್ಯಮಂತ್ರಿಗಳು, ಬಿಜೆಪಿಯವರು ಅಧಿಕಾರದಲ್ಲಿದ್ದಾಗ ಎಷ್ಟು ಕೊಟ್ಟಿದ್ದರು?, ಅವರೇನಾದರೂ ಹೆಚ್ಚಾಗಿ ಕೊಟ್ಟಿದ್ದರೆ ಪರವಾಗಿಲ್ಲ ಎನ್ನಬಹುದಿತ್ತು. ಆದರೆ, ಅವರು ಮಾಡಿಲ್ಲವಲ್ಲ ಸರ್ಕಾರ ರಸ್ತೆ ಸುರಕ್ಷತಾ ಕಾನೂನು ಜಾರಿ ಮಾಡಿದ್ದು, ಸುರಕ್ಷತಾ ಕ್ರಮಗಳನ್ನು ಕೈಗೊಂಡಿದೆ. ಚಾಲಕರ ತಪ್ಪಿನಿಂದ ಅಪಘಾತವಾಗಿದೆ. ಅದಕ್ಕೆ ಸರ್ಕಾರ ಹೇಗೆ ಹೊಣೆಯಾಗಲು ಸಾಧ್ಯ? ಎಂದು ಪ್ರಶ್ನಿಸಿದರು.

'ಪರಿಹಾರ ಕೊಡುವುದು, ಸತ್ತವರನ್ನು ವಾಪಸ್ ಕರೆತರುತ್ತೇವೆ ಎಂದಲ್ಲ. ಇಂತಹ ಘಟನೆಗಳಾದಾಗ ಸರ್ಕಾರ ಹಿಂದಿನಿಂದಲೂ ಪರಿಹಾರ ನೀಡುತ್ತಾ




ಬಂದಿದೆ. ಕುಟುಂಬದವರಿಗೆ ಸಾಂತ್ವನ ಹೇಳುವ ಕೆಲಸವಿದು. ಯಾರೋ ಒಬ್ಬರಿಗೆ ವಿಶೇಷವಾಗಿ ಹೆಚ್ಚಿಸುವಂಥದ್ದಲ್ಲ; ಎಲ್ಲರಿಗೂ ಸಮಾನವಾಗಿ ಕೊಡಬೇಕಾಗುತ್ತದೆ' ಎಂದರು.

ಮೃತರ ಕುಟುಂಬದವರಿಗೆ ಸಾವಿನ ದುಃಖ ಭರಿಸುವ ಶಕ್ತಿಯನ್ನು ಭಗವಂತ ನೀಡಲಿ ಎಂದು ಪ್ರಾರ್ಥಿಸುವುದಾಗಿ ತಿಳಿಸಿದ ಮುಖ್ಯಮಂತ್ರಿಗಳು, ಹಾಸನ ಉಸ್ತುವಾರಿ ಸಚಿವ ಕೃಷ್ಣಭೈರೇಗೌಡ ಅವರಿಗೆ ಮೃತರ ಸಂಬಂಧಿಕರನ್ನು ಭೇಟಿ ಮಾಡಿ ಪರಿಹಾರ ಘೋಷಣೆ ಮಾಡುವಂತೆ ಸೂಚಿಸಿದ್ದೇನೆ ಎಂದರು.

ಸತ್ತವರು ಹೆಚ್ಚಾಗಿ ಕೂಲಿ ಕಾರ್ಮಿಕರು, ವಿದ್ಯಾರ್ಥಿಗಳಿದ್ದರು ಹಾಗಾಗಿ ಸರ್ಕಾರ ಹೆಚ್ಚಿನ ಪರಿಹಾರ ಒದಗಿಸುತ್ತಿದೆಯೇ ಎಂಬ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಗಳು ಸರ್ಕಾರ ಐದು ಲಕ್ಷ ಪರಿಹಾರ ನೀಡಿದೆ. ಮೃತರ ಕುಟುಂಬದವರು ಆರ್ಥಿಕವಾಗಿ ಹಿಂದುಳಿದಿದ್ದಾರೆ ಎಂದೇ ಪರಿಹಾರ ನೀಡಿದೆ ಎಂದರು.

## ನಿಮ್ಮ ಜೊತೆಗೆ ನಾನಿದ್ದೇನೆ ಮಣಿಪುರದ ಜನರಿಗೆ ಪ್ರಧಾನಿ ಅಭಯ

**ಇಂಫಾಲ (ಮಣಿಪುರ):** ಕೇಂದ್ರ ಸರ್ಕಾರವು ಸಂಘರ್ಷ ಪೀಡಿತ ಜನರೊಂದಿಗೆ ಒಗ್ಗಟ್ಟಿನಲ್ಲಿ ನಿಲ್ಲುತ್ತದೆ. ಎಲ್ಲಾ ಸಂಘಟನೆಗಳು ಶಾಂತಿಯ ಹಾದಿಯಲ್ಲಿ ಸಾಗಲಿ ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಒತ್ತಾಯಿಸಿದರು.

2023 ರಲ್ಲಿ ಜನಾಂಗೀಯ ಹಿಂಸಾಚಾರ ಭುಗಿಲೆದ್ದ ನಂತರ ಇದೇ ಮೊದಲ ಬಾರಿಗೆ ಮಣಿಪುರಕ್ಕೆ ಶನಿವಾರ ಭೇಟಿ ನೀಡಿದ ಅವರು, ಭಾರೀ ಮಳೆಯಲ್ಲೂ ಕುಕಿ ಪ್ರಾಬಲ್ಯದ ಚುರಚಂದಪುರಕ್ಕೆ ರಸ್ತೆ ಮೂಲಕ ಪ್ರಯಾಣ ಬೆಳೆಸಿದರು. ಅಲ್ಲಿ ಜನಾಂಗೀಯ ಹಿಂಸಾಚಾರಕ್ಕೆ ತುತ್ತಾಗಿ ಎಲ್ಲವನ್ನೂ ಕಳೆದುಕೊಂಡು ಆಶ್ರಯ ಕೇಂದ್ರಗಳಲ್ಲಿ ವಾಸಿಸುತ್ತಿರುವ ಜನರೊಂದಿಗೆ ಸಂವಾದ ನಡೆಸಿದರು.

ನಂತರ ಅವರು ಮಣಿಪುರ ನಗರದ ರಸ್ತೆಗಳು, ಒಳಚರಂಡಿ ಮತ್ತು ಆಸ್ತಿ ನಿರ್ವಹಣಾ ಸುಧಾರಣೆ ಯೋಜನೆ, ಐದು ರಾಷ್ಟ್ರೀಯ ಹೆದ್ದಾರಿ ಯೋಜನೆ, ಮಣಿಪುರ ಇನ್ಫೋಟೆಕ್ ಅಭಿವೃದ್ಧಿ ಯೋಜನೆ, ಒಂಬತ್ತು ಉದ್ಯೋಗಸ್ಥ ಮಹಿಳಾ ಹಾಸ್ಟೆಲ್‌ಗಳು ಸೇರಿದಂತೆ 7,300 ಕೋಟಿ ರೂಪಾಯಿ ಮೌಲ್ಯದ ಬಹು ಅಭಿವೃದ್ಧಿ ಯೋಜನೆಗಳಿಗೆ ಉದ್ಘಾಟನೆ ಮತ್ತು ಅಡಿಪಾಯ ಹಾಕಿದರು. ಬಳಿಕ ಮಾತನಾಡಿದ ಅವರು ಇಂದು ಅನುಷ್ಠಾನಗೊಂಡ ಯೋಜನೆಗಳು ಜನರ ಜೀವನವನ್ನು ಸುಧಾರಿಸುತ್ತವೆ. ವಿಶೇಷವಾಗಿ ಮಣಿಪುರದ ಬೆಟ್ಟಗಳಲ್ಲಿ ವಾಸಿಸುವ ಬುಡಕಟ್ಟು ಸಮುದಾಯಗಳ ಜೀವನಕ್ಕೆ ನೆರವಾಗಲಿವೆ. ಮೂಲಸೌಕರ್ಯದ ಹೆಚ್ಚಳದೊಂದಿಗೆ, ಈ ಯೋಜನೆಗಳು ಎಲ್ಲರಿಗೂ ಆರೋಗ್ಯ ಮತ್ತು ಶಿಕ್ಷಣದಲ್ಲಿ ಹೊಸ ಸೌಲಭ್ಯಗಳನ್ನು ಒದಗಿಸುತ್ತವೆ" ಎಂದರು.



### ಮಣಿಪುರ ಅಭಿವೃದ್ಧಿಗೆ ಆದ್ಯತೆ


ಇನ್ನು 2 ವರ್ಷದಿಂದ ನಡೆಯುತ್ತಿರುವ ಸಂಘರ್ಷದ ಕುರಿತು ಮಾತನಾಡಿದ ಪ್ರಧಾನಿ ಮೋದಿ ಮಣಿಪುರದಲ್ಲಿ ಶಾಂತಿಗಾಗಿ ಕರೆ ನೀಡಿದರು. ಎಲ್ಲಾ ಸಮುದಾಯಗಳು ಒಟ್ಟಾಗಿ ಮುಂದುವರಿಯಬೇಕು. ಈ ಭೂಮಿ ಒಂದು ಕಾಲದಲ್ಲಿ ಭರವಸೆ ಮತ್ತು ಕನಸುಗಳನ್ನು ಹೊಂದಿತ್ತು. ಆದರೆ, ಇದು ಹಿಂಸಾಚಾರದ ಕಪಿಮುಷ್ಟಿಗೆ ಸಿಲುಕಿದೆ. ಎಲ್ಲಿಯೇ ಆದರೂ ಅಭಿವೃದ್ಧಿ ಕೆಲಸಗಳು ನಡೆಯಬೇಕಾದರೆ, ಸತ್ಯ ಮತ್ತು ನ್ಯಾಯದ ಜೊತೆಗೆ ಶಾಂತಿ ಅತ್ಯಗತ್ಯ. ಕೇಂದ್ರವು ಮಣಿಪುರದ ಜನರೊಂದಿಗೆ ಒಟ್ಟಾಗಿ ನಿಲ್ಲಲಿದೆ ಎಂದು ಹೇಳಿದರು.

## ವೀರಶೈವ ಲಿಂಗಾಯತರಲ್ಲಿ ಗೊಂದಲ ಸೃಷ್ಟಿಸುತ್ತಿರುವ ಸಾಣೇಹಳ್ಳಿ ಶ್ರೀಗಳು

**ಹುಬ್ಬಳ್ಳಿ:** ಜನಗಣತಿ ವಿಷಯ ಆರಂಭವಾದಾಗಿನಿಂದ ಸಾಣೇಹಳ್ಳಿ ಶ್ರೀಗಳು ವೀರಶೈವ ಲಿಂಗಾಯತರಲ್ಲಿ ಗೊಂದಲ ಉಂಟು ಮಾಡುತ್ತಿದ್ದಾರೆ. ಎಲ್ಲ ಸ್ವಾಮೀಜಿಗಳು ಸಮುದಾಯ ಒಂದು ಮಾಡಲು ಹೊರಾಡುತ್ತಿದ್ದಾರೆ. ಆದರೆ, ಶುಕ್ರವಾರ ಧಾರವಾಡದಲ್ಲಿ ನಡೆದ ಬಸವ ಸಂಸ್ಕೃತಿ ಅಭಿಯಾನದಲ್ಲಿ ನಾಡಿನ ಪ್ರತಿಷ್ಠಿತ ಸಾಣೇಹಳ್ಳಿ ಶ್ರೀಗಳು, ದಿಂಗಾಲೇಶ್ವರ ಶ್ರೀಗಳು ಬಟ್ಟೆ ಬದಲಾವಣೆ ಮಾಡಿದ್ದಾರೆ. ಕಾವಿ ಬಿಟ್ಟು ಬಿಳಿ ಬಟ್ಟೆ ಧರಿಸಿ ಗೋಸುಂಬೆ ಆಗಿದ್ದಾರೆ ಎಂದು ನಮ್ಮ ಬಗ್ಗೆ ಮಾತನಾಡಿದ್ದಾರೆ ಎಂದು ಶಿರಹಟ್ಟಿಯ ಫಕೀರ ದಿಂಗಾಲೇಶ್ವರ ಸ್ವಾಮೀಜಿ ಹೇಳಿದರು.

ನಗರದಲ್ಲಿ ಶನಿವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, "ಶಿರಹಟ್ಟಿ ಫಕೀರ ಸಂಸ್ಥಾನ ಮಠದ ಸಂಪ್ರದಾಯದಂತೆ ನಾವು ಕೇಸರಿ ಪೇಟ, ಬಿಳಿ ಬಟ್ಟೆ, ಹಸಿರು ಶಾಲು ತೊಟ್ಟಿದ್ದೇವೆ. ಇವು ರಾಷ್ಟ್ರಧ್ವಜದ ಸಂಕೇತ, ಸಾಣೇಹಳ್ಳಿ ಶ್ರೀಗಳು ಯಾರ ಒತ್ತಡಕ್ಕೆ ಒಳಗಾಗಿ ನನ್ನ ಬಗ್ಗೆ ಈ ರೀತಿಯಾಗಿ ಮಾತನಾಡಿದ್ದಾರೆ ಗೊತ್ತಿಲ್ಲ" ಎಂದರು.

ಶಿರಹಟ್ಟಿ ಮಠದಲ್ಲಿ ಐದು ತರಹದ ಬಟ್ಟೆ ಧರಿಸುವ ಸಂಪ್ರದಾಯವಿದೆ. ನಾನು ಈ ಮಠಕ್ಕೆ 14ನೇ ಪೀಠಾಧಿಪತಿ, ನಾನು ನನ್ನ ಸ್ವಂತ ಇಚ್ಛೆಯಿಂದ ಈ ಬಟ್ಟೆ ಧರಿಸಿಲ್ಲ. ಮಠದ ಸಂಪ್ರದಾಯದಂತೆ ಬಟ್ಟೆ ಧರಿಸಿದ್ದೇನೆ. ತಾವು ಇಡೀ ಸಮಾಜದ ಬಟ್ಟೆಯನ್ನು (ದಾರಿಯನ್ನು) ಬದಲಿಸುತ್ತಿದ್ದೀರಿ. ತಮ್ಮ ಬಗ್ಗೆ ಹಾಗೂ ಸಿರಿಗೆರೆ ಪೀಠದ ಬಗ್ಗೆ ಅಪಾರವಾದ ಗೌರವವಿದೆ. ನಿಮ್ಮನ್ನು ಆದರ್ಶವಾಗಿಟ್ಟುಕೊಂಡು ಮುನ್ನಡೆಯುವ ಸ್ವಾಮೀಜಿ ನಾನು, ವೀರಶೈವ ಲಿಂಗತತ್ವದ ಬಗ್ಗೆ ಸಿರಿಗೆರೆ ಶ್ರೀಗಳು ಸಾಕಷ್ಟು ಉತ್ತಮ ವಿಚಾರಗಳನ್ನು ಜನರಿಗೆ ತಿಳಿಸಿದ್ದಾರೆ. ಅದರಂತೆ ತಮ್ಮ ಮಠದ ಮೂಲ ಸಿದ್ಧಾಂತವನ್ನು ತಾವು ಅಪ್ಪಿಕೊಳ್ಳಬೇಕು ಹೊರತು ತಪ್ಪಿ ನಡೆಯಬಾರದು ಎಂದು ತಿಳಿಸಿದರು. ಇಷ್ಟೆಲ್ಲ ಮಾತನಾಡುವ ಸಾಣೇಹಳ್ಳಿ ಶ್ರೀಗಳು ತಮ್ಮ ಪೀಠಕ್ಕೆ ಮುಂದೆ ಯಾವ ಜಾತಿಯ ವಟುವನ್ನು ಪೀಠಾಧಿಪತಿಗಳಾಗಿ ನೇಮಕ ಮಾಡುತ್ತೀರಿ ಎಂಬುದನ್ನು ಬಹಿರಂಗ ಪಡಿಸಬೇಕು" ಎಂದು ಆಗ್ರಹಿಸಿದರು.



## ಶಿಕ್ಷಣದಿಂದ ಜವಾಬ್ದಾರಿಯುತ ವ್ಯಕ್ತಿಯಾಗಲು ಸಾಧ್ಯ

**ಮೈಸೂರು:** ಶಿಕ್ಷಣದಿಂದ ಮಾತ್ರ ನಮ್ಮ ಜ್ಞಾನ ವಿಕಾಸವಾಗುತ್ತದೆ. ಅದರಿಂದ ನಾವು ಸ್ವತಂತ್ರ, ಸ್ವಾಭಿಮಾನಿ ಹಾಗೂ ಜವಾಬ್ದಾರಿಯುತ ವ್ಯಕ್ತಿಯಾಗಲು ಸಾಧ್ಯ. ಆದ್ದರಿಂದ ಪ್ರತಿಯೊಬ್ಬರೂ ಶಿಕ್ಷಣವನ್ನು ಪಡೆದುಕೊಳ್ಳಲೇಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಜೆಎಸ್‌ಎಸ್ ಪ್ರಸಾದ ನಿಲಯಗಳ ಹಿರಿಯ ವಿದ್ಯಾರ್ಥಿಗಳ ಗೃಹ ನಿರ್ಮಾಣ ಸಹಕಾರ ಸಂಘ ನಿಯಮಿತ ಮೈಸೂರು ವತಿಯಿಂದ ಮೈಸೂರಿನ ವರುಣ ಕೆರೆಯ ಪಕ್ಕದಲ್ಲಿರುವ ಶ್ರೀ ಶಿವರಾತ್ರಿ ರಾಜೇಂದ್ರ ನಗರದಲ್ಲಿ ಆಯೋಜಿಸಲಾಗಿದ್ದ ಶ್ರೀ ಶಿವರಾತ್ರಿ ರಾಜೇಂದ್ರ ಅನುಭವ ಮಂಟಪ ಹಾಗೂ ಸಂಘದ ಕಚೇರಿಯನ್ನು ಉದ್ಘಾಟಿಸಿ ಬಳಿಕ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದರು.

ಜೆಎಸ್‌ಎಸ್ ಕಾಲೇಜಿನ ಹಳೆಯ ವಿದ್ಯಾರ್ಥಿಗಳು ಸೇರಿ ಗೃಹ ನಿರ್ಮಾಣ ಸಂಘವನ್ನು ಸ್ಥಾಪಿಸಿದ್ದಾರೆ. ಸಂಘದ ಮೂಲಕ ನಿವೇಶನಗಳನ್ನು ಹಂಚಿಕೆ ಮಾಡುವ ಕೆಲಸವನ್ನು ಮಾಡಿದ್ದಾರೆ. ಸಂಘವು ಹಿಂದೆ ಜಮೀನು ಕೊಂಡ ದರದಲ್ಲಿಯೇ ನಿವೇಶನಗಳನ್ನು ಹಂಚಿಕೆ ಮಾಡಿರುವುದು ಸಹಕಾರ ಸಂಘಗಳ ಇತಿಹಾಸದಲ್ಲಿಯೇ ಪ್ರಥಮ ಎಂದ ಸಿಎಂ, ಸಂಘದ ಸದಸ್ಯರನ್ನು ಅಭಿನಂದಿಸಿದರು.

ಶಿವರಾತ್ರಿ ರಾಜೇಂದ್ರ ಮಠದ ಅಧ್ಯಕ್ಷರಾದ ನಂತರ ಸ್ವಾಮೀಜಿಗಳು ಶಿಕ್ಷಣಕ್ಕೆ ಹೆಚ್ಚು ಒತ್ತು ಕೊಟ್ಟಿದ್ದಾರೆ. ಕರ್ನಾಟಕ, ದೇಶ ಮಾತ್ರವಲ್ಲದೇ ಅಂತಾರಾಷ್ಟ್ರೀಯ ಮಟ್ಟದಲ್ಲಿಯೂ ಶಿಕ್ಷಣ ಸಂಸ್ಥೆ ಸ್ಥಾಪಿಸಿದ್ದಾರೆ. ಇದಕ್ಕೆ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳು ಹಾಕಿದ ಅಡಿಪಾಯವೇ ಕಾರಣ. ಶಿಕ್ಷಣ ಬಹಳ ಮುಖ್ಯ ಎಂದರು.



**ಮಹಿಳೆಯರಿಗೆ ಶಿಕ್ಷಣದ ಹಕ್ಕು ಸಿಕ್ಕಿದ್ದು ಬಸವಣ್ಣನವರ ಕಾಲದಲ್ಲಿ:** ನಮ್ಮ ಸಮಾಜ ಸಾಮಾಜಿಕ ಜಾತಿ ವ್ಯವಸ್ಥೆಯಿಂದ ಕೂಡಿದೆ. ಈ ಕಾರಣದಿಂದ ಬಸವಣ್ಣನವರ ಕಾಲಕ್ಕಿಂತಲೂ ಹಿಂದೆ ಶೂದ್ರ ಜನಾಂಗದವರು ಮತ್ತು ಮಹಿಳೆಯರು ಶಿಕ್ಷಣದಿಂದ ವಂಚಿತರಾಗಿದ್ದರು. ಮಹಿಳೆಯರಿಗೆ ಶಿಕ್ಷಣದ ಹಕ್ಕು ಸಿಕ್ಕಿದ್ದು ಬಸವಣ್ಣನವರ ಕಾಲದಲ್ಲಿ ಎನ್ನುವುದನ್ನು ನಾವು ಮರೆಯಬಾರದು ಎಂದು ಹೇಳಿದರು.

ಅನುಭವ ಮಂಟಪ ಎಂದು ಹೆಸರಿಟ್ಟಿರುವುದು ಸೂಕ್ತವಾಗಿದೆ. ಅನುಭವ ಮಂಟಪ ಜಗತ್ತಿನ ಮೊದಲನೇ ಸಂಸತ್ತು ಎಂದು ಕರೆಸಿಕೊಂಡಿದೆ. ಈ ಸಂಸತ್ತಿನಲ್ಲಿ ಜಾತಿ, ಧರ್ಮಗಳು ಇರಲಿಲ್ಲ. ಎಲ್ಲಾ ಧರ್ಮದವರೂ ಈ ಸಂಸತ್ತಿನಲ್ಲಿ ಪಾಲ್ಗೊಳ್ಳುತ್ತಿದ್ದರು. ಬಸವಣ್ಣನವರು ಅದಕ್ಕಾಗಿಯೇ ಅನುಭವ ಮಂಟಪ ನಿರ್ಮಿಸಿ ಜನರ ಸಾಮಾಜಿಕ ಅನುಭವಗಳನ್ನು ಚರ್ಚೆ ಮಾಡಿ ಅದಕ್ಕೆ ಪರಿಹಾರ ಕೊಡುವ ಕೆಲಸವನ್ನು ಮಾಡಿದ್ದರು ಎಂದರು.

**ಜಾತ್ಯತೀತ ಸಮಾಜ ನಿರ್ಮಾಣದ ಕನಸು:** ಬಸವಣ್ಣನವರು ಯಾವುದೇ ಜಾತಿ, ಧರ್ಮ, ಪಂಗಡಕ್ಕೆ ಸೇರಿದವರಲ್ಲ. ಅವರು ವಿಶ್ವ ಮಾನವರಾಗಿದ್ದವರು. ಸಮಾಜ ಜಾತ್ಯತೀತ, ಅಸಮಾನತೆಯಿಂದ ಮುಕ್ತವಾಗಬೇಕು ಎಂಬ ಕನಸನ್ನು ಕಂಡಿದ್ದರು. ಸಮ ಸಮಾಜ ನಿರ್ಮಾಣದ ಕನಸನ್ನು ಕಂಡಿದ್ದಷ್ಟೇ ಅಲ್ಲದೇ ಅನುಭವ ಮಂಟಪದಲ್ಲಿ ಎಲ್ಲರಿಗೂ ಮುಕ್ತ ಅವಕಾಶಗಳನ್ನು ಒದಗಿಸಿದ್ದರು. ತಾವು ಅಧ್ಯಕ್ಷರಾಗದೇ ತಳಸಮುದಾಯದಿಂದ ಬಂದ ಅಲ್ಲಮ ಪ್ರಭು ಅವರನ್ನು ಅಧ್ಯಕ್ಷರನ್ನಾಗಿ ಮಾಡಿದರು. ಜಾತ್ಯತೀತ, ಸಮಾನತೆ, ಸ್ವತಂತ್ರ, ಮೇಲು ಕೀಳು ಎಂಬ ಬೇಧ ಭಾವ ಇಲ್ಲದೆ ಎಲ್ಲರೂ ಮನುಷ್ಯರಾಗಿ ಬಾಳುವ ಕನಸನ್ನು ಬಸವಣ್ಣ ಕಂಡಿದ್ದರು. ಇದಕ್ಕೂ ಹಿಂದೆ ಬುದ್ಧ ಕೂಡ ಇದೇ ಪ್ರಯತ್ನ ಮಾಡಿದ್ದರು. ಇಷ್ಟೆಲ್ಲಾ ಆದರೂ ಜಾತಿ ವ್ಯವಸ್ಥೆ ನಮ್ಮಲ್ಲಿ ಬೇರೂರಿದೆ. ದೇಶಕ್ಕೆ ಸ್ವಾತಂತ್ರ್ಯ ಸಿಕ್ಕು 78 ವರ್ಷಗಳಾದರೂ ಜಾತಿ ವ್ಯವಸ್ಥೆ ಹೋಗಿಲ್ಲವೆಂದರೆ ಜಾತಿ ಅಷ್ಟು ಆಳವಾಗಿ ಬೇರೂರಿದೆ ಎಂದರು.

**ಆರ್ಥಿಕ, ಸಾಮಾಜಿಕ ಶಕ್ತಿ ದೊರೆತಾಗ ಮಾತ್ರ ಜಾತಿ ವ್ಯವಸ್ಥೆಗೆ ಚಲನೆ:** ಜಾತಿ ವ್ಯವಸ್ಥೆಗೆ ಚಲನೆ ಇಲ್ಲ. ಆರ್ಥಿಕ, ಸಾಮಾಜಿಕ ಶಕ್ತಿ ಬಂದಾಗ ಮಾತ್ರ ಈ ವ್ಯವಸ್ಥೆಗೆ ಚಲನೆ ಬರುತ್ತದೆ. ನಮ್ಮ ನಡುವಿನ ಪಟ್ಟಭದ್ರ ಹಿತಾಸಕ್ತಿಗಳು ಈ ಜಾತಿ ವ್ಯವಸ್ಥೆಗೆ ಸಾಮಾಜಿಕ, ಆರ್ಥಿಕ ಶಕ್ತಿ ಬರದ ಹಾಗೆ ನೋಡಿಕೊಳ್ಳುತ್ತಿದ್ದಾರೆ ಎಂದು ಹೇಳಿದರು.

**ಜಾತ್ಯತೀತ ಸಮಾಜ ನಿರ್ಮಾಣಕ್ಕೆ ಮಂಟಪ ಕಾರಣವಾಗಲಿ:** ಇಂದು ಇಲ್ಲಿ ಉದ್ಘಾಟನೆಗೊಂಡಿರುವ ಈ ಮಂಟಪ ಜಾತ್ಯಾತೀತ ಸಮಾಜ ನಿರ್ಮಾಣಕ್ಕೆ ಕಾರಣವಾಗಲಿ ಎನ್ನುವ ಆಶಯ ವ್ಯಕ್ತಪಡಿಸಿದರು. ಪೂಜ್ಯ ರಾಜೇಂದ್ರ ಸ್ವಾಮೀಜಿಗಳು ಅಕ್ಷರ ದಾಸೋಹ, ಅನ್ನ ದಾಸೋಹಕ್ಕೆ ಹೆಸರಾದವರು. ದಾಸೋಹದ ಅರ್ಥ ಉತ್ಪಾದಿಸುವುದು ಮತ್ತು ಹಂಚುವುದು ಎಂಬುದಾಗಿದೆ. ಅದು ಇಲ್ಲಿ ಅರ್ಥಪೂರ್ಣವಾಗಿ ಆಚರಣೆಯಾಗುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಬಸವಣ್ಣನವರು ಹೇಳಿದಂತೆ ಜಾತಿ ರಹಿತ, ವರ್ಗ ರಹಿತ ಸಮಾಜ ನಿರ್ಮಾಣ ಆಗಬೇಕು. ಎಲ್ಲರೂ ಮನುಷ್ಯರಾಗಿ ಬಾಳಬೇಕು. ಸಂವಿಧಾನದ ಆಶಯವೂ ಅದೇ. ಸಮಾನತೆ, ಸ್ವಾತಂತ್ರ್ಯ, ಭ್ರಾತೃತ್ವ. ಆದ್ದರಿಂದ ನಾವೆಲ್ಲರೂ ಸಮ ಸಮಾಜ ನಿರ್ಮಾಣ ಮಾಡಿ ಸಹಬಾಳ್ವೆ ರೂಢಿಸಿಕೊಳ್ಳಬೇಕು ಎಂದರು.

### ಬಸವಣ್ಣ ವಿಶ್ವ ಮಾನವ

ಸ್ವತಂತ್ರ ಭಾರತದಲ್ಲಿ ಸಂಸತ್ತು, ವಿಧಾನಸಭೆಗಳಾಗಿವೆ. ಜನಪ್ರತಿನಿಧಿಗಳು ಸಂಸತ್ತು, ವಿಧಾನಸಭೆಗಳಲ್ಲಿ ಚರ್ಚೆ ಮಾಡುತ್ತಿದ್ದಾರೆ. ಇಂಥ ವ್ಯವಸ್ಥೆ ಬಸವಣ್ಣನವರ ಕಾಲದಲ್ಲಿಯೇ ಇತ್ತು. ಅನುಭವ ಮಂಟಪದಲ್ಲಿ ಸಮಾಜದ ಭವಿಷ್ಯದ ಬಗ್ಗೆ, ಪಿಡುಗುಗಳನ್ನು ತೆಗೆದುಹಾಕುವ ಬಗ್ಗೆ ಚರ್ಚೆ ನಡೆಯುತ್ತಿತ್ತು. ನಾನು ಹಿಂದೆ ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಎಲ್ಲ ಸರ್ಕಾರಿ ಕಚೇರಿಗಳಲ್ಲಿ ಬಸವಣ್ಣನವರ ಭಾವಚಿತ್ರವನ್ನು ಕಡ್ಡಾಯವಾಗಿ ಇರಿಸಲು ಆದೇಶ ಹೊರಡಿಸಲಾಗಿತ್ತು. ಈ ಬಾರಿ ಬಸವಣ್ಣನವರನ್ನು ರಾಜ್ಯದ ಸಾಂಸ್ಕೃತಿಕ ನಾಯಕ ಎಂದು ತೀರ್ಮಾನಿಸಿದೆ ಎಂದು ತಿಳಿಸಿದರು.



## ಸೈಬರ್ ವಂಚನೆಗಳ ಕಡಿವಾಣಕ್ಕೆ 'ಸೈಬರ್ ಕಮಾಂಡ್ ಸೆಂಟರ್'

**ಬೆಂಗಳೂರು:** ಸೈಬರ್ ವಂಚನೆಗೆ ಕಡಿವಾಣ ಹಾಕಲು ಹೈಕೋರ್ಟ್ ರಾಜ್ಯ ಸರಕಾರಕ್ಕೆ ಸೂಚನೆ ನೀಡಿದ ಹಿನ್ನೆಲೆ, ಸೆ.8ರಂದು ದೇಶದಲ್ಲೇ ಮೊದಲ ಸೈಬರ್ ಕಮಾಂಡ್ ಸೆಂಟರ್ ಅನ್ನು ಬೆಂಗಳೂರಲ್ಲಿ ಆರಂಭಿಸಲಾಗಿದ್ದು, ಸದ್ಯ ಈಗ ಕಮಾಂಡ್ ಸೆಂಟರ್‌ಗೆ ಡಿಐಜಿಯಾಗಿ ಶನಿವಾರ ಪ್ರಣವ್ ಮೊಹಾಂತಿ ಅವರನ್ನು ನೇಮಕ ಮಾಡಲಾಗಿದೆ.

ರಾಜ್ಯ ಸರಕಾರವು ಸೈಬರ್ ವಂಚಕರ ಹಾವಳಿಗೆ ಕಡಿವಾಣ ಹಾಕಲು ಮುಂದಾಗಿದ್ದು, ಸದ್ಯ ಬೆಂಗಳೂರಲ್ಲಿ 45 ಸೈಬರ್ ಪೊಲೀಸ್ ಠಾಣೆಗಳಿವೆ. ಜೊತೆಗೆ ಸಹಾಯವಾಣಿ ಸಂಖ್ಯೆ 1930 ನಿಂದಲೂ ಕೂಡ ಪ್ರಕರಣಗಳನ್ನು ದಾಖಲು ಮಾಡಿಕೊಳ್ಳಲಾಗುತ್ತಿದೆ. ಇನ್ನು ಮುಂದೆ ಸೈಬರ್ ಠಾಣೆಗಳು ಮತ್ತು 1930 ದಲ್ಲಿ ದಾಖಲಾದ ದೂರುಗಳನ್ನು ಸೈಬರ್ ಕಮಾಂಡ್ ಸೆಂಟರ್ ನಿರ್ವಹಣೆ ಮಾಡಲಾಗುವುದು. ದೂರು ದಾಖಲಿಸುವುದರ ಜೊತೆಗೆ ತನಿಖಾ ವರದಿಯನ್ನು ಕೂಡ ಸಲ್ಲಿಕೆ ಮಾಡಲಾಗುತ್ತದೆ.

ಸದ್ಯ ರಾಜ್ಯದಲ್ಲಿ 16,000ಕ್ಕೂ ಹೆಚ್ಚಿನ ಪ್ರಕರಣಗಳೂ ಇತ್ಯರ್ಥವಾಗದೆ ಬಾಕಿ ಉಳಿದಿದೆ. ಅಲ್ಲದೇ ಇಷ್ಟು ದಿನ ಪೊಲೀಸರು ಕಾನೂನು ಸುವ್ಯವಸ್ಥೆ ಜೊತೆಗೆ ಸೈಬರ್ ಪ್ರಕರಣಗಳ ತನಿಖೆಯನ್ನೂ ಮಾಡಬೇಕಿತ್ತು. ಆದರೆ, ಪೊಲೀಸರ ಮೇಲೆ ಕೆಲಸದ ಒತ್ತಡ ಹೆಚ್ಚಾಗಿ, ಸರಿಯಾದ ರೀತಿಯಲ್ಲಿ ಪ್ರಕರಣ ಬಗೆಹರಿಸಲು ಸಾಧ್ಯವಾಗಿರಲಿಲ್ಲ. ಇದೀಗ ಸೈಬರ್ ಕಮಾಂಡ್ ಸೆಂಟರ್ ರಚನೆ ಆದ ಬಳಿಕ ಕೇವಲ ಸೈಬರ್ ಪ್ರಕರಣಗಳಿಗೆ ಸಿಬ್ಬಂದಿ ನೇಮಕ ಮಾಡಲಾಗುತ್ತದೆ. ಅಲ್ಲದೆ ತಾಂತ್ರಿಕವಾಗಿ ಪರಿಣಿತಿ ಹೊಂದಿರುವ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಲಾಗುತ್ತದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

## ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ

**ಬೆಳಗಾವಿ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಸೆಪ್ಟೆಂಬರ್ 15 ರ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯ ಅಂಗವಾಗಿ ದಿನಾಂಕ: 14–09–2025 ರಂದು ಬೆಳಿಗ್ಗೆ 7.30 ಗಂಟೆಗೆ ಚೆನ್ನಮ್ಮ ವೃತ್ತದಿಂದ ಬೈಕ್ ಮತ್ತು ಸೈಕಲ್ ರ್‍ಯಾಲಿಗಳನ್ನು ಆಯೋಜಿಸಲಾಗಿದೆ.

ಬೈಕ್ ರ್‍ಯಾಲಿಯು ಚೆನ್ನಮ್ಮ ವೃತ್ತದಿಂದ ಪ್ರಾರಂಭವಾಗಿ ಬೆಂಗಳೂರಿನಲ್ಲಿ ಕೊನೆಗೊಳ್ಳಲಿದೆ. ಅದೆ ತೆರನಾಗಿ ಸೈಕಲ್ ರ್‍ಯಾಲಿಯು ನಗರದ ಚೆನ್ನಮ್ಮ ವೃತ್ತದಿಂದ ಪ್ರಾರಂಭವಾಗಿ ಸಂಭಾಜಿ ವೃತ್ತ, ಗೋಗಟೆ ವೃತ್ತ ಟಿಳಕವಾಡಿ ಮಾರ್ಗವಾಗಿ ಟಿಳಕವಾಡಿಯ 2ನೇ ರೇಲ್ವೆ ಗೇಟದಿಂದ ಮರಳಿ ಜಿಲ್ಲಾಧಿಕಾರಿಗಳ ಕಚೇರಿಗೆ ಅಂತ್ಯವಾಗಲಿದೆ. ಇದೆ ದಿನ ಬೆಳಿಗ್ಗೆ 11 ಗಂಟೆಗೆ ಬೆಳಗಾವಿಯ ಸುವರ್ಣ ವಿಧಾನಸೌಧ ಸೆಂಟ್ರೆಲ್ ಹಾಲ್‌ನಲ್ಲಿ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಜಿಲ್ಲಾ ಮಟ್ಟದ ವೇದಿಕೆ ಕಾರ್ಯಕ್ರಮವನ್ನು ಜರುಗಲಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಿಡಗುಂದಿ: ಅರ್ಜಿ ಆಹ್ವಾನ

**ಬೆಳಗಾವಿ:** ಜಿಲ್ಲೆಯ ರಾಯಭಾಗ ತಾಲೂಕಿನ ನಿಡಗುಂದಿ ಗ್ರಾಮದಲ್ಲಿ ಪ್ರಸ್ತುತ ಮೂರು ನ್ಯಾಯಬೆಲೆ ಅಂಗಡಿಗಳು ಕಾರ್ಯ ನಿರ್ವಹಿಸುತ್ತಿದ್ದು, ಸರ್ಕಾರದ ಅಧಿಸೂಚನೆಯಂತೆ ಇನ್ನೊಂದು ಹೊಸ ನ್ಯಾಯಬೆಲೆ ಅಂಗಡಿಗೆ ನಿರ್ವಹಿಸಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ದಿನಾಂಕ: 09–10–2025ರ ಒಳಗಾಗಿ ನಿಗಧಿಪಡಿಸಿದ ದಾಖಲಾತಿಗಳೊಂದಿಗೆ ರಾಯಭಾಗ ತಹಶೀಲ್ದಾರ ಕಚೇರಿಗೆ ಸಲ್ಲಿಸಬಹುದಾಗಿದೆ. ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ತಹಶೀಲ್ದಾರ ರಾಯಭಾಗ ಅಥವಾ ಉಪನಿರ್ದೇಶಕರ ಕಚೇರಿ, ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾಧಿಕಾರಿಗಳ ಕಚೇರಿ, ಬೆಳಗಾವಿ ಇಲ್ಲಿಗೆ ಸಂಪರ್ಕಿಸಬಹುದಾಗಿದೆ ಎಂದು ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ರಾಜ್ಯ ಮಟ್ಟದ ಯುವ ಸಮಾವೇಶ

**ರಾಯಬಾಗ:** ಸಮೀಪದ ನಸಲಾಪುರ ಗ್ರಾಮದಲ್ಲಿ ಡಾ. ಬಾಲಾಚಾರ್ಯ 108 ಡಾ.ಶ್ರೀ ಸಿದ್ಧಸೇನ ಮುನಿಮಹಾರಾಜರ ಸಾನ್ನಿಧ್ಯದಲ್ಲಿ ಸೆ.14 ರಂದು ಬೆಳಿಗ್ಗೆ 10–30 ಗಂಟೆಗೆ ರಾಜ್ಯ ಮಟ್ಟದ ಯುವ ಸಮಾವೇಶ ಹಮ್ಮಿಕೊಳ್ಳಲಾಗಿದೆ. ಅಂದು ಬೆಳಗಾವಿ ಶಾಸಕ ಅಭಯ ಪಾಟೀಲ,



ಹಾತಕಣಗಲಾ ಮಾಜಿ ಸಚಿವ ಹಾಲಿ ಶಾಸಕ ರಾಜೇಂದ್ರ ಪಾಟೀಲ, ಇಂಚಲಕರಂಜಿ ಶಾಸಕ ರಾಹುಲ ಅವಾಡೆ, ಮಾಜಿ ಸಂಸದ ರಾಜು ಶೆಟ್ಟಿ,ಮಾಜಿ ಶಾಸಕ ಸಂಜಯ ಪಾಟೀಲ,ಕಲ್ಲಪ್ಪಣ್ಣಾ ಮಗೆಣ್ಣವರ ಉತ್ತಮ ಪಾಟೀಲ, ಭರತೇಶ ಬನವಣೆ, ಬಾವುಸಾಹೇಬ ಪಾಟೀಲ, , ಡಾ. ಎನ್ ಎ ಮಗದುಮ್,ರವಿರಾಜ ಪಾಟೀಲ ಧೂಳಗೌಡ ಪಾಟೀಲ, ಸೇರಿದಂತೆ ಅನೇಕ ಗಣ್ಯರು ಭಾಗವಹಿಸಲಿದ್ದಾರೆ, ಸಮಾಜದ ಹೆಚ್ಚಿನ ಯುವಕರು ಹಾಜರಾಗಬೇಕು ಎಂದು ಚಾತುರ್ಮಾಸ ಕಮಿಟಿ ಹಾಗೂ ಸಕಲ ಜೈನ ಸಮಾಜ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಿಂದುಳಿದ ವರ್ಗಗಳ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ಯಶಸ್ವಿಗೊಳಿಸಿ




**ಕಾರವಾರ:** ರಾಜ್ಯ ಸರ್ಕಾರದ ಮಹತ್ತರ ಯೋಜನೆಯಾದ ರಾಜ್ಯ ಹಿಂದುಳಿದ ಆಯೊಗವು ನಡೆಸುತ್ತಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ –2025 ನ್ನು ಉತ್ತರ ಕನ್ನಡ ಜಿಲ್ಲೆಯಲ್ಲಿ ಜಿಲ್ಲಾ ಮಾಸ್ಟರ್ ಟ್ರೇನರ್‌ಗಳು ಹಾಗೂ ಗಣತಿದಾರರು ಜಾವಾಬ್ದಾರಿಯಿಂದ ಕರ್ತವ್ಯ ನಿರ್ವಹಿಸಿ, ಯಶಸ್ವಿಗೊಳಿಸಬೇಕೆಂದು ಅಪರ ಜಿಲ್ಲಾಧಿಕಾರಿ ಸಾಜೀದ್ ಮುಲ್ಲಾ ಹೇಳಿದರು.

ಅವರು ಶುಕ್ರವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಉತ್ತರ ಕನ್ನಡ ಇವರ ಸಂಯುಕ್ತ ಆಶ್ರಯದಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ–2025 ರ ಜಿಲ್ಲಾ ಮಟ್ಟದ ಮಾಸ್ಟರ್ ಟ್ರೇನರಗಳಿಗೆ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಮಧು ಸೂಧನ್ ಅವರ ಅಧ್ಯಕ್ಷತೆಯಲ್ಲಿ ಕರ್ನಾಟಕ ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಅಡಿಯಲ್ಲಿ ರಾಜ್ಯ ಸರ್ಕಾರ ಆದೇಶದಂತೆ ಸೆ.22 ರಿಂದ ಆ.27 ರವರೆಗೆ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ –2025 ಯನ್ನು ಮನೆ ಮನೆ ಸಮೀಕ್ಷೆ ನಡೆಸಲಾಗುತ್ತಿಸದ್ದು , ಇಂದು ಜಿಲ್ಲಾ ಮಟ್ಟದ ಮಾಸ್ಟರ್ ಟ್ರೇನರ್‌ಗಳಿಗೆ ತರಬೇತಿ ನೀಡಲಾಗಿದ್ದು, ಕೈಪಿಡಿ ಮತ್ತು ಆ್ಯಪ್ ನೀಡಲಾಗುತ್ತದೆ. ತಾವುಗಳು ತಾಲೂಕು ಮಟ್ಟದಲ್ಲಿ ಗಣತಿದಾರರಿಗೆ ಶಾಲಾ ಅವಧಿ ಹೊರತು ಪಡಿಸಿ ರಜಾ ಅವಧಿಯಲ್ಲಿ ಪ್ರತಿ 50 ಗಣತಿದಾರರಿಗೆ ಒಂದು ಗುಂಪನ್ನು ಮಾಡಿ ತರಬೇತಿ ನೀಡಿ ಸಮೀಕ್ಷೆ ಯಶಸ್ವಿಗೋಳಿಸುವುದು ತಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದರು.

ಈಗಾಗಲೇ ಹೆಸ್ಕಾಂ ಇಲಾಖೆಯವರು ವಿದ್ಯುತ್ ಮೀಟರ್‌ಗಳಿಗೆ ರೀಡರ್‌ಗಳ ಮೂಲಕ ಜೀಯೋ ಟ್ಯಾಗ್ ಅಳವಡಿಸಿ ಮನೆಗೆ ಯು.ಎಚ್ ನಂಬರ್ ಅಳವಡಿಸಲಾಗುತ್ತಿದೆ. ಪ್ರತಿ ಗಣತಿದಾರರು ಸಮಾರು 150 ಮನೆಗಳಿಗೆ ಸಮಿಕ್ಷೆ ಮಾಡಬೇಕಾಗಿದೆ. ಈ ಸಮೀಕ್ಷೆ ನಿಗಧಿತ ಅವಧಿಯೋಳಗೆ ಮುಗಿಸಲು ಈಗಾಗಲೇ ಆಶಾ ಕಾರ್ಯಕರ್ತೆಯರು ಹಾಗೂ ಎನ್. ಎಸ್.ಎಸ್ ಅವರು ಗಣತಿದಾರರು ಕೇಳುವ 60 ಪ್ರಶ್ನೇಗಳ ಪ್ರತಿ ತೆಗೆದುಕೊಂಡು ಎಲ್ಲಾ ಮನೆಗಳಿಗೆ ತೆರಳಿ ಸಮೀಕ್ಷೆ ಅರಿವು ಮೂಡಿಸಲಾಗುತ್ತಿದೆ ಎಂದರು.

ಈ ಗಣತೀಯು ಇಡೀ ದೇಶದಲ್ಲಿ ಮಾದರಿ ಗಣತಿಯಾಗಲಿದ್ದು, ಸುಮಾರು ನೂರು ವರ್ಷಗಳ ಹಿಂದೆ ಜಾತಿವಾರು ಗಣತಿಗಳು ಆಗಿದ್ದು, ಆ ನಂತರ ನಿರ್ದಿಷ್ಟವಾಗಿ, ಗಮರ್ನಹವಾಗಿ ಎಲ್ಲಾ ಅಂಶಗಳನ್ನು ಒಳಗೊಂಡ ಒಂದು ಗಣತಿ ಇದಾಗಿದೆ. ಪ್ರತಿ ಹತ್ತು ವರ್ಷಗಳಿಗೊಮ್ಮೆ ಗಣತಿಯು ನಡೆಯುತ್ತದೆ. 2011 ರ ನಂತರ ಯಾವುದೇ ಗಣತಿಯೂ ಆಗಲ್ಲಿಲ್ಲ ಆದ ಕಾರಣ ರಾಜ್ಯ ಸರ್ಕಾರಕ್ಕೆ ಯೋಜನೆಗಳನ್ನು ರೂಪಿಸಲು ಕಷ್ಟವಾಗುತ್ತಿದೆ ಎಂದರು.

ಎಲ್ಲಾ ಇಲಾಖೆಗಳಿಗೆ ಸಹಾಯವಾಗುವಂತೆ ಯೋಜನೆಗಳನ್ನು ರೂಪಿಸುವುದಕ್ಕಾಗಿ ಈ ಸಮೀಕ್ಷೆಯನ್ನು ನಡೆಸಲಾಗುತ್ತಿದೆ. ಈ ಸಮೀಕ್ಷೆ ಯಲ್ಲಿ ಯಾವುದೇ ಹಸ್ತಕ್ಷೇಪವಿಲ್ಲದೇ, ತಿದ್ದುಪಡಿ ಇಲ್ಲದೆ ಆಪ್ಯ್ ಮೂಲಕ ಮಾತ್ರ ಒಂದೊಂದು ಕುಟುಂಬದ ಸಮಗ್ರ ಮಾಹಿತಿಯನ್ನು, ದತ್ತಾಂಶಗಳನ್ನು ಗಣತಿ ಮೂಲಕ ಸಂಗ್ರಹ ಮಾಡಬಹುದು ಎಂದರು.

ಎಲ್ಲಾ ಗಣತಿದಾರರು ಜವಬ್ದಾರಿಯಿಂದ ಮನೆಗಳ ಸಮೀಕ್ಷೆಯನ್ನು ಮಾಡಬೇಕು. ಜನರಲ್ಲಿ ಈ ಗಣತಿಯ ಬಗ್ಗೆ ಅರಿವು, ಜಾಗೃತಿ ಮೂಡಿಸಬೇಕು ಹಾಗೂ ಸರ್ಕಾರದ ಸೂಚನೆಗಳನ್ನು ಪಾಲಿಸಬೇಕು ಎಂದರು.ಕಾರ್ಯಕ್ರಮದಲ್ಲಿ ರಾಜ್ಯ ಮಟ್ಟದ ಮಾಸ್ಟರ್ ತರಬೇತುದಾರಿಂದ ಜಿಲ್ಲಾಮಟ್ಟದ ತರಬೇತುದಾರಿಗೆ ಸಮೀಕ್ಷೆ ತರಬೇತಿ ನೀಡಲಾಯಿತು. ಕಾರ್ಯಗಾರದಲ್ಲಿ ರಾಜ್ಯ ಮತ್ತು ಜಿಲ್ಲಾ ಮಟ್ಟದ ತರಬೇತಿದಾರರು ಮತ್ತು ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಕಾಮಗಾರಿಗಳ ಪರಿವೀಕ್ಷಣೆ

**ಕಾರವಾರ:** ಪ್ರಧಾನ ಮಂತ್ರಿ ಗ್ರಾಮ ಸಡಕ ಯೋಜನೆ ಅಡಿ ಉತ್ತರ ಕನ್ನಡ ಜಿಲ್ಲೆಯಲ್ಲಿ ಪ್ರಗತಿಯಲ್ಲಿರುವ ಮತ್ತು ಪೂರ್ಣಗೊಂಡ ರಸ್ತೆ ಕಾಮಗಾರಿಗಳನ್ನು ರಾಷ್ಟ್ರೀಯ ಗುಣ ನಿಯಂತ್ರಕ ಸುಶೀಲಕುಮಾರ ಪಂಡಿತ ರವರು ಸೆ.18 ರಿಂದ ಸೆ.22 ರವರೆಗೆ ಉತ್ತರ ಕನ್ನಡ ಜಿಲ್ಲೆಯಲ್ಲಿನ ಪ್ರಧಾನ ಮಂತ್ರಿ ಗ್ರಾಮ ಸಡಕ ಯೋಜನೆ ಕಾಮಗಾರಿಗಳ ಪರಿವೀಕ್ಷಣೆ ಮಾಡಲಿದ್ದಾರೆ. ಕಾಮಗಾರಿಗಳ ಗುಣನಿಯಂತ್ರಣ ವ್ಯವಸ್ಥೆಯಲ್ಲಿ ಪಾರದರ್ಶಕತೆ ತರುವ ದೃಷ್ಠಿಯಿಂದ ಸಾರ್ವಜನಿಕರು ಯೋಜನಾ ವಿಭಾಗ ಕಚೇರಿ ಸಂ:08382–221521 ಅಥವಾ ಸಂ:9419186625 ನ್ನು ಸಂಪರ್ಕಿಸುವಂತೆ ಯೋಜನಾ ವಿಭಾಗದ ಕಾರ್ಯನಿರ್ವಾಹಕ ಇಂಜಿನೀಯರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ತಾಲೂಕ ಮಟ್ಟದ ಗೀತಗಾಯನ ಸ್ಪರ್ಧೆ

# ಮಕ್ಕಳಲ್ಲಿ ಏಕತೆಯ ಭಾವ ಮೂಡಿಸಿ

**ಇಂಡಿ:** ಭಾರತದಂತಹ ಬಹುಭಾಷಿಕ, ಬಹು ಸಂಸ್ಕೃತಿಯ ವಿವಿಧ ಜಾತಿ, ಮತ, ಧರ್ಮಗಳಿರುವ ದೇಶದಲ್ಲಿ ರಾಷ್ಟ್ರಭಕ್ತಿ ಭಾವ ಅತ್ಯವಶ್ಯಕವಾಗಿದ್ದು, ವಸುದೈವ ಕುಟುಂಬಕಂ ಮಂತ್ರವನ್ನು ಮಕ್ಕಳಲ್ಲಿ ಮೂಡಿಸಬೇಕಾಗಿದೆ ಎಂದು ರಾಜ್ಯ ಸಂಪನ್ಮೂಲ ವ್ಯಕ್ತಿ ಜಗದೀಶ ಬೋಳಸೂರ ಹೇಳಿದರು.

ತಾಲೂಕಿನ ಹಳಗುಣಕಿ ಗ್ರಾಮದ ಕರ್ನಾಟಕ ಪಬ್ಲಿಕ್ ಪ್ರೌಢ ಶಾಲೆಯಲ್ಲಿ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸ್ಥಳೀಯ ಸಂಸ್ಥೆ ಇಂಡಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಾಗೂ ಕ್ಷೇತ್ರ ಸಮನ್ವಯಾಧಿಕಾರಿಗಳ ಕಾರ್ಯಾಲಯ ಇಂಡಿ ವತಿಯಿಂದ ಜರುಗಿದ ತಾಲೂಕ ಮಟ್ಟದ ದೇಶಭಕ್ತಿ ಗೀತೆಗಳ ಗೀತಗಾಯನ ಸ್ಪರ್ಧೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ದೇಶಭಕ್ತಿಯು ದೇಶದ ಸಮಗ್ರತೆ, ಸೋದರತೆ ಮತ್ತು ಸಮಾನತೆಗೆ ಪ್ರಮುಖ ಪ್ರೇರಣೆಯಾಗುತ್ತದೆ. ಸ್ಕೌಟ್ಸ್, ಗೈಡ್ಸ್ ಮೂಲಕ ಮಕ್ಕಳಲ್ಲಿ ದೇಶಾಭಿಮಾನ ಜಾಗೃತಗೊಳಿಸಬೇಕಾಗಿದೆ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ವಿಜಯಪುರ ಡೈಟ್ ಕಾಲೇಜಿನ ಉಪನ್ಯಾಸಕ ಶಂಕರ ಲಮಾಣಿ ಮಾತನಾಡಿ, ಮಕ್ಕಳು ಸ್ವಯಂ–ಸೇವೆಯ ಮೂಲಕ ವ್ಯಕ್ತಿತ್ವ ವಿಕಸನ ಮಾಡಿಕೊಂಡು, ದೇಶಕ್ಕಾಗಿ ನಿಷ್ಠೆ ತೋರಿಸಬೇಕು. ತಮ್ಮ ದೈಹಿಕ, ಬೌದ್ಧಿಕ, ಭಾವನಾತ್ಮಕ, ಸಾಮಾಜಿಕ ಮತ್ತು ಆಧ್ಯಾತ್ಮಿಕ ಸಾಮರ್ಥ್ಯಗಳನ್ನು ಸ್ಕೌಟ್ಸ್–ಗೈಡ್ಸ್ ನಿಂದ ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

ಸ್ಕೌಟ್ ಮಾಸ್ಟರ್ ಸಂತೋಷ ಬಂಡೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಶಾಲೆಯ ಉಪ ಪ್ರಾಂಶುಪಾಲ ಎಸ್ ಎಸ್ ಕರಜಗಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸಹಾಯಕ ಸಂಘಟನಾ ಆಯುಕ್ತ ಡಿ ಬಿ ಅತ್ತಾರ, ಎಸ್ ಡಿ ಎಂ ಸಿ ಉಪಾಧ್ಯಕ್ಷ ಸದಾಶಿವ ಮಾದರ, ಗೈಡ್ ಕ್ಯಾಪ್ಟನ್ ಶ್ರೀದೇವಿ ಜೀರಗಾಳ ಸೇರಿದಂತೆ ತಾಲೂಕಿನ ಸ್ಕೌಟ್ಸ್–ಗೈಡ್ಸ್ ಶಿಕ್ಷಕರು ಭಾಗವಹಿಸಿದ್ದರು.ಸ್ಕೌಟ್ ಮಾಸ್ಟರ್ ಸಂಗಮೇಶ ಬಂಡೆ ಸ್ವಾಗತಿಸಿದರು.ಕನ್ನಡ ಶಿಕ್ಷಕ ಬಸವರಾಜ ದಶವಂತ ನಿರೂಪಿಸಿದರು. ತಾಲೂಕ ಕಾರ್ಯದರ್ಶಿ ಷಹಾಜಿ ಪಾಟೀಲ ವಂದಿಸಿದರು.ಇದೇ ಸಂದರ್ಭದಲ್ಲಿ ದೇಶಭಕ್ತಿ ಗೀತೆಗಳ ವಿವಿಧ ವಿಭಾಗದಲ್ಲಿ ಪ್ರಥಮ ಸ್ಥಾನ ಪಡೆದು ಜಿಲ್ಲಾ ಹಂತಕ್ಕೆ ಆಯ್ಕೆಯಾದ ಮಕ್ಕಳಿಗೆ ಅಭಿನಂದನಾ ಪತ್ರಗಳನ್ನು ನೀಡಿ ಗೌರವಿಸಲಾಯಿತು. ತಾಲೂಕ ಸಂಸ್ಥೆಯ ಅಧ್ಯಕ್ಷ ಡಾ. ಮಂಜುನಾಥ ಕೋಟೆಣ್ಣವರ ಕೊಡಮಾಡಿದ ಸಿಹಿಯನ್ನು ಮಕ್ಕಳಿಗೆ ವಿತರಿಸಲಾಯಿತು.



## ಜಿಲ್ಲಾ ಮಟ್ಟಕ್ಕೆ ಆಯ್ಕೆ

**ಬೈಲಹೊಂಗಲ:** ತಾಲೂಕಿನ ಹೊಳಿನಾಗಲಾಪೂರ ಗ್ರಾಮದ ಸರಕಾರಿ ಮಾದರಿ ಹಿರಿಯ ಪ್ರಾಥಮಿಕ ಕನ್ನಡ ಶಾಲೆಯ ವಿದ್ಯಾರ್ಥಿ ಪವನ ಕಲ್ಲಪ್ಪ ಕಿಳ್ಳಿಕೇತರ ಇವನು ತಾಲೂಕಾ ಮಟ್ಟದಲ್ಲಿ ಕೆಆರ್‌ಸಿಇಎಸ್ ಕ್ರೀಡಾಂಗಣದಲ್ಲಿ ಈಚೆಗೆ ನಡೆದ ಕ್ರೀಡಾಕೂಟದಲ್ಲಿ ಚಕ್ರ ಎಸೆತದಲ್ಲಿ ಸಾಧನೆ ಮಾಡಿ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾನೆ. ದೈಹಿಕ ಶಿಕ್ಷಕಿ ಪಿ.ವಾಯ್.ಶಿಂತ್ರಿ ಮಾರ್ಗದರ್ಶನ ನೀಡಿದ್ದರು. ಇವನ ಸಾಧನೆಗೆ ಶಾಲಾ ಶಿಕ್ಷಕ ಸಿಬ್ಬಂದಿ, ಅಧಿಕಾರಿ ವರ್ಗ, ಗ್ರಾಮಸ್ಥರು ಅಭಿನಂದಿಸಿದ್ದಾರೆ.




## ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ: ವಿದ್ಯಾರ್ಥಿಗಳಿಂದ ಅರಿವು

**ಯರಗಟ್ಟಿ:** 'ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ಸೆ.22ರಿಂದ ಆರಂಭವಾಗಲಿದೆ. ಇದಕ್ಕೆ ಪೂರ್ವಭಾವಿಯಾಗಿ ಸೆ.10ರಿಂದ 19ರವರೆಗೆ ಎನ್‌ಎಸ್‌ಎಸ್ ವಿದ್ಯಾರ್ಥಿಗಳು ಮನೆಮನೆಗೆ ಭೇಟಿ ನೀಡಿ ಸಮೀಕ್ಷೆಗೆ ಅಗತ್ಯವಿರುವ ದಾಖಲೆಗಳನ್ನು ಸಾರ್ವಜನಿಕರು ಸಿದ್ಧಪಡಿಸಿ ಇಟ್ಟುಕೊಳ್ಳುವಂತೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಅರಿವು ಮೂಡಿಸಿದರು.

ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಸಂಬಂಧ ಡಾ. ರಾಜಶೇಖರ ಬಿರಾದಾರ ಅವರು ಮಾತನಾಡಿದರು. 'ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ರಾಜ್ಯದ ಎಲ್ಲ ಜನರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳನ್ನು ತಿಳಿದುಕೊಳ್ಳುವ ಕಾರ್ಯವಾಗಿದೆ. ರಾಜ್ಯದ ನೀತಿ ನಿರೂಪಣೆಯನ್ನು ಕೈಗೊಳ್ಳಲು ಇದು ಆಧಾರವಾಗಿರುತ್ತದೆ. ಸಮೀಕ್ಷೆ ಕಾರ್ಯ ಈ ನಾಡಿನ ಸೇವೆಯ ಭಾಗವಾಗಿದೆ.

ಸಮೀಕ್ಷಾ ಕಾರ್ಯ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ನಮ್ಮ ನಿಮ್ಮೆಲ್ಲರ ಜವಾಬ್ದಾರಿ ಹೆಚ್ಚಾಗಿದೆ. ಇದಕ್ಕಾಗಿ ಬದ್ಧತೆಯಿಂದ ಕೆಲಸ ಮಾಡಬೇಕಾದ ಅವಶ್ಯಕತೆ ಇದೆ' ಎಂದರು.

ಈ ವೇಳೆ ಪ. ಪಂ. ಮುಖ್ಯಾಧಿಕಾರಿ ಮಹೇಶ ಭಜಂತ್ರಿ, ಪ. ಪಂ. ಕಿರಿಯ ಆರೋಗ್ಯ ನಿರೀಕ್ಷಕ ನಾಗರಾಜ ಚವಡಪ್ಪನವರ, ಮಾಮನಿ ಕಾಲೇಜಿನ ಪ್ರಾಧ್ಯಾಪಕರಾದ ಶಂಕರಪ್ಪ ಲಗಳಿ, ಉಪನ್ಯಾಸಕರಾದ ವಿಜಲಕ್ಷ್ಮೀ ಬದ್ದಿ, ಶಿದ್ಲಿಂಗಪ್ಪ ಗಾಳಿ, ಮಹಾಸೇಶ ಕೆ. ವೈ, ಅರ್ಷಾನ ಖಾಷಾನಟ್ಟಿ, ಪ. ಪಂ. ಸಿಬಂದ್ದಿಯಾದ ಕೆ. ಬಿ. ಬೆಣ್ಣಿ, ಆನಂದ ಬೆಳವಿ, ಮಲ್ಲಪ್ಪ ಬಾರ್ಕಿ, ಸ್ಥಳಿಯರಾದ ರಾಜು ಬೆಣ್ಣಿ, ಸಂಜು ಮಿಕಲಿ, ಹನಮಂತ ಹಣಬರ, ಶ್ರೀಶೈಲ ವಾಲಿ, ಬಾಬು ಪಾಳೇಕರ ಸೇರಿದಂತೆ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಮುನವಳ್ಳಿ: ಪ್ರಶಸ್ತಿ ಪುರಸ್ಕೃತರಿಗೆ ಸನ್ಮಾನ

**ಯರಗಟ್ಟಿ:** ಸಮೀಪದ ಮುನವಳ್ಳಿ ಪಟ್ಟಣದ ಸಮಾಜ ಸೇವಾ ಸಂಸ್ಥೆಯಾದ ಇನ್ನರ್‌ವ್ಹೀಲ್ ಕ್ಲಬ್ ವತಿಯಿಂದ ವಿ.ಪಿ.ಜೇವೂರ ಸ್ಮಾರಕ ಮೂಕ ಮತ್ತು ಕಿವುಡು ಮಕ್ಕಳ ವಸತಿ ಶಾಲೆಯಲ್ಲಿ ಪ್ರಶಸ್ತಿ ಪುರಸ್ಕೃತರಾದ ಎಂ.ಜಿ.ಹೊಸಮಠ, ಸುಜಾತಾ ರೇಣುಕಪ್ರಸಾದ ಜಂಬಗಿ, ಮೀನಾಕ್ಷಿ ಮುರನಾಳ, ಅನ್ನಪೂರ್ಣ ಲಂಬೂನವರ, ರಮೇಶ ಮುರಂಕರ, ಆರ್.ಎಚ್.ಪಾಟೀಲನ್ನು ಸನ್ಮಾನಿಸಲಾಯಿತು.

ಸಂಸ್ಥೆಯ ಅಧ್ಯಕ್ಷೆ ಶಾರದಾ ದ್ಯಾಮನಗೌಡರ ಮಾತನಾಡಿ ಪ್ರಶಸ್ತಿಗಳಿಂದ ವೃತ್ತಿ ಗೌರವ ಹೆಚ್ಚುತ್ತದೆ, ಸಮಾಜ ಅವರಿಂದ ಹೆಚ್ಚಿನದನ್ನು ನಿರೀಕ್ಷಿಸುತ್ತದೆ, ಪ್ರಶಸ್ತಿ ಪುರಸ್ಕೃತರು ಇನ್ನಷ್ಟು ಕ್ರಿಯಾಶೀಲರಾಗಿ ಕಾರ್ಯನಿರ್ವಹಿಸಿ ಇನ್ನೂ ಹಲವಾರು ಪ್ರಶಸ್ತಿಗಳಿಗೆ ಭಾಜನರಾಗಲಿ ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ಸುಷ್ಮಾ ಗೋಮಾಡಿ, ಭಾರತಿ ಕಟಿಗೆನ್ನವರ, ಅಶ್ವಿನಿ ದಶಮನಿ, ವಿಜಯಲಕ್ಷ್ಮೀ ಮುರಂಕರ, ಅನುರಾಧಾ ಬೆಟಗೇರಿ, ಗೌರಿ ಜಾವೂರ, ಸುಮಾ ಯಲಿಗಾರ, ಶೀಲಾ ಕರೀಕಟ್ಟಿ, ಸಹನಾ ನಲವಡೆ, ಪ್ರೀತಿ ಕರೀಕಟ್ಟಿ, ಉಮಾ ಹಂಪಣ್ಣವರ, ಗೀತಾ ಜಿಡ್ಡಿಮನಿ, ಮುಕ್ತಾ ಪಶುಪತಿಮಠ, ಸುಜಾತಾ ಕೋರಿ, ಲಲಿತಾ ಕಾಮಶೆಟ್ಟಿ, ಪೂಜಾ ಗೋಪಶೆಟ್ಟಿ, ಸುಜಾತಾ ಪಾಟೀಲ, ವೈಷ್ಣವಿ ಶೆಟ್ಟರ, ಶೀತಲ ಗೋಮಾಡಿ, ಶಿವು ಕಾಟಿ, ಸುಜಾತಾ ಬಡ್ಲಿ, ಜಂಬಗಿ, ಮಂಜುನಾಥ ಮಾವಿನಕಟ್ಟಿ, ಶಿಕ್ಷಕರು ಸೇರಿದಂತೆ ಇನ್ನರ್‌ವ್ಹೀಲ್ ಕ್ಲಬ್‌ದ ಸದಸ್ಯೆಯರು ಇದ್ದರು.





**ಬೈಲಹೊಂಗಲ:** ಸಮೀಪದ ಹೂಲಿಕೇರಿ ತಾಂಡೆಯ ಸರಕಾರಿ ಕಿರಿಯ ಪ್ರಾಥಮಿಕ ಕನ್ನಡ ಶಾಲೆಯ ಪ್ರಭಾರಿ ಮುಖ್ಯೋಪಾಧ್ಯಾಯ ಅಶೋಕ ನಾಗಪ್ಪ ಶೀಲವಂತರವರಿಗೆ ರಾಜ್ಯ ಕೆಪಿಸಿಸಿ ಪಕ್ಷದ ಸಂಘಟನೆ ಅಡಿಯಲ್ಲಿ ಶಿಕ್ಷಕರ ಘಟಕ ಬೆಂಗಳೂರ ನೀಡುವ ರಾಜೀವ ಗಾಂಧಿ ರಾಜ್ಯ ಮಟ್ಟದ ಶ್ರೇಷ್ಠ ಶಿಕ್ಷಕ ಪ್ರಶಸ್ತಿ ದೊರೆತಿದೆ. ಸ. 5 ರಂದು ಬೆಂಗಳೂರಿನ ಕ್ವಿನ್ಸ್ ರಸ್ತೆಯ ಕೆಪಿಸಿಸಿಯ ಭಾರತ ಜೋಡೋ ಭವನದಲ್ಲಿ ನಡೆದ ಸಾಧಕರ ಸನ್ಮಾನದಲ್ಲಿ ಗಣ್ಯರು ಇವರಿಗೆ ಪ್ರಶಸ್ತಿ ನೀಡಿ ಗೌರವಿಸಿದ್ದಾರೆ.

## ಕಾರವಾರ ನಗರಸಭೆಯ ಸಮಾನ್ಯ ಸಭೆ

**ಕಾರವಾರ:** ಕಾರವಾರ ನಗರಸಭೆಯ ವಿಶೇಷ ಸಾಮಾನ್ಯ ಸಭೆಯು ಸೆ.15 ರಂದು ಬೆಳಗ್ಗೆ 11 ಗಂಟೆಗೆ ನಗರಸಭೆ ಸಭಾಂಗಣದಲ್ಲಿ ನಡೆಯಲಿದೆ ಎಂದು ನಗರಸಭೆ ಪೌರಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೊಸ ಸಂಶೋಧನೆ ರಾಷ್ಟ್ರದ ಅಭಿಧ್ಧಿಗೆ ಪೂರಕ: ಡಾ.ಕೃಷ್ಣಮೂರ್ತಿ

**ಬೆಳಗಾವಿ:** ವೇಗವಾಗಿ ಅಭಿವೃದ್ಧಿ ಹೊಂದುತ್ತಿರುವ ತಂತ್ರಜ್ಞಾನ ಮತ್ತು ಪ್ರತಿ ವರ್ಷ ನೀಡಲಾಗುವ ಪೇಟೆಂಟ್‌ಗಳ ಸಂಖ್ಯೆ ಹೆಚ್ಚುತ್ತಿರುವುದರಿಂದ, ಪೇಟೆಂಟ್‌ಗಳು ಮತ್ತು ಪೇಟೆಂಟ್ ಹೊಂದಿರುವವರ ಹಕ್ಕುಗಳ ರಕ್ಷಣೆ ಮತ್ತು ಜಾರಿಗೊಳಿಸುವಿಕೆಯು ಅತ್ಯಂತ ಮಹತ್ವದ್ದಾಗಿದೆ. ಪೇಟೆಂಟ್ ಹೊಂದಿರುವವರ ಈ ಹಕ್ಕುಗಳನ್ನು ರಕ್ಷಿಸುವಲ್ಲಿ ಕಾನೂನು ಸಮುದಾಯವು ದೊಡ್ಡ ಪಾತ್ರವನ್ನು ವಹಿಸುತ್ತದೆ ಎಂದು ಬೆಂಗಳೂರಿನ ಜೈನ್ ವಿಶ್ವವಿದ್ಯಾಲಯದ ಸಿಎಂಎಸ್ ಬಿಸಿನೆಸ್ ಸ್ಕೂಲ್ ಪ್ರಾಧ್ಯಾಪಕರಾದ ಡಾ. ರವಿಚಂದ್ರನ್ ಕೃಷ್ಣಮೂರ್ತಿ ಹೇಳಿದರು.

ಇಲ್ಲಿನ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದಲ್ಲಿ ರಾಷ್ಟ್ರೀಯ ಸಾಂಸ್ಥಿಕ ಶ್ರೇಯಾಂಕ ಚೌಕಟ್ಟು ಘಟಕದ ಅಡಿಯಲ್ಲಿ (ಪಿಎಂ–ಉಷಾ (ಮೇರು) ಅಡಿಯಲ್ಲಿ) ಸಂಶೋಧನಾ ವಿಧಾನಗಳು ಮತ್ತು ಪೇಟೆಂಟ್ ಫೈಲಿಂಗ್ ಕುರಿತು ಎರಡು ದಿನಗಳ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಹೊಸ ಸಂಶೋಧನಾ ರಾಷ್ಟ್ರದ ಅಭಿಧ್ಧಿಗೆ ಪೂರಕ, ಸಂಶೋಧನಾ ಹಾದಿಯಲ್ಲಿ ನಾವು ಸಾಗಬೇಕು, ಬೇಕಾದ ಕಲಿಕೆ ಅದರ ಮಹತ್ವವನ್ನು ಅರಿತುಕೊಂಡು ಯಶಸ್ಸು ಪಡೆದುಕೊಳಲು ಸಾಧ್ಯವಾಗುವುದು ಇದನ್ನು ಗಮನದಲ್ಲಿಟ್ಟುಕೊಂಡು, ಕಲಿಯುವವರಿಗೆ, ವಿಶೇಷವಾಗಿ ವಕೀಲರು ಮತ್ತು ಕಾನೂನು ವಿದ್ಯಾರ್ಥಿಗಳಿಗೆ ಪೇಟೆಂಟ್ ಕಾನೂನಿನಲ್ಲಿ ತಮ್ಮ ವೃತ್ತಿಜೀವನವನ್ನು ನಿರ್ಮಿಸಲು ಸಹಾಯ ಮಾಡಲು ಈ ಕೋರ್ಸ್ ಅನ್ನು ವಿನ್ಯಾಸಗೊಳಿಸಲಾಗಿದೆ.



ಕಾನೂನಿನೊಂದಿಗೆ ಪರಿಚಯ ಮಾಡಿಕೊಳ್ಳಲು ಅಥವಾ ವಿಷಯದ ಬಗ್ಗೆ ತಮ್ಮ ಜ್ಞಾನವನ್ನು ಉತ್ಕೃಷ್ಟಗೊಳಿಸಲು ಬಯಸುವ ವೃತ್ತಿಪರರಿಗೂ ಈ ಕೋರ್ಸ್ ಪ್ರಯೋಜನವನ್ನು ನೀಡುತ್ತದೆ.

ಸಂಶೋಧನಾ ಸಮಗ್ರತೆಯು ನೈತಿಕತೆ, ನಿಖರತೆ ಮತ್ತು ವಿಶ್ವಾಸಾರ್ಹತೆಯನ್ನು ಒಳಗೊಂಡಿರುತ್ತದೆ, ಇದು ಸಂಶೋಧನೆಯ ಗುಣಮಟ್ಟವನ್ನು ಉತ್ತಮಗೊಳಿಸಲು ಅಗತ್ಯವಾಗಿದೆ. ಸಂಶೋಧನಾ ಸಮಗ್ರತೆ ಸಂಶೋಧನೆಯ ಫಲಿತಾಂಶಗಳ ವಿಶ್ವಾಸಾರ್ಹತೆಯನ್ನು ಖಾತ್ರಿಪಡಿಸುತ್ತದೆ, ಇದು ಉತ್ತಮ ಗುಣಮಟ್ಟದ ಪ್ರಕಟಣೆಗಳಿಗೆ ಅಡಿಪಾಯವಾಗಿದೆ. ಇದರ ಅರಿವು ಮೂಡಿಸುವ ಮೂಲಕ ಅಧ್ಯಾಪಕ ಸದಸ್ಯರು ಮತ್ತು ಸಂಶೋಧನಾ ವಿದ್ಯಾರ್ಥಿಗಳಿಗೆ ಅಧಿಕಾರ ನೀಡುವುದು ಈ ಕಾರ್ಯಾಗಾರದ ಉದ್ದೇಶವಾಗಿದೆ. ಬೋಧನಾ ವೃತ್ತಿಯು ಡಿಜಿಟಲ್ ಯುಗದ ಬೇಡಿಕೆಗಳಿಗೆ ಹೇಗೆ ಹೊಂದಿಕೊಳ್ಳುತ್ತಿದೆ ಎಂಬುದನ್ನು ಮನದಟ್ಟು ಮಾಡಿದರು. ಸಂಶೋಧನಾ ಪ್ರಕಟಣೆ, ರಕ್ಷಣೆ ಮತ್ತು ಪ್ರಸಾರದಲ್ಲಿ ಡಿಜಿಟಲ್ ಪರಿಕರಗಳ ಪ್ರಾಮುಖ್ಯತೆಯನ್ನು ಅವರು ಪ್ರತಿಪಾದಿಸಿದರು. ಅಲ್ಲದೆ, ವಿದ್ವಾಂಸರಲ್ಲಿ ಪೇಟೆಂಟ್ ಬಗ್ಗೆ ತುರ್ತು ಅರಿವಿನ ಅಗತ್ಯವನ್ನೂ ಅವರು ತಿಳಿಸಿದರು.

ವಿಶ್ವವಿದ್ಯಾಲಯದ ಕುಲಸಚಿವರಾದ ಸಂತೋಷ್ ಕಾಮಗೌಡ, ಕ.ಆ.ಸೇ, ಅವರು ಮಾತನಾಡಿ, ಸಂಶೋಧನಾ ಮೂಲಸೌಕರ್ಯವನ್ನು ಬಲಪಡಿಸುವಲ್ಲಿ ಮತ್ತು ಪೇಟೆಂಟ್ ನಿಯಮಗಳಿಗೆ ಅನುಸರಣೆಯನ್ನು ಖಚಿತಪಡಿಸುವಲ್ಲಿ ಆಡಳಿತಾತ್ಮಕ ಜವಾಬ್ದಾರಿಯಾಗಿದೆ ಎಂದು ಹೇಳಿದರು. ಸಿಂಡಿಕೇಟ್ ಸದಸ್ಯರಾದ ರಫಿ ಭಂಡಾರಿ ಅವರು ಸಂಸ್ಥೆಗಳು ನಾವೀನ್ಯತೆಯ ಸಂಸ್ಕೃತಿಯನ್ನು ಬೆಳೆಸಲು ಮತ್ತು ಸಂಶೋಧನಾ ವಿದ್ಯಾರ್ಥಿಗಳಿಗೆ ಕಲ್ಪನೆಯ ಹಂತದಿಂದ ಮೂಲಮಾದರಿ ಮತ್ತು ಅಂತಿಮವಾಗಿ ಯಶಸ್ವಿ ಪೇಟೆಂಟ್ ಫೈಲಿಂಗನತ್ತ ಮಾರ್ಗದರ್ಶನ ನೀಡುವಂತೆ ಕರೆ ನೀಡಿದರು.

ಮಾನ್ಯ ಕುಲಪತಿಗಳಾದ ಪ್ರೊ. ಸಿ. ಎಂ. ತ್ಯಾಗರಾಜ ಅವರು ಮಾತನಾಡಿ ಸಂಶೋಧನೆಯು ವಿಶ್ವವಿದ್ಯಾಲಯಗಳ ಜೀವನಾಡಿಯಾಗಿದೆ ಮತ್ತು ಯಾವುದೇ ಸಂಸ್ಥೆಯ ವಿಶ್ವಾಸಾರ್ಹತೆಯು ಅದರ ಶೈಕ್ಷಣಿಕ ಉತ್ಪಾದನೆಯ ಬಲದ ಮೇಲೆ ನಿಂತಿದೆ. ಹೀಗಾಗಿ ಉತ್ತಮ ಸಂಶೋಧನಾ ವಿಧಾನಗಳು ವಿಶ್ವವಿದ್ಯಾಲಯಗಳ ಶೈಕ್ಷಣಿಕ ಸ್ಥಾನಮಾನವನ್ನು ಹೆಚ್ಚಿಸುವುದಲ್ಲದೆ, ರಾಷ್ಟ್ರ ನಿರ್ಮಾಣಕ್ಕೆ ನೇರವಾಗಿ ಕೊಡುಗೆ ನೀಡುತ್ತವೆ ಎಂದು ಅವರು ಹೇಳಿದರು.

ನಾವೀನ್ಯತೆಯ ಮಹತ್ವವನ್ನು ಅಧ್ಯಾಪಕರು ಮತ್ತು ವಿದ್ವಾಂಸರು ತಮ್ಮ ಸಂಶೋಧನೆಯನ್ನು ಸಾಮಾಜಿಕ ಅಗತ್ಯಗಳಿಗೆ ಅನುಗುಣವಾಗಿರುವಂತೆ ಮಾಡಬೇಕು ಮತ್ತು ಪೇಟೆಂಟಗಳ ಮೂಲಕ ತಮ್ಮ ಬೌದ್ಧಿಕ ಆಸ್ತಿಯನ್ನು ರಕ್ಷಿಸಿಕೊಳ್ಳಬೇಕು ಎಂದು ಕರೆ ನೀಡಿದರು. ಯುವ ಸಂಶೋಧಕರು ಪೇಟೆಂಟಗಳನ್ನು ಕೇವಲ ಶೈಕ್ಷಣಿಕ ಮೈಲಿಗಲ್ಲುಗಳೆಂದು ಪರಿಗಣಿಸದೆ, ಜ್ಞಾನ ವರ್ಗಾವಣೆ, ಕೈಗಾರಿಕಾ ಸಹಯೋಗ ಮತ್ತು ಉದ್ಯಮಶೀಲತೆಗೆ ಪ್ರಮುಖ ಸಾಧನಗಳಾಗಿ ನೋಡುವಂತೆ ಅವರು ಪ್ರೋತ್ಸಾಹಿಸಿದರು.

ಎನ್.ಐ.ಆರ್.ಎಫ್ ಘಟಕದ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಯಾದ ಪ್ರೊ. ಆರ್. ಎನ್. ಮನಗೂಳಿ ಅವರು ಅತಿಥಿಗಳನ್ನು ಪರಿಚಯಿಸಿದರು ಮತ್ತು ಕಾರ್ಯಕ್ರಮದ ಉದ್ದೇಶಗಳನ್ನು ವಿವರಿಸಿದರು. ಎನ್.ಐ.ಆರ್.ಎಫ್. ಘಟಕದ ಸದಸ್ಯ ಕಾರ್ಯದರ್ಶಿ ಸಂತೋಷ್ ರಜಪೂತ್ ಅವರು ಸ್ವಾಗತಿಸಿದರು ಕು.ಅಮೃತಾ, ಸಂಶೋಧನಾ ವಿದ್ಯಾರ್ಥಿ ಇವರು ಕಾರ್ಯಕ್ರಮವನ್ನು ನಿರೂಪಿಸಿದರು.



## ಮಾನವಿಯತೆ ಮೆರೆದ ಸಾರಿಗೆ ಸಿಬ್ಬಂದಿ

**ಮಹಾಲಿಂಗಪುರ:** ನಗರದ ಬಸ್ ನಿಲ್ದಾಣದಲ್ಲಿ ಸಿಕ್ಕ 10 ಗ್ರಾಂ ಚಿನ್ನದ ಸರವನ್ನು ನಿಲ್ದಾಣದ ಸಾರಿಗೆ ನಿಯಂತ್ರಣಾಧಿಕಾರಿ ಎಸ್.ಬಿ.ಜಂಬಗಿ ಮರಳಿ ನೀಡಿದ್ದಾರೆ. ನಗರದ ಬಸ್ ನಿಲ್ದಾಣದಲ್ಲಿ ಮಹಿಳೆಯೊಬ್ಬಳು ತನ್ನ 10 ಗ್ರಾಂ ಬಂಗಾರದ ಸರ ಕಳೆದುಕೊಂಡು ಅಲೆದಾಡುತ್ತಿದ್ದಳು. ಅದು ಬಸ್ ನಿಲ್ದಾಣದ ಕಂಟ್ರೋಲ್ ಕೈಗೆ ಸಿಕ್ಕಿತ್ತು. ಬಂಗಾರ ಕಳೆದುಕೊಂಡವರು ಯಾರೆಂದು ಗುರುತಿಸಿದ ನಿಯಂತ್ರಕ ಆ ಸರವನ್ನು ಒಪ್ಪಿಸುವ ಮೂಲಕ ಮಾನವೀಯತೆ ಮೆರೆದಿದ್ದಾರೆ.

ಸಾರಿಗೆ ಅಧಿಕಾರಿಯ ಸೌಜನ್ಯವನ್ನು ಶ್ಲಾಘಿಸಿದ ಪ್ರಯಾಣಿಕರು ಇಂಥ ಸಿಬ್ಬಂದಿಗೆ ಸೂಕ್ತ ಗೌರವ ಬಹುಮಾನ ನೀಡಬೇಕೆಂದು ಮೇಲಧಿಕಾರಿಗಳಿಗೆ ಆಗ್ರಹಿಸಿದರು.

# ಬಸವ ಸಂಸ್ಕೃತಿ ಭೂಮಿ ಇರುವವರೆಗೆ ಉಳಿಯುವಂಥ ಸಂಸ್ಕೃತಿ

**ಬೆಳಗಾವಿ:** ಬಸವ ಸಂಸ್ಕೃತಿಯು ಈ ಭೂಮಿ ಇರುವವರೆಗೆ ಉಳಿಯುವಂಥ ಸಂಸ್ಕೃತಿಯಾಗಿದೆ.ಅಲ್ಲಿ ಜೀವ ಕಾರುಣ್ಯವಿದೆ,ಮಾನವನಲ್ಲಿ ದೇವರನ್ನು ಕಂಡಿರುವ ಜಗದ ಏಕೈಕ ಸಂಸ್ಕೃತಿ ಇದಾಗಿದೆ. ದೇಶದಲ್ಲಿ ಮೂಲ ವಿಚಾರ ಮತ್ತು ಇತಿಹಾಸವನ್ನು ತಿರುಚುವ ಕೆಲಸ ಸಾವಿರಾರು ವರ್ಷಗಳಿಂದ ನಡೆಯುತ್ತಿದೆ. ಅಂತಹ ಸಂದರ್ಭದಲ್ಲಿ ಅದನ್ನು ಉಳಿಸುವ ಕೆಲಸ ಬಸವ ಸಂಸ್ಕೃತಿ ಅಭಿಯಾನದ ಮೂಲಕ ನಡೆಯುತ್ತಿರುವುದು ಶ್ಲಾಘನೀಯ ಎಂದು ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು.

ಬೆಳಗಾವಿಯ ನಾಗನೂರು ರುದ್ರಾಕ್ಷಿ ಮಠದ ಎಸ್.ಜಿ.ಬಿ.ಐ.ಟಿ. ಕಾಲೇಜಿನ ಆವರಣದಲ್ಲಿ ಬಸವ ಸಂಸ್ಕೃತಿ ಅಭಿಯಾನದ ಸಮಾವೇಶದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಆ ದಿನಗಳಲ್ಲಿ ವಚನ ಸಾಹಿತ್ಯ ಮತ್ತು ಬಸವಣ್ಣನವರ ಇತಿಹಾಸವನ್ನು ನಾಶಪಡಿಸಲು ದೊಡ್ಡ ಪ್ರಯತ್ನ ಆಗಿತ್ತು. ಆ ಸಂದರ್ಭದಲ್ಲಿ ಶರಣ–ಶರಣೆಯರು ತಮ್ಮ ತಲೆ ಮೇಲೆ ಹೊತ್ತುಕೊಂಡು ಹೋಗಿ ವಚನ ಸಾಹಿತ್ಯ ಉಳಿಸಿದ್ದರು.

ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಬಸವ ಸಂಸ್ಕೃತಿ ಅಭಿಯಾನದ ಮೂಲಕ ಅವರ ವಿಚಾರಗಳನ್ನು ಮನೆ ಮನೆಗೆ ತಲುಪಿಸುವ ಕೆಲಸ ಆಗುತ್ತಿದೆ. ಬಸವಣ್ಣನವರ ವಿಚಾರ, ಹೋರಾಟ ಮುಂದಿನ ಪೀಳಿಗೆ ಮತ್ತು ಈ ದೇಶ ಮರೆತು ಹೋಗಬಾರದು



ಎಂಬುದು ಈ ಅಭಿಯಾನದ ಉದ್ದೇಶವಾಗಿರುವದು ಸಂತಸದ ಸಂಗತಿ ಎಂದರು.

ಬಸವಣ್ಣನವರು ಸಾಹಿತ್ಯ ರೂಪದಲ್ಲಿ ಹೇಳಿದ್ದನ್ನು ಅಂಬೇಡ್ಕರ್ ಸಂವಿಧಾನದಲ್ಲಿ ಹೇಳಿದ್ದಾರೆ. ವಚನಗಳಲ್ಲಿ ಇರುವುದು ಸಂವಿಧಾನದಲ್ಲಿದೆ. ಸಂವಿಧಾನಕ್ಕೂ ವಚನ ಸಾಹಿತ್ಯಕ್ಕೂ ಯಾವುದೇ ಬೇಧ ಭಾವ ಮತ್ತು ಅಂತರ ಇಲ್ಲ ಅದು ಅತ್ಯಂತ ಶ್ರೇಷ್ಠವಾಗಿವೆ. ಬಸವಣ್ಣನವರನ್ನು ನಮ್ಮ ಸಿದ್ದರಾಮಯ್ಯ ಸರ್ಕಾರ ದಿಟ್ಟ ಹೆಜ್ಜೆ ಇಟ್ಟು ಕರ್ನಾಟಕದ ಸಾಂಸ್ಕೃತಿಕ ನಾಯಕನನ್ನಾಗಿ ಘೋಷಿಸಿದರು. ಜೊತೆಗೆ ಬಸವಣ್ಣನವರ ಫೋಟೊ ಎಲ್ಲಾ ಕಚೇರಿಗಳಲ್ಲಿ ಹಾಕುವ ಘೋಷಣೆಯನ್ನು ಹಿಂದಿನ ನಮ್ಮ ಸಿದ್ದರಾಮಯ್ಯ ಸರ್ಕಾರವೇ ಮಾಡಿತ್ತು ಎಂಬುದನ್ನು ತುಂಬಾ ಹೆಮ್ಮೆಯಿಂದ ಹೇಳುತ್ತೇನೆ ಎಂದು ಸತೀಶ ಜಾರಕಿಹೊಳಿ ಹೇಳಿದರು.

ಹಂದಿಗುಂದ ಶ್ರೀ.ಶಿವಾನಂದ ಸ್ವಾಮೀಜಿ ಮಾತನಾಡಿ, ಬಸವ ಸಂಸ್ಕೃತಿ ಅಭಿಯಾನ ಎಂದರೆ ಬುಲೆಟ್ ಟ್ರೇನ್ ಇದ್ದ ಹಾಗೆ. ಇನ್ನೊಂದು ಇದ್ದಿಲು ನೀರಿನ ಮೇಲೆ ಹೊರಡುವ ಟ್ರೇನ್. ಅದಕ್ಕೆ ಇನ್ನೂ ಟೈಮ್ ಫಿಕ್ಸ್ ಆಗಿಲ್ಲ. ಬಸವ ತತ್ವ ಸಂದೇಶ ಹೊತ್ತಿರುವ ಬುಲೆಟ್ ಟ್ರೇನ್ ಹತ್ತುತ್ತಿರೋ ಅಥವಾ ಹಳೆಯ ಇದ್ದಿಲು ಟ್ರೇನ್ ಹತ್ತುತ್ತಿರೋ ಎಂಬುದನ್ನು ನೀವೇ ನಿರ್ಧರಿಸಬೇಕು. ಹೊಸ ರೇಡಿಯೋ ಹಾಡಲು ಸೆಲ್ ಮೇಲಿರುವ ಕ್ಯಾಪ್ ತೆಗೆಯಬೇಕು. ಅದೇರೀತಿ ಎಲ್ಲಿಯವರೆಗೆ ಲಿಂಗಾಯತ ಎನ್ನುವ ಸೆಲ್ ಮೇಲಿರುವ ವೀರಶೈವ ಎಂಬ ಕ್ಯಾಪ್ ತೆಗೆಯುವುದಿಲ್ಲವೋ ಅಲ್ಲಿಯವರೆಗೂ ಲಿಂಗಾಯತ ಎನ್ನುವ ಬ್ಯಾಟರಿ ಹತ್ತುವುದಿಲ್ಲ. ಆ ಕ್ಯಾಪ್ ತೆಗೆದು ಬಸವ ಬೆಳಕಿನಲ್ಲಿ ನಾವೆಲ್ಲರೂ ಸಾಗೋಣ ಎಂದು ಕರೆ ನೀಡಿದರು.

ಭಾಲ್ಕಿ ಹಿರೇಮಠದ ಡಾ.ಬಸವಲಿಂಗ ಪಟ್ಟದ್ದೇವರು ಮಾತನಾಡಿ, ಕರ್ನಾಟಕದಲ್ಲಿ ಬಸವ ಸಂಸ್ಕೃತಿ ಅಭಿಯಾನಕ್ಕೆ ಕಾಲ ಕೂಡಿ ಬಂದಿದೆ. ಇದಕ್ಕೆ ಸ್ಪಂದಿಸಿದವರಿಗೆ ಬಸವಣ್ಣನ ಶ್ರೀರಕ್ಷೆ ಸಿಗಲಿದೆ. ಸತ್ಯಕ್ಕೆ ಜಯ ಸಿಕ್ಕೆ ಸಿಗುತ್ತದೆ. ಬಸವಣ್ಣನವರನ್ನು ಗಟ್ಟಿಯಾಗಿ ಹಿಡಿದುಕೊಂಡು ಹೊರಟಿದ್ದೇವೆ. ಇಂಥ ಅವಕಾಶವನ್ನು ಯಾರೂ ಕಳೆದುಕೊಳ್ಳಬೇಡಿ. ಸಾವಿರಾರು ಶರಣರು ತಮ್ಮ ಜೀವ ಬಲಿಕೊಟ್ಟು ವಚನ ಸಾಹಿತ್ಯದ ಆಸ್ತಿ ಕೊಟ್ಟು ಹೋಗಿದ್ದಾರೆ. ಧರ್ಮದ ಕಾಲಂನಲ್ಲಿ ಲಿಂಗಾಯತ ಅಂತಾ ಬರೆಸದಿದ್ದರೆ ಶರಣರಿಗೆ ಅಪಮಾನ ಮಾಡಿದಂತೆ ಆಗುತ್ತದೆ. ಹಾಗಾಗಿ, ಲಿಂಗಾಯತ ಧರ್ಮ ಅಂತಾ ಬರೆಸುವ ಮೂಲಕ ನಿಜ ಬಸವಣ್ಣನವರ ವಾರಸುದಾರರಾಗೋಣ. ಕರ್ನಾಟಕ ಸಾಂಸ್ಕೃತಿಕ ನಾಯಕ ಅಂತಾ ಘೋಷಣೆ ಮಾಡುವುದಷ್ಟೇ ಅಲ್ಲ. ದೇಶಾದ್ಯಂತ ಬಸವ ಜಯಂತಿ ಆಚರಿಸಬೇಕು. ದೇಶದ ಎಲ್ಲಾ ರಾಜ್ಯಗಳ ವಿಶ್ವವಿದ್ಯಾಲಯಗಳಲ್ಲಿ ಬಸವ ಅಧ್ಯಯನ ಪೀಠ ಸ್ಥಾಪಿಸಬೇಕು ಎಂದು ಆಗ್ರಹಿಸಿದರು.

ಗದಗಿನ ತೋಂಟದಾರ್ಯ ಮಠದ ಡಾ.ತೋಂಟದ ಸಿದ್ದರಾಮ ಸ್ವಾಮೀಜಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಡಾ.ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ, ನಾಗನೂರು ರುದ್ರಾಕ್ಷಿ ಮಠದ ಡಾ.ಅಲ್ಲಮಪ್ರಭು ಸ್ವಾಮೀಜಿ, ,ಸಿದ್ಧಬಸವ ಕಬೀರ ಸ್ವಾಮೀಜಿ ಸೇರಿ 100ಕ್ಕೂ ಅಧಿಕ ಸ್ವಾಮೀಜಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಕಾರ್ಯಕ್ರಮ ಬಳಿಕ ಸಾಣೇಹಳ್ಳಿಯ ಶಿವಸಂಚಾರ ಕಲಾತಂಡದಿಂದ ಜಂಗಮದೆಡೆಗೆ ನಾಟಕ ಪ್ರದರ್ಶನ ನಡೆಯಿತು. ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಪೂರ್ತಿ ನಾಟಕ ವೀಕ್ಷಿಸಿ, ಕಲಾವಿದನ್ನು ಪ್ರೋತ್ಸಾಹಿಸಿದರು.

ಡಾ.ಮಹಾಂತಪ್ರಭು ಸ್ವಾಮೀಜಿ ಅವರು ಕಾರ್ಯಕ್ರಮವನ್ನು ನಿರ್ವಹಿಸಿದರು.ಬಸವರಾಜ ರೊಟ್ಟಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು.ನೈನಾ ಗಿರಿಗೌಡರ ಅವರ ತಂಡ ಹಾಗೂ ಪ್ರಸಾದ ನಿಲಯದ ವಿದ್ಯಾರ್ಥಿಗಳು ಸೇರಿ ಎರಡು ನೂರು ನಜರಿಂದ ವಚನ ಪ್ರಾರ್ಥನೆ ಕಾರ್ಯಕ್ರಮ ನಡೆಯಿತು. ಬೆಳಗಾವಿ ಜಿಲ್ಲೆ ಹಾಗೂ ಸುತ್ತಮುತ್ತಲಿ ಹತ್ತು ಸಾವಿರಕ್ಕೂ ಅಧಿಕ ಜನ ಕಾರ್ಯಕ್ರಮ ಹಾಗೂ ಅದಕ್ಕು ಮುನ್ನ ಬೆಳಗಾವಿ ಲಿಂಗರಾಜ ಕಾಲೇ ಆವರಣದಿಂದ ಆರಂಭವಾಗಿ ಚನ್ನಮ್ಮ ವೃತ್ತ,ಕೃಷ್ಣದೇವರಾಯ ವೃತ್ತದ ಮೂಲಕ ಹೊರಟು ಶಿವಬಸವ ನಗರದ ನಾಗನೂರು ರುದ್ರಾಕ್ಷ ಮಠದವರೆಗೆ ನಡೆದ ಸಾಮರಸ್ಯದ ನಡಿಗೆಯಲ್ಲಿ ಭಾಗವಹಿಸಿದ್ದರು.

# ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ಜಾಗೃತಿ ಅಭಿಯಾನ

**ಮೂಡಲಗಿ:** ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷಾ ಕಾರ್ಯದ ಯಶಸ್ವಿಯಲ್ಲಿ ಎನ್ ಎಸ್ಎಸ್ ವಿದ್ಯಾರ್ಥಿಗಳ ಪಾತ್ರ ಅತ್ಯಂತ ಮಹತ್ವದ್ದು ಎಂದು ಮೂಡಲಗಿಯ ತಹಶೀಲ್ದಾರರು ಹಾಗೂ ತಾಲೂಕ ದಂಡಾಧಿಕಾರಿ ಶ್ರೀಶೈಲ್ ಗುಡುಮಿ ಹೇಳಿದರು

ಮೂಡಲಗಿ ಶಿಕ್ಷಣ ಸಂಸ್ಥೆಯ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯ ಮೂಡಲಗಿಯ, ಎನ್ ಎಸ್ ಎಸ್ ಘಟಕ 1 ಮತ್ತು 2ರ ಅಡಿಯಲ್ಲಿ ಕರ್ನಾಟಕ ಸರ್ಕಾರದ ಹಿಂದುಳಿದ ಆಯೋಗದವತಿಯಿಂದ ರಾಜ್ಯದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ 2025 ಜಾಗೃತಿ ಅಭಿಯಾನದ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು ಈ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿ ಮಾತನಾಡಿದರು.

ಸಮೀಕ್ಷೆ ಪೂರ್ವದಲ್ಲಿ ನಿಮ್ಮ ಹಾಗೂ ನಿಮ್ಮ ನೆರೆಹೊರೆಯವರಿಗೆ ಅವಶ್ಯಕವಾದ ಆಧಾರ್ ಕಾರ್ಡ್ ರೇಷನ್ ಕಾರ್ಡ್ ಮತದಾರರ ಗುರುತಿನ ಚೀಟಿಗಳಂತಹ ದಾಖಲೆಗಳನ್ನು ಆಧರಿಸಿ ನಡೆಯುವ ಸಮೀಕ್ಷೆಯಲ್ಲಿ ತಮ್ಮ



ತಮ್ಮ ಮಾಹಿತಿಯನ್ನು ಸಮರ್ಪಕವಾಗಿ ನೀಡಿ ಈ ಸಮೀಕ್ಷೆಯನ್ನು ಯಶಸ್ವಿಗೊಳಿಸಬೇಕೆಂದು. ಮಹಾವಿದ್ಯಾಲಯದ ಎನ್ ಎಸ್ಎಸ್ ಅಧಿಕಾರಿಗಳಿಗೆ ಸ್ವಯಂಸೇವಕರನ್ನು ತಂಡಗಳನ್ನಾಗಿ ರಚಿಸಿ ಅವರಿಂದ ಸಮೀಕ್ಷೆ ಕುರಿತು ಜಾಗೃತಿ ಮೂಡಿಸಲು ಸಲಹೆ ನೀಡಿದರು. ತಾಲೂಕ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿ ಪ್ರಮೀಳಾ ಬೇವಿನಗಿಡದ, ಮೂಡಲಗಿಯ ತಾಲೂಕ ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಎಫ್ ಜಿ ಚಿನ್ನಣ್ಣವರ್, ಕ್ಷೇತ್ರ ಶಿಕ್ಷಣಾಧಿಕಾರಿ ಪ್ರಕಾಶ ಹಿರೇಮಠ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಧಿಕಾರಿ ಯಲ್ಲಪ್ಪ ಗದಾಡಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ನಿಲಯ ಪಾಲಕರು ಎಸ್ ಎಸ್ ಸೊರಗಾವಿ ಉಪಸ್ಥಿತರಿದ್ದರು.

ಅಧ್ಯಕ್ಷತೆಯನ್ನು ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಎಸ್ ಎಲ್ ಚಿತ್ರಗಾರ ವಹಿಸಿಕೊಂಡಿದ್ದರು. ಪ್ರೊ ಎಲ. ಪಿ.ಹಿಡಕಲ ಕಾರ್ಯಕ್ರಮದ ನಿರೂಪಿಸಿದರು, ಪ್ರೊ. ವಿ.ಜೆ . ಬೈರನಟ್ಟಿ ಸ್ವಾಗತಿಸಿದರು, ಡಾ. ಪವನ ಕುಮಾರ್ ಕೆ. ವಂದಿಸಿದರು.

# ಯುವ ಸೌರಭ ಕಾರ್ಯಕ್ರಮ

**ಹಾವೇರಿ:** ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಯುವ ಸೌರಭ-2025 ಕಾರ್ಯಕ್ರಮ ಸೆ.13 ರಂದು ಬೆಳಿಗ್ಗೆ 11 ಗಂಟೆಗೆ ಹಾವೇರಿ ನಗರದ ಭತತ್‌ಸಿಂಗ್ ಪಿ.ಯು.ಕಾಲೇಜಿನಲ್ಲಿ ಜರುಗಲಿದೆ.

ಕೇಂದ್ರ ಗ್ರಾಹಕರ ವ್ಯವಹಾರಗಳ ಆಹಾರ ಮತ್ತು ಸಾರ್ವಜನಿಕ ವಿತರಣಾ ಹಾಗೂ ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವರಾದ ಪ್ರಹ್ಲಾದ ಜೋಶಿ ಹಾಗೂ ವಿಧಾನ ಪರಿಷತ್ ಸಭಾಪತಿಗಳಾದ ಬಸವರಾಜ ಹೊರಟ್ಟಿ ಅವರ ಗೌರವಾನ್ವಿತ ಉಪಸ್ಥಿತಿಯಲ್ಲಿ, ಜವಳಿ, ಕಬ್ಬು ಅಭಿವೃದ್ಧಿ ಸಕ್ಕರೆ ಮತ್ತು ಕೃಷಿ ಮಾರುಕಟ್ಟೆ ಹಾಗೂ ಹಾವೇರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವಾನಂದ ಪಾಟೀಲ ಅವರು ಉದ್ಘಾಟನೆ ನೆರವೇರಿಸಲಿದ್ದಾರೆ.

ಮಾಜಿ ಮುಖ್ಯ ಮಂತ್ರಿಗಳು ಹಾಗೂ ಸಂಸದರಾದ ಬಸವರಾಜ ಬೊಮ್ಮಾಯಿ ಅವರ ಗೌರವ ಉಪಸ್ಥಿತಿಯಲ್ಲಿ, ಶಾಸಕರು ಹಾಗೂ ವಿಧಾನಸಭೆ ಉಪ ಸಭಾಧ್ಯಕ್ಷರಾದ ರುದ್ರಪ್ಪ ಮಾನಪ್ಪ ಲಮಾಣಿ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಮುಖ್ಯ ಸಚೇತಕ ಸಲೀಂ ಅಹ್ಮದ್, ಶಾಸಕರು ಹಾಗೂ ಕರ್ನಾಟಕ ರಾಜ್ಯ ಅರಣ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಸವರಾಜ ಶಿವಣ್ಣನವರ ಅವರು, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಉಪಾಧ್ಯಕ್ಷ ಎಸ್. ಆರ್.ಪಾಟೀಲ, ವಿಧಾನ ಪರಿಷತ್ ಶಾಸಕರಾದ ಪ್ರೊ. ಎಸ್.ವಿ.ಸಂಕನೂರ, ಪ್ರದೀಪ ಶೆಟ್ಟರ, ಶಾಸಕರಾದ ಶ್ರೀನಿವಾಸ ಮಾನೆ, ಯು.ಬಿ.ಬಣಕಾರ, ಪ್ರಕಾಶ ಕೋಳಿವಾಡ, ಯಾಸೀರ ಅಹ್ಮದಖಾನ್ ಪಠಾಣ, ಕರ್ನಾಟಕ ಗಡಿ ಪ್ರದೇಶದ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸೋಮಣ್ಣ ಬೇವಿನಮರದ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಎಂ.ಎಂ.ಹಿರೇಮಠ, ನಗರಸಭೆ ಅಧ್ಯಕ್ಷೆ ಶ್ರೀಮತಿ ಶಶಿಕಲಾ ರಾಮು ಮಾಳಗಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಸ್.ಎಫ್.ಎನ್.ಗಾಜಿಗೌಡ್ರ, ನಗರಸಭೆ ಉಪಾಧ್ಯಕ್ಷ ಮಲ್ಲಿಕಾರ್ಜುನ ಸಾತೇನಹಳ್ಳಿ ಹಾಗೂ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಂ.ಎಂ.ಮೈದೂರ ಅವರು ಪಾಲ್ಗೊಳ್ಳಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಭಗತ್‌ಸಿಂಗ್ ಪಿಯು ಕಾಲೇಜ್ ಆಡಳಿತಧಿಕಾರಿ ಸತೀಶ ಎಂ.ಬಿ. ಹಾಗೂ ಪ್ರಾಚಾರ್ಯ ರತನ್ ಆರ್.ಕಾಶಪ್ಪನವರ ಅವರು ಭಾಗವಹಿಸಲಿದ್ದಾರೆ.

## ಸಚಿವ ಮಧು ಬಂಗಾರಪ್ಪ ಜಿಲ್ಲಾ ಪ್ರವಾಸ

**ಹಾವೇರಿ:** ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಖಾತೆ ಸಚಿವರಾದ ಎಸ್.ಮಧು ಬಂಗಾರಪ್ಪ ಅವರು ಇಂದು ಜಿಲ್ಲೆಯಲ್ಲಿ ಪ್ರವಾಸಕ್ಕೈಗೊಂಡಿದ್ದಾರೆ.

ಅಂದು ಬೆಳಿಗ್ಗೆ 11 ಗಂಟೆಗೆ ತೀರ್ಥಹಳ್ಳಿಯಿಂದ ಹೊರಟು, ಮಧ್ಯಾಹ್ನ 1-30ಕ್ಕೆ ರಾಣೇಬೆನ್ನೂರಿಗೆ ಆಗಮಿಸಿ, ಮೃತ್ಯುಂಜಯ ಸಭಾಭವನದಲ್ಲಿ ಕರ್ನಾಟಕ ರಾಜ್ಯ ಅನುದಾನಿತ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ವತಿಯಿಂದ ಆಯೋಜಿಸಲಾದ ಶಿಕ್ಷಕರ ದಿನಾಚರಣೆ ಹಾಗೂ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಭಾಗವಹಿಸುವರು. ಮಧ್ಯಾಹ್ನ 3 ಗಂಟೆಗೆ ಬೆಂಗಳೂರಿಗೆ ಪ್ರಯಾಣ ಬೆಳೆಸಲಿದ್ದಾರೆ.

# ಕಳಪೆ ಕಾಮಗಾರಿ ಗುತ್ತಿಗೆದಾರನ ವಿರುದ್ಧ ಕ್ರಮಕ್ಕೆ ಆಗ್ರಹ

**ತೇರದಾಳ:** ನಮ್ಮ ವಾರ್ಡ್ ನಂಬರ್ 19ರಲ್ಲಿ ಗುತ್ತಿಗೆದಾರ ಮುರಗೇಶ ಮಿರ್ಜಿ ಮಾಡಿರುವ ಕಾಮಗಾರಿ ಕಳಪೆದಿಂದ ಕೂಡಿದೆ. ಅದನ್ನು ಸರಿಪಡಿಸಿ ಎಂದು ಲಿಖಿತವಾಗಿ ಅರ್ಜಿ ಸಲ್ಲಿಸಿದರು ಇದುವರೆಗೆ ಯಾವುದೇ ಕ್ರಮ ಕೈಗೊಂಡಿಲ್ಲ. ವಾರ್ಡಿನ ಜನ ಛೀಮಾರಿ ಹಾಕುತ್ತಿದ್ದಾರೆ. ಕಳಪೆ ಕಾಮಗಾರಿ ಸರಿಪಡಿಸಿ ಇಲ್ಲವೇ ಗುತ್ತಿಗೆದಾರ ಮೇಲೆ ಕ್ರಮ ಕೈಗೊಳ್ಳಿ ಎಂದು ಪುರಸಭೆ ಸದಸ್ಯ ಸಂತೋಷ ಜಮಖಂಡಿ ಶುಕ್ರವಾರ ಪುರಸಭೆ ಸಭಾ ಭವನದಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿ ಅಧಿಕಾರಿಗಳನ್ನು ಒತ್ತಾಯಿಸಿದರು.

ಅಭಿಯಂತರೆ ಭಾಗ್ಯಶ್ರೀ ಪಾಟೀಲ ಮಾತನಾಡಿ ಕಾಮಗಾರಿಯನ್ನು ಮುಖ್ಯಾಧಿಕಾರಿ ಜತೆ ಬೇಟಿ ನೀಡಿ ಪರಿಶೀಲಿಸಿ ಆಗಿರುವ ತಪ್ಪನ್ನು ಸರಿಪಡಿಸುವಂತೆ ಮೌಖಿಕವಾಗಿ ಹಾಗೂ ನೋಟಿಸ್ ಮೂಲಕ ಗುತ್ತಿಗೆದಾರರಿಗೆ ತಿಳಿಸಲಾಗಿದೆ. ಸರಿಪಡಿಸದಿದ್ದರೆ ಇನ್ನೆರಡು ನೋಟಿಸ್ ನೀಡಿ ಶಿಸ್ತು ಕ್ರಮಕ್ಕೆ ಜಿಲ್ಲಾಧಿಕಾರಿಗಳಿಗೆ ವರದಿ ಸಲ್ಲಿಸುವುದಾಗಿ ಸಭೆಗೆ ಮಾಹಿತಿ ನೀಡಿದರು.

ಐಡಿಎಸ್‌ಎಂಟಿ ಯೋಜನೆಯ ಮಳಿಗೆಗಳ ಬಾಡಿಗೆ ಹಣ 60 ಲಕ್ಷದಷ್ಟು ಸಂಗ್ರಹವಾಗಿದೆ ಎಂದು ಹೇಳುತ್ತೀರಿ. ಕೆರೆಯ ದಂಡೆಯ ಮೇಲೆ ನಿರ್ಮಿಸಿರುವ ಉದ್ಯಾನದಲ್ಲಿ ಜೂಜಾಟ, ಮದ್ಯ ಸೇವನೆ ನಡೆಯುತ್ತಿದೆ. ಅದನ್ನು ತೆರವುಗೊಳಿಸಿ ಅಲ್ಲಿ ಮಳಿಗೆ ನಿರ್ಮಿಸಿ. ಇದರಿಂದ ಪುರಸಭೆಗೆ ಆದಾಯ ಹೆಚ್ಚುತ್ತದೆ ಎಂದು ಸದಸ್ಯ ಸಚಿನ ಕೊಡತೆ ಆಗ್ರಹಿಸಿದರು. ಇದಕ್ಕೆ ಬಹುತೇಕ ಸದಸ್ಯರು ಒಪ್ಪಿಗೆ ಸೂಚಿಸಿದರು.



**ಧರಣಿ ಎಚ್ಚರಿಕೆ:** ಮಟನ್ ಅಂಗಡಿಗಳನ್ನು ದುರಸ್ತಿ ಮಾಡಿ ಕೊಡಿ ಎಂದು ಅಧಿಕಾರಕ್ಕೆ ಬಂದಾಗಿನಿಂದ ಹೇಳುತ್ತಿದ್ದೇನೆ. ಯಾವಬ್ಬ ಅಧಿಕಾರಿಯು ಕ್ಯಾರೆ ಎನ್ನುತ್ತಿಲ್ಲ. ಇದರಿಂದ ಮಟನ್ ವ್ಯಾಪಾರಸ್ಥರಿಗೆ ತೀವ್ರ ತೊಂದರೆ ಆಗುತ್ತಿದೆ. ಕೂಡಲೇ ಮಟನ್ ಅಂಗಡಿಗಳನ್ನು ದುರಸ್ತಿ ಮಾಡಿಕೊಡಿ ಇಲ್ಲವೇ ಬೇರೆ ಕಡೆಗೆ ಮಳಿಗೆಗಳನ್ನು ನಿರ್ಮಿಸಿ ಕೊಡಬೇಕು ಎಂದು ಸದಸ್ಯ ಸಚಿನ ಕೊಡತೆ ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

**ಅನಾಹುತಕ್ಕೆ ನೀವೆ ಹೊಣೆ:** ವಾರ್ಡ್ ನಂಬರ 4ರಲ್ಲಿ ವಿದ್ಯುತ್ ಕಂಬಗಳ ಅಳವಡಿಕೆ ಕಾಮಗಾರಿ ಅರ್ಧಕ್ಕೆ ನಿಂತಿದೆ. ವಿದ್ಯುತ್ ತಂತಿಗಳು ಜೋಕಾಲಿಯಂತೆ ಜೋತು ಬಿದ್ದಿವೆ. ಇದರಿಂದ ಅಲ್ಲಿನ ಜನ ಜೀವ ಭಯದಲ್ಲಿ ಅಲೆದಾಡುತ್ತಿದ್ದಾರೆ. ಈ ಬಗ್ಗೆ ಕ್ರಮ ಕೈಗೊಳ್ಳಲು ಸಾಕಷ್ಟು ಬಾರಿ ಹೇಳಿದರು ಕ್ರಮ ಕೈಗೊಳ್ಳುತ್ತಿಲ್ಲ. ಅನಾಹುತ ಸಂಭವಿಸಿದರೆ ಪುರಸಭೆ ಅಧಿಕಾರಿಗಳೆ ನೇರ ಹೊಣೆ ಎಂದು ಸದಸ್ಯ ಕಾಶಿನಾಥ ರಾಠೋಡ ಎಚ್ಚರಿಕೆ ನೀಡಿದರು. ಚರಂಡಿಗಳನ್ನು ಸ್ವಚ್ಛಗೊಳಿಸುತ್ತಿಲ್ಲ. ತಗೆದ ಗಲೀಜು ಬೇಗನೆ ತಗೆದುಕೊಂಡು ಹೋಗುವುದಿಲ್ಲ. ಇದರಿಂದ ದೇವಸ್ಥಾನಕ್ಕೆ ಹೋಗುವ ಜನ ಮೂಗು ಮುಚ್ಚಿಕೊಂಡು ಹೋಗುವಂತಾಗುತ್ತಿದೆ ಎಂದು ಮಾಜಿ ಅಧ್ಯಕ್ಷೆ ಕುಸುಮಾಂಡಿನಿ ಬಾಬಗೊಂಡ ಆರೋಪಿಸಿದರು. ಸುರೇಶ ಕಬಾಡಗಿ, ಪೈಜುಲ್ಲಾ ಇನಾಂದಾರ, ಪಜಲ್ ಅತಾರಾವುತ್, ಮೌಲಾಅಲಿ ಚಿತ್ರಬಾನುಕೋಟೆ ಸೇರಿದಂತೆ ಹಲವರು ಸಲಹೆ ಸೂಚನೆಗಳನ್ನು ನೀಡಿದರು. ಅಧ್ಯಕ್ಷೆ ಶಿಲ್ಪಾ ರೋಡಕರ ಅಧ್ಯಕ್ಷೆ ವಹಿಸಿದ್ದರು. ಉಪಾಧ್ಯಕ್ಷೆ ನಸ್ರೀನ್‌ಬಾನು ನಗಾರ್ಜಿ, ಸ್ಥಾಯಿ ಸಮಿತಿ ಚೇರಮನ್ ಕುಮಾರ ಸರಿಕರ, ಕಚೇರಿ ವ್ಯವಸ್ಥಾಪಕ ಮಲ್ಲಿಕಾರ್ಜುನ ಬಿರಾದಾರ ಪಾಟೀಲ, ಸುರೇಶ ಹರಿಜನ ಇನ್ನಿತರಿದ್ದರು.

### ಟೆಂಡರ್ ರದ್ದತಿಗೆ ಅನುಮೋದನೆ

ಬೀದಿ ದೀಪ ನಿರ್ವಹಣೆ ಗುತ್ತಿಗೆದಾರನಿಂದ ಸರಿಯಾಗಿ ಕೆಲಸ ಆಗುತ್ತಿಲ್ಲ. ಮೊಬೈಲ್ ಕರೆಗಳಿಗೂ ಸ್ಪಂದಿಸುವುದಿಲ್ಲ. ಆದ್ದರಿಂದ ಅವರ ಟೆಂಡರ್ ರದ್ದುಗೊಳಿಸುವಂತೆ ಆದಿನಾಥ ಸಪ್ತಸಾಗರ ಸಭೆಯಲ್ಲಿ ಮಂಡಿಸಿದರು. ಇದಕ್ಕೆ ಎಲ್ಲ ಸದಸ್ಯರು ಧ್ವನಿಗೂಡಿಸಿದ್ದರಿಂದ ಬೀದಿ ದೀಪ ನಿರ್ವಹಣೆ ಗುತ್ತಿಗೆದಾರನ ಟೆಂಡರ್ ರದ್ದತಿಗೆ ಠರಾವು ಮಾಡಲಾಯಿತು. ಹಾಲುಮತ ಸಮಾಜದವರ ಬಹುದಿನಗಳ ಬೇಡಿಕೆಯಾಗಿರುವ ಸಂಗೊಳ್ಳಿ ರಾಯಣ್ಣ ವೃತ್ತ ನಾಮಕರಣಕ್ಕೆ ಸಭೆಯಲ್ಲಿ ಅನುಮೋದನೆ ನೀಡಲಾಯಿತು.

# 17ರಂದು ಭಗವಾನ ಶ್ರೀ ವಿಶ್ವಕರ್ಮ ಜಯಂತಿ

**ಧಾರವಾಡ:** ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ಭಗವಾನ ಶ್ರೀ ವಿಶ್ವಕರ್ಮ ಜಯಂತಿಯನ್ನು ಸೆಪ್ಟಂಬರ 17 ರಂದು ಮಧ್ಯಾಹ್ನ 12 ಗಂಟೆಗೆ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ ಸಾಂಸ್ಕೃತಿಕ ಭವನದಲ್ಲಿ ಆಯೋಜಿಸಲಾಗಿದೆ.

ಕೇಂದ್ರ ಗ್ರಾಹಕರ ವ್ಯವಹಾರಗಳ, ಆಹಾರ ಮತ್ತು ಸಾರ್ವಜನಿಕ ವಿತರಣೆ ಮತ್ತು ಹೊಸ ಹಾಗೂ ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ಹಾಗೂ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಅವರು ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸುವರು.

ಕಾರ್ಮಿಕ ಇಲಾಖೆ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್. ಲಾಡ್ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು.

ಕರ್ನಾಟಕ ವಿಧಾನ ಪರಿಷತ್ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ್, ಶಾಸಕರು ಹಾಗೂ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳ ಚರಂಡಿ ಮಂಡಳಿಯ ಅಧ್ಯಕ್ಷ ವಿನಯ ಕುಲಕರ್ಣಿ, ಶಾಸಕರು ಹಾಗೂ ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಅಬ್ಬಯ್ಯ ಪ್ರಸಾದ, ಶಾಸಕರು ಹಾಗೂ ವಾಯವ್ಯ ಸಾರಿಗೆ ನಿಗಮದ ಅಧ್ಯಕ್ಷ ಭರಮಗೌಡ ಅಲಗೌಡ ಕಾಗೆ, ಶಾಸಕರು ಹಾಗೂ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜೆ.ಎನ್.ಗಣೇಶ, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತದ ಅಧ್ಯಕ್ಷ ಸೈಯದ್ ಅಜೀಮ್‌ಪೀರ್ ಎಸ್.ಖಾದ್ರಿ ಅವರು ವಿಶೇಷ ಅತಿಥಿಗಳಾಗಿ ಭಾಗವಹಿಸುವರು.

ಶಾಸಕರಾದ ಅರವಿಂದ ಚಂದ್ರಕಾಂತ ಬೆಲ್ಲದ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಶಾಸಕರಾದ ಎನ್.ಎಚ್ ಕೋನರಡ್ಡಿ, ಎಸ್.ವ್ಹಿ.ಸಂಕನೂರ, ಪ್ರದೀಪ ಶೆಟ್ಟರ, ಮಹೇಶ ಟೆಂಗಿನಕಾಯಿ, ಎಂ.ಆರ್.ಪಾಟೀಲ್, ಎಫ್.ಹೆಚ್.ಜಕ್ಕಪ್ಪನವರ, ಕರ್ನಾಟಕ ಬಾಲವಿಕಾಸ ಅಕಾಡೆಮಿಯ ಅಧ್ಯಕ್ಷ ಸಂಗಮೇಶ ಅಪ್ಪಾಸಿ ಬಬಲೇಶ್ವರ, ಹುಬ್ಬಳ್ಳಿ-ಧಾರವಾಡ ಮಹಾನಗರ ಮಹಾಪೌರರಾದ ಜ್ಯೋತಿ ಪಾಟೀಲ, ಹುಬ್ಬಳ್ಳಿ ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶಾಕೀರ್ ಸನದಿ ಹಾಗೂ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಸ್.ಆರ್. ಪಾಟೀಲ ಅವರು ಭಾಗವಹಿಸುವರು.ಕಾರ್ಯಕ್ರಮದಲ್ಲಿ ಸಮಾಜದ ಜಿಲ್ಲಾಧ್ಯಕ್ಷರು, ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಮುಖಂಡರು ಉಪಸ್ಥಿತರಿರುವರು.ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಆಯುಕ್ತ ಡಾ. ರುದ್ರೇಶ.ಎಸ್.ಘಾಳಿ ಅವರು ಭಾಗವಹಿಸುವರೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ

**ಹಾವೇರಿ:** ಹಾವೇರಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ನಗರಸಭೆ ಸಹಯೋಗದಲ್ಲಿ 'ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ " ಸೆ.14 ಹಾಗೂ 15 ರಂದು ಹಾವೇರಿ ನಗರದಲ್ಲಿ ವಿಜಂಭಣೆಯಿಂದ ಆಚರಿಸಲಾಗುತ್ತಿದೆ. ದಿನಾಂಕ 14-09-2025 ರಂದು ಬೆಳಿಗೆ 8 ಗಂಟೆಗೆ ಹಾವೇರಿ ನಗರದ ಹೊಸಮನಿ ಸಿದ್ದಪ್ಪ ಜಿಲ್ಲಾ ಕ್ರೀಡಾಂಗಣದಿಂದ ಬೆಂಗಳೂರಿನಲ್ಲಿ ಜರುಗುತ್ತಿರುವ ರಾಜ್ಯ ಮಟ್ಟದ ಕಾರ್ಯಕ್ರಮಕ್ಕೆ ತೆರಳುತ್ತಿರುವ ಬೈಕ್ ರಾಲಿಗೆ ಚಾಲನೆ ಕಾರ್ಯಕ್ರಮ ಜರುಗಲಿದೆ. ದಿನಾಂಕ 15-09-2025 ರಂದು ಬೆಳಿಗ್ಗೆ 8 ಗಂಟೆಗೆ ಹಾವೇರಿ ನಗರದ ಹೊಸಮನಿ ಸಿದ್ದಪ್ಪ ಜಿಲ್ಲಾ ಕ್ರೀಡಾಂಗಣದಲ್ಲಿ ಸೈಕಲ್ ಜಾಥಾ ರಾಲಿಗೆ ಚಾಲನೆ ನೀಡಲಾಗುವುದ, ಜೆ.ಪಿ. ಸರ್ಕಲ್-ಎಂ.ಜಿ ರಸ್ತೆ ಮೂಲಕ ಹುಕ್ಕೇರಿಮಠ-ಗುತ್ತಲ ರಸ್ತೆ ಮಾರ್ಗವಾಗಿ ಹೊಸಮನಿ ಸಿದ್ದಪ್ಪ ವೃತ್ತ-ಹಾನಗಲ್ ರಸ್ತೆ ಮಾರ್ಗವಾಗಿ ಬೈಪಾಸ್‌ವರೆಗೆ ತೆರಳಿ, ಬೈಪಾಸ್‌ನಿಂದ ಹಿಂದಿರುಗಿ ಹೊಸಮನಿ ಸಿದ್ದಪ್ಪ ವೃತ್ತ- ಪಿ.ಬಿ. ರಸ್ತೆ ಮಾರ್ಗವಾಗಿ ಜಿ.ಹೆಚ್. ಕಾಲೇಜು ಹಿಂಭಾಗದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ಭವನಕ್ಕೆ ತಲುಪಲಿದೆ.

ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಮುಖ್ಯ ವೇದಿಕೆ ಕಾರ್ಯಕ್ರಮ ಏರ್ಪಡಿಸಲಾಗಿದೆ. ಈ ಕಾರ್ಯಕ್ರಮಗಳಲ್ಲಿ ಜಿಲ್ಲೆಯ ಎಲ್ಲ ಗಣ್ಯ ವ್ಯಕ್ತಿಗಳು. ಚುನಾಯಿತ ಪ್ರತಿನಿಧಿಗಳು, ಸಂಘ-ಸಂಸ್ಥೆಗಳ ಅಧ್ಯಕ್ಷರು, ಪದಾಧಿಕಾರಿಗಳು, ಎಲ್ಲಾ ಸಮುದಾಯದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಪತ್ರಿಕಾ ಹಾಗೂ ಮಾದ್ಯಮ ಮಿತ್ರರು ಮತ್ತು ಸಮಸ್ತ ನಾಗರಿಕರು ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಅಂಚೆ ಮಹಾ ಉದ್ಯಮ ಸಪ್ತಾಹ

**ಹಾವೇರಿ:** ಹಾವೇರಿ ಅಂಚೆ ವಿಭಾಗದ ವ್ಯಾಪ್ತಿಗೆ ಬರುವ ಹಾವೇರಿ ಜಿಲ್ಲೆಯ ರಾಣೆಬೆನ್ನೂರ. ಶಿಗ್ಗಾಂವ, ಸವಣೂರ, ಬ್ಯಾಡಗಿ, ಹಾನಗಲ್, ಹಿರೇಕೆರೂರ, ರಟ್ಟಿಹಳ್ಳಿ ಹಾಗೂ ಹಾವೇರಿ ತಾಲೂಕುಗಳ ವ್ಯಾಪ್ತಿಯಲ್ಲಿ ಸೆ.15 ರಿಂದ 20 ರವರೆಗೆ ಅಂಚೆ ಮಹಾ ಉದ್ಯಮ ಸಪ್ತಾಹವನ್ನು ಆಯೋಜಿಸಲಾಗಿದೆ. ಅಂಚೆ ಮಹಾ ಉದ್ಯಮ ಸಪ್ತಾಹ ಅಭಿಯಾನದಲ್ಲಿ ಬ್ಯಾಂಕ್‌ಗಳು, ಸರ್ಕಾರಿ ಅಥವಾ ಖಾಸಗಿ ಕಚೇರಿಗಳು. ಶೈಕ್ಷಣಿಕ ಸಂಸ್ಥೆಗಳು, ಉದ್ಯಮಿಗಳು ಹಾಗೂ ಸಾಮಾನ್ಯ ಗ್ರಾಹಕರಿಗೆ ಸ್ಪೀಡ್ ಪೋಸ್ಟ್, ಪಾರ್ಸಲ್, ಸಿ.ಒ.ಡಿ.ಇಂಟರನ್ಯಾಷನಲ್ಸ್ ಮೇಲ್ಸ್ ಮುಂತಾದ ಸೇವೆಗಳ ಪ್ರಚಾರ ನಡೆಸಲಾಗುವುದು ಹಾಗೂ ನೋಂದಣಿ ಮಾಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಸಮಿಪದ ಅಂಚೆ ಕಚೇರಿಗಳನ್ನು ಸಂಪರ್ಕಿಸಿ ಎಂದು ವಿಭಾಗದ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಫಾಸ್ಟ್‌ಫುಡ್‌ಗೆ ದಾಸರಾಗದೇ ಪೌಷ್ಠಿಕ ಆಹಾರ ಸೇವಿಸಿ

**ಹಾವೇರಿ:** ಫಾಸ್ಟ್‌ಫುಡ್‌ಗೆ ದಾಸರಾಗದೇ ಉತ್ತಮ ಪೌಷ್ಠಿಕ ಆಹಾರ ಸೇವಿಸಬೇಕು. ನಮ್ಮ ಮುಂದಿನ ಪೀಳಿಗೆಗೆ ನಮ್ಮ ಸಾಂಪ್ರದಾಯಿಕ ಆಹಾರ ಪದ್ಧತಿ ಪರಿಚಯಿಸುವ ಕೆಲಸವಾಗಬೇಕು ಎಂದು ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಶ್ರೀಶೈಲಜಾ ಎಚ್.ವಿ. ಅವರು ಹೇಳಿದರು.

ಹಾವೇರಿ ನಗರದ ಜಿಲ್ಲಾ ನೌಕರರ ಭವದಲ್ಲಿ ಶುಕ್ರವಾರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ನ್ಯಾಯವಾದಿಗಳ ಸಂಘ, ಶಿಶು ಅಭಿವೃದ್ಧ ಇಲಾಖೆ, ತಾಲೂಕು ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಶಾಲಾ ಶಿಕ್ಷಣ ಇಲಾಖೆ ಸಹಯೋಗದಲ್ಲಿ ವಿಶ್ವ ಪೋಷಣ ದಿನಾಚರಣೆ ಹಾಗೂ ರಾಷ್ಟ್ರೀಯ ಪೋಷಣ ಸಪ್ತಾಹ ಅಂಗವಾಗಿ ಆಯೋಜಿಸಲಾದ ಕಾನೂನು ಅರಿವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ತಾಯಂದಿರು ಹಾಗೂ ಮಕ್ಕಳಲ್ಲಿ ಕಂಡುಬರುವ ಅಪೌಷ್ಠಿಕತೆ ತೊಡೆದು ಹಾಕಲು ಸರ್ಕಾರ ಜಾರಿಗೊಳಿಸಿದ ಯೋಜನೆಗಳು ಎಲ್ಲರೂ ತಲುಪಬೇಕು. ಅಪೌಷ್ಠಿಕತೆ ನಿವಾರಣೆಗೆ ಸಿರಿಧಾನ್ಯಗಳು, ಮೊಳಕೆಕಾಳು, ಹಣ್ಣು-ತರಕಾರಿಗಳನ್ನು ದೈನಂದಿನ



ಆಹಾರದಲ್ಲಿ ಬಳಸಬೇಕು ಎಂದು ಸಲಹೆ ನೀಡಿದರು.

ಇದೇ ಸೆ.13 ರಂದು ರಾಷ್ಟ್ರೀಯ ಲೋಕ ಅದಾಲತ್ ಹಾಗೂ 90 ದಿನಗಳ ವಿಶೇಷ ಮಧ್ಯಸ್ಥಿಕೆ ಅಭಿಯಾನ ನಡೆಯುತ್ತಿದೆ, ತಾವು ಇವುಗಳ ಸದುಪಯೋಗ ಪಡೆಯುವ ಜೊತೆಗೆ ಇತರರಿಗೂ ತಿಳಿಸಬೇಕು. ಜನತಾ ನ್ಯಾಯಾಲಯದಲ್ಲಿಯೂ ಸಹ ಯಾವುದೇ ಖರ್ಚಿಲ್ಲದೆ ಪ್ರಕರಣಗಳನ್ನು ಬಗೆಹರಿಸಿಕೊಳ್ಳಬಹುದು. "ಘರ್ ಘರ್ ಮೇ ನ್ಯಾಯ ಕೀ ಜಾಗೃತಿ" ಎಂಬ ಘೋಷವಾಕ್ಯದೊಂದಿಗೆ ಜನಸಾಮಾನ್ಯರಿಗೆ ಉಚಿತ ಕಾನೂನು ಅರಿವು ಮತ್ತು ನೆರವು ನೀಡಲಾಗುತ್ತಿದೆ, ಜಿಲ್ಲಾ ಜಾಗೃತಿ ಸಮಿತಿ ಸಹ ರಚಿಸಲಾಗಿದೆ. ಏನಾದರೂ ಸಮಸ್ಯೆಗಳಿದ್ದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಥವಾ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರದ ಟೋಲ್ ಫ್ರೀ ಸಂಖ್ಯೆ 15100ಗೆ ಕರೆ ಮಾಡಬಹುದು ಎಂದು ಹೇಳಿದರು.

ಕಾನೂನು ನೆರವು ಸಹಾಯಕ ಅಭಿರಕ್ಷಣಾ ವಕೀಲ ಎನ್.ಎನ್.ಡಿಳ್ಳೆಪ್ಪನವರ ಅವರು ಅಪೌಷ್ಠಿಕ ಆಹಾರ ಮತ್ತು ಪೋಕ್ಸೋ ಕಾಯ್ದೆ ಕುರಿತು ಉಪನ್ಯಾಸ ನೀಡಿದರು.

ರಾಷ್ಟ್ರೀಯ ಲೋಕ ಅದಾಲತ್ ಹಾಗೂ 90 ದಿನಗಳ ವಿಶೇಷ ಮಧ್ಯಸ್ಥಿಕೆ ಅಭಿಯಾನ, ಖಾಯಂ ಜನತಾ ನ್ಯಾಯಾಲಯದ ಉಪಯುಕ್ತ ಸೇವೆಗಳು ಹಾಗೂ "ಘರ್ ಘರ್ ಮೇ ನ್ಯಾಯ ಕೀ ಜಾಗೃತಿ" ಉಚಿತ ಕಾನೂನು ಅರಿವು ಕುರಿತು ಪ್ರಚಾರ ಸಾಮಗ್ರಿಗಳನ್ನು ವಿತರಣೆ ಮಾಡಲಾಯಿತು.

ಜಿಲ್ಲಾ ನಿರೂಪಣಾಧಿಕಾರಿ ಶೈಲಾ ಕುರಹಟ್ಟಿ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ನೇತ್ರಾವತಿ ಇತರರು ಉಪಸ್ಥಿತರಿದ್ದರು.

### ಸೆ.18ರಂದು ಪೂರ್ವ ಸಿದ್ಧತಾ ಸಭೆ

**ಹಾನಗಲ್:** ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ತಾಲೂಕ ಮಟ್ಟದಲ್ಲಿ ಅರ್ಥಪೂರ್ಣವಾಗಿ ಆಚರಣೆ ಮಾಡುವ ಕುರಿತು ಕಾರ್ಯಕ್ರಮದ ಪೂರ್ವ ತಯಾರಿ ಸಿದ್ದತೆ ಸಭೆ ಸೆ.18 ರಂದು ಬೆಳಿಗ್ಗೆ 11 ಗಂಟೆಗೆ ಹಾನಗಲ್ ತಹಶೀಲ್ದಾರ ಅಧ್ಯಕ್ಷತೆಯಲ್ಲಿ ತಹಶೀಲ್ದಾರ ಕಚೇರಿ ಸಭಾಂಗಣದಲ್ಲಿ ಕರೆಯಲಾಗಿದೆ. ಈ ಸಭೆಗೆ ತಾಲೂಕ ಮಟ್ಟದ ಎಲ್ಲಾ ಇಲಾಖೆಯ ಅಧಿಕಾರಿಗಳು ಹಾಗೂ ಶ್ರೀ ಮಹರ್ಷಿ ವಾಲ್ಮೀಕಿ ಸಮಾಜ ಭಾಂದವರು, ಸಂಘ ಸಂಸ್ಥೆಗಳ ಅಧ್ಯಕ್ಷರು/ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಖುದ್ದಾಗಿ ಹಾಜರಾಗಿ ತಮ್ಮ ಸಲಹೆ ಸೂಚನೆಗಳನ್ನು ನೀಡಲು ಹಾನಗಲ್ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು ಕೋರಿದ್ದಾರೆ.

# ಸ್ವದೇಶಿ ಸಂಸ್ಕೃತಿ ಮೈಗೂಡಿಸಿಕೊಳ್ಳಿ

**ಮುಧೋಳ:** ವಿದೇಶಿ ಉಡುಗೆ ತೊಡುಗೆ ಆಹಾರ ಪದ್ಧತಿಗೆ ಒಳಗಾಗಿ, ಸ್ವದೇಶಿಯತೆಯನ್ನು ಮರೆಯದಿರಿ. ಪರಕೀಯ ಸಂಸ್ಕೃತಿ ದಾಳಿಯಿಂದ ರಾಷ್ಟ್ರದ ಭದ್ರತೆಗೆ ಕುತ್ತು ಬರುತ್ತಿದೆ, ಹಾಗಾಗಿ ಹೆಣ್ಣು ಮಕ್ಕಳು ಜಾಗೃತರಾಗಿ ಸಾಮಾಜಿಕ ಜಾಲತಾಣಗಳ ಸುಳಿಗೆ ಸಿಲುಕಿ ದೇಶಿ ಸಂಸ್ಕೃತಿಯನ್ನು ಮರೆತು ಜೀವನ ನಡೆಸಬೇಡಿ ಎಂದು ರಾಷ್ಟ್ರದ ಉನ್ನತ ಪ್ರಶಸ್ತಿ ಪುರಸ್ಕೃತೆ ಡಾ.ಸಪ್ನಾ ಅನಿಗೋಳ ಹೇಳಿದರು.

ಬಿವಿವಿ. ಸಂಘದ ಸ್ಥಳಿಯ ದಾನಮ್ಮದೇವಿ ಮಹಿಳಾ ಮಹಾವಿದ್ಯಾಲಯದಲ್ಲಿ ಮಹಿಳಾ ಸಬಲೀಕರಣ ಘಟಕದ ಉದ್ಘಾಟನೆ ಮಾಡಿ ಅವರು ಮಾತನಾಡಿದರು. ಮುಂದಿನ ಪೀಳಿಗೆಗೆ ವೈಜ್ಞಾನಿಕ ತಳಹದಿಯ ಮೇಲೆ ನಮ್ಮ ಹಿರಿಯರು ಕಟ್ಟಿಕೊಟ್ಟಿರುವ ಸನಾತನ ಸಂಸ್ಕೃತಿಯು ಉಳಿಯುವಂತೆ ಮಾಡಿ ಭವ್ಯ ಭವಿಷ್ಯತ್ತಿನ ಭಾರತ ಕಟ್ಟುವಲ್ಲಿ ಕೈ ಜೋಡಿಸಿ ಎಂದರು.

ಕಾರ್ಯಕ್ರಮದಲ್ಲಿ ರಾಷ್ಟ್ರೋತ್ಥಾನ ಪರಿಷತ್ತಿನ ಕಾರ್ಯಕರ್ತ ಶ್ರೀನಿವಾಸ ಪಾಟೀಲ್, ಹಾಗು ಬಾಗಲಕೋಟ ಜಿಲ್ಲಾ ಸಂಯೋಜಕ ಹನುಮಂತ ನಾಗರಾಳ, ಪ್ರಾಚಾರ್ಯ ಎಮ್.ಎಮ್. ಹಿರೇಮಠ ಅವರು ಮಾತನಾಡಿ, ಹೆಣ್ಣು ಸಂಸ್ಕೃತಿಯ ಕಣ್ಣು, ಹೆಣ್ಣು ಭಾರತೀಯ ಪರಂಪರೆಯಲ್ಲಿ ಪೂಜ್ಯನೀಯ ಸ್ವರೂಪಳು ಹಾಗೂ ಭಾವನಾತ್ಮಕ ಜೀವಿಯಾಗಿದ್ದು, ಆಧುನಿಕ ಜಗತ್ತಿನ ಜೀವನ ಶೈಲಿಗೆ ಮಾರು ಹೋಗಿ ನಿಮ್ಮತನವನ್ನು ಕಳೆದು ಕೋಳ್ಳದಿರಿ. ಪಾಶ್ಚಾತ್ಯ ಮಾದರಿಯ ಕುರುಕಲು ತಿಂಡಿಯ ವ್ಯಾಮೋಹಕ್ಕೆ ನಿಮ್ಮ ಆರೋಗ್ಯವನ್ನು ಹಾಳು ಮಾಡಿಕೋಳ್ಳಬೇಡಿ ಎಂದು ಕಿವಿಮಾತು ಹೇಳಿದರು. ಪ್ರೊ. ಸರೋಜಿನಿ ಡಿ. ಅಂಬಿಗೇರ ಸ್ವಾಗತಿಸಿದರು. ಪ್ರೊ. ಎಮ್.ಎಸ್. ಲಂಗೋಟಿ ಪರಿಚಯಿಸಿದರು. ಪ್ರೊ ಗೀತಾ ಮೇತ್ರಿ ವಂದಿಸಿದರು. ಪ್ರೊ ಎ.ಸಿ. ಕೆರೂರ ನಿರೂಪಿಸಿದರು. ಬೋಧಕ, ಬೋಧಕೇತರ ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿನಿಯರು ಇತರರಿದ್ದರು.



## ಸೆ. 18ರಂದು ಪೂರ್ವಭಾವಿ ಸಭೆ

**ಧಾರವಾಡ:** ಜಿಲ್ಲಾಡಳಿತ, ಸಮಾಜ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಅಕ್ಟೋಬರ 7 ರಂದು ಆದಿಕವಿ ಶ್ರೀ ಮಹಿರ್ಷಿ ವಾಲ್ಮೀಕಿ ಜಯಂತಿಯನ್ನು ಆಯೋಜಿಸುವ ಹಿನ್ನಲೆಯಲ್ಲಿ ಪೂರ್ವಭಾವಿ ಸಭೆಯನ್ನು ಜಿಲ್ಲಾಧಿಕಾರಿಗಳ ಕಚೇರಿ ನೂತನ ಸಭಾಂಗಣದಲ್ಲಿ ಸೆಪ್ಟೆಂಬರ್ 18 ರಂದು ಸಂಜೆ 4 ಗಂಟೆಗೆ ಆಯೋಜಿಸಲಾಗಿದೆ.

ಸದರಿ ಸಭೆಗೆ ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ಸಮಾಜದ ಮುಖಂಡರು ಭಾಗವಹಿಸಿ ಸಲಹೆ, ಸೂಚನೆ ನೀಡಲು ಸಮಾಜ ಕಲ್ಯಾಣ ಇಲಾಖೆ ಪ್ರಕಟಣೆ ತಿಳಿಸಿದೆ.

## ನಾಳೆ ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನ ಆಚರಣೆ

**ಬಾಗಲಕೋಟೆ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಸೆಪ್ಟೆಂಬರ 15 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ 18ನೇ ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಕಾರ್ಯಕ್ರಮವನ್ನು ಉದ್ಘಾಟಿಸುವರು. ಶಾಸಕ ಹಾಗೂ ಬಿಟಿಡಿಎ ಅಧ್ಯಕ್ಷ ಎಚ್.ವಾಯ್.ಮೇಟಿ ಅಧ್ಯಕ್ಷತೆ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಶಾಸಕ ಹಾಗೂ ನವದೆಹಲಿಯ ಕರ್ನಾಟಕ ವಿಶೇಷ ಪ್ರತಿನಿಧಿ–2 ಪ್ರಕಾಶ ಹುಕ್ಕೇರಿ, ಬೀಳಗಿ ಶಾಸಕ ಹಾಗೂ ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷ ಜೆ.ಟಿ.ಪಾಟೀಲ, ಹುನಗುಂದ ಶಾಸಕ ಹಾಗೂ ರಾಜ್ಯ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮದ ಅಧ್ಯಕ್ಷ ವಿಜಯಾನಂದ ಕಾಶಪ್ಪನವರ, ಸಂಸದ ಪಿ.ಸಿ.ಗದ್ದಿಗೌಡರ ಸೇರಿದಂತೆ ರಾಜ್ಯಸಭಾ ಸದಸ್ಯರು, ವಿಧಾನ ಪರಿಷತ್ ಶಾಸಕರು, ವಿಧಾನಸಭೆ ಸದಸ್ಯರು ಹಾಗೂ ಇತರೆ ಗಣ್ಯಮಾನ್ಯರು ಆಗಮಿಸಲಿದ್ದಾರೆ.

ನವನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥ ಸಂಪತ್ ಲಮಾಣಿ ಅತಿಥಿ ಉಪನ್ಯಾಸ ನೀಡಲಿದ್ದಾರೆ. ಕಾರ್ಯಕ್ರಮದ ಪೂರ್ವದಲ್ಲಿ ಜಿಲ್ಲಾಡಳಿತ ಭವನದ ಆವರಣದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ ಪುತ್ಥಳಿಗೆ ಹೂ ಮಾಲಾರ್ಪಣೆ ಕಾರ್ಯಕ್ರಮ ಜರುಗಲಿದೆ. ಕಾರ್ಯಕ್ರಮಕ್ಕೆ ಜಿಲ್ಲೆಯ ಎಲ್ಲ ನಾಗರಿಕರು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಸಮುದಾಯ ಭಾಂದವರು ಹಾಗೂ ವಿವಿಧ ಸಂಘಟನೆಗಳ ಪ್ರತಿನಿಧಿಗಳು ಪಾಲ್ಗೊಳ್ಳುವಂತೆ ಸಮಾಜ ಕಲ್ಯಾಣ ಇಲಾಖೆಯ ಪ್ರಭಾರಿ ಉಪನಿರ್ದೇಶಕ ರಮೇಶ ಚವ್ಹಾಣ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಾ.ವಿ.ಸಂ.35

## ಕೃಷಿ ಪರಿಕರ ಮಾರಾಟಗಾರಿಗೆ ಸೂಚನೆ

**ಬೆಳಗಾವಿ:** ಬೆಳಗಾವಿ ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನಲ್ಲಿ 7.25 ಹೆ. ಪ್ರದೇಶದಲ್ಲಿ ವಿವಿಧ ಬೆಳೆಗಳು ಅವರಿಸಿದ್ದು ಕಟಾವು ಹಂತದಲಿವೆ. ಇನ್ನು ಹಿಂಗಾರು ಬಿತ್ತನೆಗೆ ಭೂಮಿ ಹದ ಮಾಡುದ ಕಾರ್ಯ ನಡೆದಿರುತ್ತದೆ. ಭೂಮಿಯ ಫಲವತ್ತತೆ ಕಾಪಾಡಲು ಸಮತೋಲನ ಹಾಗೂ ಸಿಪಾರಸ್ಸು ಸಾವಯವ ಗೊಬ್ಬರಗಳಾದ ಕೊಟ್ಟಿಗೆಗೊಬ್ಬರ, ಜೈವಿಕಗೊಬ್ಬರ ಹಾಗೂ ರಾಸಾಯನಿಕಗೊಬ್ಬರಗಳನ್ನು ಸಮಗ್ರವಾಗಿ ಬಳಸಬೇಕಾಗಿದೆ. ಅತೀ ಹೆಚ್ಚು ಯೂರಿಯಾ ಗೊಬ್ಬರ ಬಳಕೆಯಿಂದ ಭೂಮಿಗೆ ಹಾನಿ ಅಲ್ಲದೆ ಮಾನವನ ಆರೋಗ್ಯದ ಮೇಲೆ ಕೂಡ ದುಷ್ಪರಿಣಾಮಗಳು ಉಂಟಾಗುವವು. ಕಾರಣ ಜಿಲ್ಲೆಯ ಎಲ್ಲ ಪರಿಕರ ಮಾರಾಟಗಾರರು ಕೇಂದ್ರ ಮತ್ತು ರಾಜ್ಯ ಸರ್ಕಾದ ಸೊತ್ತೋಲೆಗಳ ಅನ್ವಯ ರಸಗೊಬ್ಬರ ಮಾರಾಟ ಮಾಡುವಾಗ ರೈತರು ಟಾಪ್ 20 ಮತ್ತು ಟಾಪ್–40 ಖರೀದಿದಾರರ ಲಿಸ್ಟನಲ್ಲಿ ಬರದಂತೆ, ಆಧಾರ್ ಕಾರ್ಡಗಳನ್ನು ಕಡ್ಡಾಯವಾಗಿ ಬಳಸಿ ಮತ್ತು ಪಿ.ಓ.ಎಸ್ ಮೂಲಕ ಕಡ್ಡಾಯವಾಗಿ ರಸಗೊಬ್ಬರಗಳನ್ನು ವಿತರಣೆ ಮಾಡಬೇಕು. ನಿಯಮಗಳನ್ನು ಉಲ್ಲಂಘಿಸಿದ ಮಾರಾಟಗಾರರ ಮೇಲೆ ಕಾನೂನು ಕ್ರಮಗಳನ್ನು ಜರುಗಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಸಹಾಯಕ ಕೃಷಿ ನಿರ್ದೇಶಕರ ಕಚೇರಿ ಅಥವಾ ಸಮೀಪದ ರೈತ ಸಂಪರ್ಕ ಕೇಂದ್ರಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ನಾಳೆಯಿಂದ ನ.21 ರವರೆಗೆ ಜಿಲ್ಲೆಯಲ್ಲಿ ಲಿಂಗತ್ವ ಅಲ್ಪಸಂಖ್ಯಾತರ, ಮಾಜಿ ದೇವದಾಸಿ ಕುಟುಂಬಗಳ ಸಮೀಕ್ಷೆ

# ಅರ್ಹರು ಸಮೀಕ್ಷೆಯಿಂದ ಹೊರಗುಳಿಯದಂತೆ ಕ್ರಮವಹಿಸಿ

**ಧಾರವಾಡ:** ಇಡೀ ದೇಶದಲ್ಲಿ ಮೊದಲ ಬಾರಿಗೆ ಕರ್ನಾಟಕ ರಾಜ್ಯ ಸರಕಾರವು ಲಿಂಗತ್ವ ಅಲ್ಪ ಸಂಖ್ಯಾತರ ಸಮೀಕ್ಷೆಯನ್ನು ರಾಜ್ಯಾದದ್ಯಂತ ಸೆಪ್ಟೆಂಬರ 15 ರಿಂದ ನವೆಂಬರ 21 ರವರೆಗೆ ಎಲ್ಲ ಜಿಲ್ಲೆಗಳಲ್ಲಿ ಹಮ್ಮಿಕೊಂಡಿದೆ. ಧಾರವಾಡ ಜಿಲ್ಲೆಯಲ್ಲಿಯೂ ಇದೇ ಸಮಯಕ್ಕೆ ಸಮೀಕ್ಷೆ ನಡೆಯಲಿದ್ದು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳು ಯಾವೊಬ್ಬ ಅರ್ಹ ಫಲಾನುಭವಿ ಸಮೀಕ್ಷೆಯಿಂದ ಹೊರಗುಳಿಯದಂತೆ ಸೂಕ್ತ ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹೇಳಿದರು.



ಗುರುವಾರ ಸಂಜೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಲಿಂಗತ್ವ ಅಲ್ಪಸಂಖ್ಯಾತರ ಹಾಗೂ ಮಾಜಿ ದೇವದಾಸಿಯರ ಕುಟುಂಬಗಳ ಮರು ಸಮೀಕ್ಷೆ ಕುರಿತು ವಿವಿಧ ಇಲಾಖೆ ಅಧಿಕಾರಿಗಳ ಜಿಲ್ಲಾ ಮಟ್ಟದ ಸಮಿತಿಯ ಪೂರ್ವಸಿದ್ದತಾ ಸಭೆ ಜರುಗಿಸಿ, ಮಾತನಾಡಿದರು.

ಜಿಲ್ಲೆಯಲ್ಲಿ ಸೆ.15 ರಿಂದ ನ.21 ರವರೆಗೆ ಲಿಂಗತ್ವ ಅಲ್ಪಸಂಖ್ಯಾತರ ಸಮೀಕ್ಷೆ ನಡೆಯಲಿದೆ. ಈಗಾಗಲೇ ಆರು ಜನ ಲಿಂಗತ್ವ ಅಲ್ಪಸಂಖ್ಯಾತರಿಗೆ ಸಮೀಕ್ಷೆ ನಡೆಸುವ ಕುರಿತು ರಾಜ್ಯಮಟ್ಟದಲ್ಲಿ ತರಬೇತಿ ನೀಡಿ, ದತ್ತಾಂಶ ದಾಖಲಿಸಲು ಟ್ಯಾಬ್‌ಗಳನ್ನು ನೀಡಲಾಗಿದೆ ಎಂದು ಅವರು ಹೇಳಿದರು.

ಲಿಂಗತ್ವ ಅಲ್ಪಸಂಖ್ಯಾತರ ಹಕ್ಕುಗಳಿಗಾಗಿ ಕೆಲಸ ಮಾಡುವ ಸರ್ಕಾರೇತರ ಸಂಸ್ಥೆಗಳಾದ ಸಮರ ಮತ್ತು ಸಾಮರ್ಥ್ಯ ಸಂಸ್ಥೆಗಳು ನೀಡಿರುವ ಮಾಹಿತಿ ಪ್ರಕಾರ ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ಸುಮಾರು 2000 ಜನ ಲಿಂಗತ್ವ ಅಲ್ಪ ಸಂಖ್ಯಾತರಿದ್ದಾರೆ. ಲಿಂಗತ್ವ ಅಲ್ಪಸಂಖ್ಯಾತರೆ ಸಮೀಕ್ಷೆದಾರರಾಗಿರುವದರಿಂದ ಅರ್ಹರು ಸಮೀಕ್ಷೆಯಿಂದ ಬಿಟ್ಟು ಹೋಗದಂತೆ ನೋಡಿಕೊಳ್ಳಲಾಗುತ್ತದೆ. ಪ್ರಶ್ನಾವಳಿಗಳನ್ನು ಸರಿಯಾಗಿ ಭರ್ತಿ ಮಾಡಿಸಬೇಕೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದರು.

ಮಾಜಿ ದೇವದಾಸಿಯರ ಮರು ಸಮೀಕ್ಷೆ: ರಾಜ್ಯ ಸರಕಾರದ ಇ–ಗವರನನ್ಸ್ ಸಿದ್ದಪಡಿಸಿರುವ ವೆಬ್ ಆ್ಯಪ್ ಮೂಲಕ ಸೆಪ್ಟೆಂಬರ್ 15 ರಿಂದ ನವೆಂಬರ 21 ರವರೆಗೆ ಧಾರವಾಡ ಜಿಲ್ಲೆಯಲ್ಲಿ ದೇವದಾಸಿಯರ ಮರು ಸಮೀಕ್ಷೆ ನಡೆಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದರು.

ಜಿಲ್ಲೆಯಲ್ಲಿ 409 ಮಾಜಿ ದೇವದಾಸಿಯರಿದ್ದಾರೆ. ರಾಜ್ಯ ಸರಕಾರವು 1993–94 ರಲ್ಲಿ ಹಾಗೂ 2007–08 ರಲ್ಲಿ ಮಾಜಿ ದೇವದಾಸಿಯರ ಸಮೀಕ್ಷೆ ಮಾಡಲಾಗಿದೆ ಎಂದರು.

ರಾಜ್ಯ ಸರಕಾರವು, ಮಾಜಿ ದೇವದಾಸಿಯರಿಗೆ ವಸತಿ, ಉದ್ಯೋಗ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ನೀಡಲು ಅನುಕೂಲವಾಗುವಂತೆ ಮರು ಸಮೀಕ್ಷೆ ಮಾಡಲು ಅದೇಶಿಸಿದೆ.

ಈ ಸಮೀಕ್ಷೆಯಲ್ಲಿ ಹಿಂದಿನ ಸಮೀಕ್ಷೆಗಳಲ್ಲಿದ್ದು, ಈಗ ಮರಣ ಹೊಂದಿದ್ದರೆ ಅವರ ಮಕ್ಕಳು ಅಥವಾ ಮೊಮ್ಮಕ್ಕಳು ನಮೂನೆ –1 ರಲ್ಲಿ ಮಾಹಿತಿ ಭರ್ತಿ ಮಾಡಬೇಕು. ಹಾಗೂ ಹಿಂದಿನ ಸಮೀಕ್ಷೆಯಲ್ಲಿರದ ಮತ್ತು ಈಗ ಜೀವಂತವಾಗಿದ್ದರೆ ನಮೂನೆ –2 ರಲ್ಲಿ ಮಾಹಿತಿ ಭರ್ತಿ ಮಾಡಬೇಕು. ಮತ್ತು ಹಿಂದಿನ ಸಮೀಕ್ಷೆಯಲ್ಲಿ ಇರದೆ, ಮರಣ ಹೊಂದಿದ್ದರೆ ಅಂತವರ ಕುಟುಂಬ ಸದಸ್ಯರು ನಮೂನೆ –3 ರಲ್ಲಿ ಮಾಹಿತಿ ಭರ್ತಿ ಮಾಡಿ ಸಲ್ಲಿಸಬೇಕು ಎಂದರು.

ಮಾಜಿ ದೇವದಾಸಿಯರ ಸಮೀಕ್ಷಾ ಅರ್ಜಿಗಳು ತಾಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯಲ್ಲಿ ಲಭ್ಯವಿದ್ದು, ಅರ್ಹರು ಪಡೆದು ಭರ್ತಿ ಮಾಡಿ, ಅಗತ್ಯ ದಾಖಲೆಗಳೊಂದಿಗೆ ಸೆಪ್ಟೆಂಬರ 15 ರಿಂದ 30 ರವರೆಗೆ ಅರ್ಜಿ ಸಲ್ಲಿಸಬೇಕು. ಅವುಗಳನ್ನು ತಹಶಿಲ್ದಾರ ಅಧ್ಯಕ್ಷತೆಯ ತಾಲೂಕು ಸಮಿತಿಗಳು ನಿಯಮಾನುಸಾರ ಪರಿಶೀಲಿಸಿ, ಜಿಲ್ಲಾ ಸಮಿತಿಗೆ ಕಳುಹಿಸುತ್ತಾರೆ ಎಂದು ಅವರು ಹೇಳಿದರು.

ನವೆಂಬರ 21 ರ ನಂತರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಜಿಲ್ಲಾ ಸಮಿತಿ ಎಲ್ಲ ತಾಲೂಕು ಸಮಿತಿಗಳಿಂದ ಬಂದ ಅರ್ಜಿಗಳನ್ನು ಪರಿಶೀಲಿಸಿ, ಅರ್ಹ ಅರ್ಜಿಗಳನ್ನು ಪರಿಗಣಿಸಿ, ಅರ್ಹತಾ ಪ್ರಮಾಣಪತ್ರ ನೀಡುತ್ತದೆ. ಇದನ್ನು ನಂತರ ಅರ್ಹತಾ ಪ್ರಮಾಣಪತ್ರ ಪಡೆದವರು ತಾಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯಲ್ಲಿ ಮಾಹಿತಿ ನೀಡಿ, ದಾಖಲಿಸಬೇಕೆಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಇಲಾಖೆ ಮೂಲಕ ಮಾಜಿ ದೇವದಾಸಿಯರ ಮರು ಸಮೀಕ್ಷೆ ಮತ್ತು ಲಿಂಗತ್ವ ಅಲ್ಪಸಂಖ್ಯಾತರ ಸಮೀಕ್ಷೆ ಕುರಿತು ವ್ಯಾಪಕ ಪ್ರಚಾರ ನೀಡಿ, ಸಮುದಾಯಗಳಿಗೆ ತಿಳುವಳಿಕೆ ನೀಡಬೇಕು. ಮತ್ತು ಸಮೀಕ್ಷೆಯಿಂದ ಯಾರು ಹೊರಗುಳಿಯದಂತೆ ನೋಡಿಕೊಳ್ಳಬೇಕೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಡಾ.ಹೆಚ್.ಹೆಚ್.ಕುಕನೂರ ಸ್ವಾಗತಿಸಿ, ಸಭೆ ನಿರ್ವಹಿಸಿದರು. ಯೋಜನಾಧಿಕಾರಿ ನಂದಿನಿ ವಂದಿಸಿದರು.

ಸಭೆಯಲ್ಲಿ ಎಲ್ಲ ತಾಲೂಕುಗಳ ತಹಶಿಲ್ದಾರರು, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಅಭಿವೃದ್ಧಿ ನಿಗಮದ ಅಧಿಕಾರಿಗಳು, ಲಿಂಗತ್ವ ಅಲ್ಪಸಂಖ್ಯಾತರ ಪ್ರತಿನಿಧಿಹಳು, ಮಾಜಿ ದೇವದಾಸಿಯರು ಉಪಸ್ಥಿತರಿದ್ದರು.



## ವಿಟಿಯು ಉಪಕುಲಪತಿ ಡಾ. ವಿದ್ಯಾಶಂಕರಗೆ ಸನ್ಮಾನ

**ಬೆಳಗಾವಿ:** ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ (ವಿಟಿಯು) ಕುಲಪತಿಗಳಾಗಿ ದ್ವಿತೀಯ ಅವಧಿಗೆ ಅಧಿಕಾರ ವಹಿಸಿಕೊಂಡಿರುವ ಡಾ. ಎಸ್. ವಿದ್ಯಾಶಂಕರರಿಗೆ ಬೆಳಗಾವಿ ಮಹಾನಗರದ ಬಿಜೆಪಿ ಜಿಲ್ಲಾ ಉಪಾಧ್ಯಕ್ಷರಾದ ಮಹಾಂತೇಶ ವಕ್ಕುಂದ ಅವರು ಸನ್ಮಾನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮಹಾಂತೇಶ ವಕ್ಕುಂದ ಮಾತನಾಡಿ "ಡಾ. ವಿದ್ಯಾಶಂಕರರವರ ಮುಂದಿನ ಕಾರ್ಯಕಾಲವು ವಿವಿಯ ಸಮಗ್ರ ಅಭಿವೃದ್ಧಿಗೆ ಪೂರಕವಾಗುವುದರೊಂದಿಗೆ, ಬೆಳಗಾವಿ ಜಿಲ್ಲೆಯ ವಿದ್ಯಾರ್ಥಿಗಳಿಗೆ ನೂತನ ಅವಕಾಶಗಳ ಬಾಗಿಲು ತೆರೆದಿಡಲಿದೆ. ತಾಂತ್ರಿಕ ಶಿಕ್ಷಣಕ್ಕೆ ರಾಷ್ಟ್ರೀಯ ಮಟ್ಟದಲ್ಲಿ ಹೊಸ ಹೊಳಪು ನೀಡುವಲ್ಲಿ ಅವರ ನೇತೃತ್ವ ಮಹತ್ವದ ಪಾತ್ರವಹಿಸಲಿದೆ" ಎಂದು ಅಭಿಪ್ರಾಯಪಟ್ಟರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಡಾ. ವಿದ್ಯಾಶಂಕರರು ವಿಶ್ವವಿದ್ಯಾಲಯದ ಶೈಕ್ಷಣಿಕ ಗುಣಮಟ್ಟ, ಸಂಶೋಧನಾ ಚಟುವಟಿಕೆಗಳು ಹಾಗೂ ವಿದ್ಯಾರ್ಥಿ?ಕೇಂದ್ರೀಕೃತ ಕಾರ್ಯಕ್ರಮಗಳನ್ನು ಇನ್ನಷ್ಟು ಬಲಪಡಿಸುವ ದೃಢಸಂಕಲ್ಪವನ್ನು ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಅಂತರ್ಯಾಮಿ ಫೌಂಡೇಶನ್ ಅಧ್ಯಕ್ಷ ನಾಗರಾಜ ಗಸ್ತಿ, ಕಾರ್ಯದರ್ಶಿ ಗಿರೀಶ ಬಡಿಗೇರ ಹಾಗೂ ಅಕ್ಷಯ ಹಿರೇಮಠ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

## ತಾಯಿ ಹೆಸರಲ್ಲಿ ಗಿಡ ನೆಡುವ ಕಾರ್ಯಕ್ರಮ

**ಕೊಪ್ಪಳ:** ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಾರ್ಯಾಲಯ, ಕೊಪ್ಪಳ ಇವರ ಸಂಯುಕ್ತಾಶ್ರದಲ್ಲಿ ಶುಕ್ರವಾರದಂದು ಕೊಪ್ಪಳ ಯೋಜನೆಯ ವದಗನಾಳ 1ನೇ ಅಂಗನವಾಡಿ ಕೇಂದ್ರದಲ್ಲಿ 8 ನೇ ರಾಷ್ಟ್ರೀಯ ಪೋಷಣ್ ಮಾಸಾಚರಣೆಯ ಅಂಗವಾಗಿ ತಾಯಿಯ ಹೆಸರಿನಲ್ಲಿ ಒಂದು ಗಿಡ ನೆಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ ದರಗದ ಅವರು ಪ್ರತಿ ವರ್ಷ ಪೋಷಣ್ ಮಾಸಾಚರಣೆ ಕಾರ್ಯಕ್ರವನ್ನು ಪ್ರತಿ ಅಂಗನವಾಡಿ ಕೇಂದ್ರಗಳಲ್ಲಿ ಮಾಹೆವಾರು ಮಾಡುವರು. ಕಾರ್ಯಕ್ರಮದ ಉದ್ದೇಶ ಪೌಷ್ಠಿಕ ಆಹಾರ ಸೇವನೆ ಮುಖ್ಯ ಎಂಬುದರ ಕುರಿತು ಜಾಗೃತಿ ಮೂಡಿಸುವುದು. ದೇಹದ ಸರ್ವಾಂಗೀಣ ಅಭಿವೃದ್ಧಿಗೆ ಪೌಷ್ಟಿಕ ಆಹಾರ ಸೇವನೆ ತುಂಬಾ ಮುಖ್ಯ. ಆಹಾರದಲ್ಲಿ ವೈವಿಧ್ಯತೆ ಕಂಡುಕೊಳ್ಳಿ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಪರಶುರಾಮ ಶೆಟ್ಟೆಪ್ಪನವರ, ರೋಹಿಣಿ ಕೋಟಗಾರ, ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಾದ ಶಿವಶರಣಪ್ಪ ಗದ್ದಿ, ಶಾಲಾ ಮುಖ್ಯೋಪಾಧ್ಯಾಯರು, ಗ್ರಾಮ ಪಂಚಾಯತಿ ಸದಸ್ಯರು, ಗರ್ಭಿಣಿ, ಬಾಣಂತಿಯರು, ವಲಯದ ಮೇಲ್ವಿಚಾರಕಿಯರು, ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು, ಆಶಾ ಕಾರ್ಯಕರ್ತೆಯರು ಹಾಜರಿದ್ದರು.





## ಮಾಜಿ ದೇವದಾಸಿ ಮಹಿಳೆಯರ ಮರು ಸಮೀಕ್ಷೆ

**ಬಾಗಲಕೋಟೆ:** ಜಿಲ್ಲೆಯಲ್ಲಿ ಸೆಪ್ಟೆಂಬರ 15 ರಿಂದ 45 ದಿನಗಳ ಕಾಲ ಲಿಂಗತ್ವ ಅಲ್ಪಸಂಖ್ಯಾತರ ಬೇಸ್ ಲೈನ್ ಸಮೀಕ್ಷೆ ಮತ್ತು ಮಾಜಿ ದೇವದಾಸಿ ಮಹಿಳೆಯರ ಮರು ಸಮೀಕ್ಷೆ ಕಾರ್ಯ ನಡೆಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ತಿಳಿಸಿದ್ದಾರೆ.

ಶುಕ್ರವಾರ ಮಾಜಿ ದೇವದಾಸಿ ಮಹಿಳೆಯ ಮರು ಸಮೀಕ್ಷೆ ಕುರಿತು ಮಾಹಿತಿಯುಳ್ಳ ಪ್ರಚಾರದ ಪೋಸ್ಟರಗಳನ್ನು ಬಿಡುಗಡೆಗೊಳಿಸಿ ಮಾತನಾಡಿದ ಜಿಲ್ಲಾಧಿಕಾರಿಗಳು ಲಿಂಗತ್ವ ಅಲ್ಪಸಂಖ್ಯಾತರ ಬೇಸ್‌ಲೈನ್ ಸಮೀಕ್ಷೆಯು ಆಯಾ ತಾಲೂಕಿನ ಆಸ್ಪತ್ರೆಗಳಲ್ಲಿರುವ ಎ.ಆರ್.ಟಿ ಕೇಂದ್ರ ಮತ್ತು ಮಾಜಿ ದೇವದಾಸಿ ಮಹಿಳೆಯರ ಮರು ಸಮೀಕ್ಷೆಯನ್ನು ಆಯಾ ತಾಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯಲ್ಲಿ ನಡೆಸಲಾಗುತ್ತಿದೆ. ಆದ್ದರಿಂದ ಈ ಸಮೀಕ್ಷೆಯಲ್ಲಿ ಲಿಂಗತ್ವ ಅಲ್ಪಸಂಖ್ಯಾತರು ಮತ್ತು ಮಾಜಿ ದೇವದಾಸಿ ಮಹಿಳೆಯರು ಭಾಗವಹಿಸುವಂತೆ ಕೋರಿದರು. ಹೆಚ್ಚಿನ ಮಾಹಿತಿಗಾಗಿ ದೂಸಂ.08354–297464ಗೆ ಸಂಪರ್ಕಿಸಲು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಪ್ರಭಾಕರ ಕೆ ಸೇರಿದಂತೆ ಮಿಲನ ಸಂಸ್ಥೆಯ ಪ್ರತಿನಿಧಿಗಳು ಇದ್ದರು.

### ಅಥಣಿ ತಾಲೂಕಿಗೆ 9 ಸರಕಾರಿ ಪ್ರೌಢ ಶಾಲೆಗಳು ಮಂಜೂರು

# ಖವಟಕೊಪ್ಪ ಗ್ರಾಮದ ಕನಸು, ನನಸು

**ಮೋಳೆ** ರಾಜ್ಯದಲ್ಲಿ ಹೊಸದಾಗಿ 140 ಸರಕಾರಿ ಪ್ರೌಢ ಶಾಲೆಗಳು ಮಂಜೂರಾಗಿವೆ, ಅದರಲ್ಲಿ ಅಥಣಿ ಮತಕ್ಷೇತ್ರಕ್ಕೆ 9 ಸರಕಾರಿ ಪ್ರೌಢ ಶಾಲೆಗಳನ್ನು ನೀಡಿರುವ ಶಿಕ್ಷಣ ಸಚಿವ ಮಧು ಬಂಗಾರೆಪ್ಪನವರಿಗೆ ಮಾಜಿ ಉಪಮುಖ್ಯಮಂತ್ರಿ, ಅಥಣಿ ಶಾಸಕ ಲಕ್ಷ್ಮಣ ಸವದಿ ಈ ಸಭೆಯ ಮೂಲಕ ಅಭಿನಂಧನೆಗಳನ್ನು ಸಲ್ಲಿಸಿದರು.

ಅವರು ಶುಕ್ರವಾರ ಅಥಣಿ ತಾಲೂಕಿನ ಖವಟಕೊಪ್ಪ ಗ್ರಾಮದಲ್ಲಿ ನೂತನವಾಗಿ ಮಂಜೂರಾದ ಸರಕಾರಿ ಪ್ರೌಢ ಶಾಲೆಯನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು. ಸ್ವಾತಂತ್ರ್ಯದ ನಂತರದಿಂದ ಇಲ್ಲಿಯವರೆಗೂ ಅಥಣಿ ಪಟ್ಟಣದಲ್ಲಿ ಒಂದು ಸರಕಾರಿ ಪ್ರೌಢ ಶಾಲೆ ಇರಲಿಲ್ಲ ಇದಕ್ಕೆ ಅನೇಕ ತಾಂತ್ರಿಕ ಅಡಚಣೆಗಳನ್ನು ಶಿಕ್ಷಣ ಇಲಾಖೆ ಕೊಡುತ್ತಿತ್ತು ಹೀಗಾಗಿ 75 ವರ್ಷಗಳಿಂದಲೂ ಅಥಣಿಯಲ್ಲಿ ಸರಕಾರಿ ಪ್ರೌಢ ಶಾಲೆ ಇರಲಿಲ್ಲ ಎಂದ ಅವರು ನಾನು ಶಿಕ್ಷಣ ಸಚಿವ ಮಧು ಬಂಗಾರಪ್ಪನವರಿಗೆ ವಿಶೇಷ ಮನವಿ ಮಾಡಿದ ಪರಿಣಾಮ ಅಥಣಿ ಸೇರಿದಂತೆ ತಾಲೂಕಿನ 9 ಗ್ರಾಮಗಳಿಗೆ ಸರಕಾರಿ ಪ್ರೌಢ ಶಾಲೆಗಳು ಮಂಜೂರಾಗಿವೆ ಎಂದರು.



ಸರಕಾರಿ ಶಾಲೆಗಳಲ್ಲಿ ಕಲಿತ ವಿದ್ಯಾರ್ಥಿಗಳೇ ಹೆಚ್ಚಿನ ಸಂಖ್ಯೆಯಲ್ಲಿ ಮೇಲುಗೈ ಸಾಧಿಸಿದ್ದು, ಈ ದೇಶದ ಪ್ರಧಾನಿ ನರೇಂದ್ರ ಮೋದಿ, ರಾಜ್ಯದ ಮುಖ್ಯಮಂತ್ರಿ ಸಿದ್ಧರಾಮಯ್ಯ ಸಹಿತ ಅತ್ಯುನ್ನತ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹೆಚ್ಚಿನವರು ಸರಕಾರಿ ಶಾಲೆಗಳಲ್ಲಿಯೇ ಶಿಕ್ಷಣ ಪಡೆದಿದ್ದಾರೆ ಎಂದ ಅವರು ಕೆಲ ದಶಕಗಳ ಹಿಂದೆ ಶಿಕ್ಷಣ ದುರ್ಲಭವಾಗಿತ್ತು ಆದರೆ ಇಂದು ಕೇಂದ್ರ ಹಾಗೂ ರಾಜ್ಯ ಸರಕಾರಗಳು ಶಿಕ್ಷಣ ವ್ಯವಸ್ಥೆ ಎಲ್ಲರಿಗೂ ಸುಲಭವಾಗಿ ತಲುಪಬೇಕು ಈ ನಿಟ್ಟಿನಲ್ಲಿ ಅನೇಕ ಯೋಜನೆಗಳು ಅನುಷ್ಠಾನಗೊಂಡಿವೆ ಎಂದರು.

ಖವಟಕೊಪ್ಪ ಗ್ರಾಮಸ್ಥರು ಗ್ರಾಮದ ಅಭಿವೃದ್ಧಿಗಾಗಿ ಸ್ಮಶಾನ ಭೂಮಿಯ ಮಂಜೂರಾತಿ, ಗುಣಮಟ್ಟದ ವಿದ್ಯುತ್‌ಗಾಗಿ ಗ್ರಾಮದ ಸಮೀಪದಲ್ಲಿ ನಿರ್ಮಿಸುತ್ತಿರುವ 110 ಕೆ.ವಿ ವಿದ್ಯುತ್ ವಿತರಣಾ ಘಟಕವನ್ನು ಬೇಗ ಪೂರ್ಣಗೊಳಿಸಬೇಕು ಈ ರೀತಿ ಅನೇಕ ಬೇಡಿಕೆಗಳನ್ನು ನನ್ನ ಮುಂದೆ ಇಟ್ಟಿದ್ದು, ಇವುಗಳನ್ನು ಹಂತ ಹಂತವಾಗಿ ಈಡೇರಿಸುವೆ ಎಂದರು.

ಕಾರ್ಯಕ್ರಮದಲ್ಲಿ ನಿವೃತ್ತ ಶಿಕ್ಷಕ ಬಿ.ಕೆ.ಅನ್ನಣ್ಣವರ, ಡಾ.ಧರೆಪ್ಪ ಚೌಗಲಾ, ಮಾತನಾಡಿದರು. ವೇದಿಕೆಯಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಎಮ್.ಆರ್.ಮುಂಜೆ, ತಾ.ಪಂ ಅಧಿಕಾರಿ ಇಓ ಶಿವಾನಂದ ಕಲ್ಲಾಪುರ, ಪಿ.ಎಸ್.ಐ ಗಿರಮಲ್ಲಪ್ಪ ಉಪ್ಪಾರ, ಪಂಚಾಯತ ಅಭಿವೃದ್ಧಿ ಅಧಿಕಾರಿ ಗೋಪಾಲ ಮಾಳಿ, ಮುಖ್ಯಾಧ್ಯಾಪಕ ಆರ್.ಸಿ.ಕನ್ನೋಳಿ, ಗ್ರಾ.ಪಂ ಅಧ್ಯಕ್ಷ ಸಿದ್ರಾಮ ಬಡಿಗೇರ, ಬಿಸಿಯೂಟ ಅಧಿಕಾರಿ ಮಲ್ಲಿಕಾರ್ಜುನ ನಾಮದಾರ, ಅಥಣಿ ಪುರಸಭಾ ಸದಸ್ಯರಾದ ಕಲ್ಲೇಶ ಮಡ್ಡಿ, ಮಹಾದೇವ ಚೌಗಲಾ, ಶಿವರುದ್ರ ಘೂಳಪ್ಪನವರ, ಶಾಂತಿನಾಥ ಠಕ್ಕಣ್ಣವರ,ಅನಂತ ಬಸರಿಖೋಡಿ, ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಕಲಬುರಗಿ ವಿಭಾಗ ಮಟ್ಟದ ದಸರಾ ಕ್ರೀಡಾಕೂಟ

**ಕೊಪ್ಪಳ:** 2025–26ನೇ ಸಾಲಿನ ಕಲಬುರಗಿ ವಿಭಾಗ ಮಟ್ಟದ ದಸರಾ ಕ್ರೀಡಾಕೂಟವನ್ನು ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಆಯೋಜಿಸಲಾಗಿದೆ.

ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟದಲ್ಲಿ ವೈಯಕ್ತಿಕ ವಿಭಾಗದಲ್ಲಿ ಪ್ರಥಮ ಹಾಗೂ ದ್ವಿತೀಯ ಸ್ಥಾನ ಪಡೆದ ಕ್ರೀಡಾಪಟುಗಳು ಹಾಗೂ ಗುಂಪು ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದ ಕ್ರೀಡಾಪಟುಗಳು ವಿಭಾಗ ಮಟ್ಟದ ದಸರಾ ಕ್ರೀಡಾಕೂಟದಲ್ಲಿ ಭಾಗವಹಿಸಬಹುದು. ವಿಭಾಗಮಟ್ಟದ ದಸರಾ ಕ್ರೀಡಾಕೂಟದಲ್ಲಿ ಪ್ರಥಮ ಸ್ಥಾನದಲ್ಲಿ ವಿಜೇತರಾದ ಕ್ರೀಡಾಪಟುಗಳು ರಾಜ್ಯ ಮಟ್ಟದ ದಸರಾ ಕ್ರೀಡಾಕೂಟದಲ್ಲಿ ಭಾಗವಹಿಸಲು ಅರ್ಹರಿರುತ್ತಾರೆ.

ಕೊಪ್ಪಳದ ಜಿಲ್ಲಾ ಕ್ರೀಡಾಂಗಣದಲ್ಲಿ ಸೆಪ್ಟೆಂಬರ್ 15 ರಂದು ನೆಟ್‌ಬಾಲ್, ಕುಸ್ತಿ ಹಾಗೂ ಟೆಕ್ವಾಂಡೋ ಕ್ರೀಡೆಗಳು ನಡೆಯಲಿವೆ. ಇದಕ್ಕೆ ಸಂಬಂಧಿಸಿದ ಮಾಹಿತಿಗಾಗಿ ವಿಷಯ ನಿರ್ವಾಹಕರಾದ ಕೀರ್ತಿವರ್ಧನ್, ಮೊ.ಸಂ: 7676343554, ಖೋಖೋ ತರಬೇತುದಾರರಾದ ಯತಿರಾಜು ಮೊ.ಸಂ: 9448633146 ಇವರನ್ನು ಸಂಪರ್ಕಿಸಬಹುದು.

ಕಲಬುರಗಿಯ ಚಂದ್ರಶೇಖರ ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಅಥ್ಲೆಟಿಕ್ಸ್, ಟೆನ್ನಿಸ್, ಈಜು, ಬಾಸ್ಕೆಟ್‌ಬಾಲ್, ಜೂಡೋ, ಹ್ಯಾಂಡ್‌ಬಾಲ್, ಫುಟ್‌ಬಾಲ್ ಕ್ರೀಡೆಗಳು ನಡೆಯಲಿವೆ. ದಿನಾಂಕ ನಿಗದಿಪಡಿಸಿರುವುದಿಲ್ಲ. ಇದಕ್ಕೆ ಸಂಬಂಧಿಸಿದ ಮಾಹಿತಿಗಾಗಿ ಹಾಕಿ ತರಬೇತುದಾರರಾದ ಸಂಜಯ್ ಬಾಣದ್, ಮೊ.ಸಂ: 9844029235, ಬಾಸ್ಕೆಟ್‌ಬಾಲ್ ತರಬೇತುದಾರರಾದ ಪ್ರವೀಣಕುಮಾರ ಮೊ.ಸಂ: 8884774416 ಇವರನ್ನು ಸಂಪರ್ಕಿಸಬಹುದು.

ಬಳ್ಳಾರಿಯ ಜಿಲ್ಲಾ ಕ್ರೀಡಾಂಗಣದಲ್ಲಿ ಸೆ.15 ರಂದು ಹಾಕಿ, ವುಶು, ಕಬಡ್ಡಿ, ಬಾಕ್ಸಿಂಗ್ ಕ್ರೀಡೆಗಳು ನಡೆಯಲಿವೆ. ಇದಕ್ಕೆ ಸಂಬಂಧಿಸಿದ ಮಾಹಿತಿಗಾಗಿ ಹಾಕಿ ತರಬೇತುದಾರರಾದ ಜಾಕೀರ್, ಮೊ.ಸಂ: 9036335986, ಫುಟ್ಬಾಲ್ ತರಬೇತುದಾರರಾದ ಮಸೂದ್, ಮೊ.ಸಂ: 9886688858 ಇವರನ್ನು ಸಂಪರ್ಕಿಸಬಹುದು.

ರಾಯಚೂರಿನ ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣ ಹಾಗೂ ಒಳಾಂಗಣ ಜಿಲ್ಲಾ ಕ್ರೀಡಾಂಗಣದಲ್ಲಿ ಸೆ.15 ರಂದು ಬಾಲ್‌ಬ್ಯಾಡ್ಮಿಂಟನ್, ಬ್ಯಾಡ್ಮಿಂಟನ್, ಟೇಬಲ್ ಟೆನ್ನಿಸ್ ಕ್ರೀಡೆಗಳು ನಡೆಯಲಿವೆ. ಇದಕ್ಕೆ ಸಂಬಂಧಿಸಿದ ಮಾಹಿತಿಗಾಗಿ ಅಧೀಕ್ಷಕರಾದ ಸಂತೋಷ ಕರಮುಡಿ, ಮೊ.ಸಂ: 6362238100, ನರಸಿಂಹಲು, ಮೊ.ಸಂ: 9035130056, ಚನ್ನಪ್ಪ, ಮೊ.ಸಂ: 7338647270 ಇವರನ್ನು ಸಂಪರ್ಕಿಸಬಹುದು.

ಬೀದರ್‌ನ ಪಶುವೈದ್ಯಕೀಯ ವಿಶ್ವವಿದ್ಯಾಲಯ, ನಂದಿನಗರ, ಕಮಠಾಣಾದಲ್ಲಿ ಸೆ.15 ರಂದು ವಾಲಿಬಾಲ್ ಹಾಗೂ ಯೋಗ ಕ್ರೀಡೆಗಳು ನಡೆಯಲಿವೆ. ಇದಕ್ಕೆ ಸಂಬಂಧಿಸಿದ ಮಾಹಿತಿಗಾಗಿ ಅಧೀಕ್ಷಕರಾದ ಪದ್ಮಾವತಿ, ಮೊ.ಸಂ: 8884694472, ಹಾಕಿ ತರಬೇತುದಾರರಾದ ಖುದ್ದೂಸ್, ಮೊ.ಸಂ: 6361488733 ಇವರನ್ನು ಸಂಪರ್ಕಿಸಬಹುದು.

ಯಾದಗಿರಿಯ ಜಿಲ್ಲಾ ಕ್ರೀಡಾಂಗಣದಲ್ಲಿ ಖೋಖೋ, ಥ್ರೋಬಾಲ್, ವೇಟ್ ಲಿಫ್ಟಿಂಗ್ ಕ್ರೀಡೆಗಳು ನಡೆಯಲಿವೆ. ದಿನಾಂಕ ನಿಗದಿಪಡಿಸಿರುವುದಿಲ್ಲ. ಇದಕ್ಕೆ ಸಂಬಂಧಿಸಿದ ಮಾಹಿತಿಗಾಗಿ ಅಧೀಕ್ಷಕರಾದ ಗೋವಿಂದಪ್ಪ, ಮೊ.ಸಂ: 9108197572 ಇವರನ್ನು ಸಂಪರ್ಕಿಸಬಹುದು ಎಂದು ಕೊಪ್ಪಳ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾಕು ಶ್ವಾನಗಳಿಗೆ ರೇಬಿಸ್ ಲಸಿಕೆ ಕಡ್ಡಾಯ

**ಮೂಡಲಗಿ:** ರೇಬಿಸ್‌ವು ಪ್ರಾಣಿಜನ್ಯ ಮಾರಣಾಂತಿಕ ರೋಗವಾಗಿದ್ದು ಸಾಕು ಶ್ವಾನಗಳಿಗೆ ಕಡ್ಡಾಯವಾಗಿ ಲಸಿಕೆ ಹಾಕಿಸಿ ಅಪಾಯದಿಂದ ಮುಕ್ತರಾಗಬೇಕು' ಎಂದು ಮೂಡಲಗಿ, ಗೋಕಾಕ ತಾಲ್ಲೂಕುಗಳ ಪಶುಪಾಲನೆ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಮೂಡಲಗಿ ಪಶು ಆಸ್ಪತ್ರೆಯ ಸಹಾಯಕ ನಿರ್ದೇಶಕಡಾ. ಮೋಹನ ವಿ.ಕಮತ ಹೇಳಿದರು.



ಲಯನ್ಸ್‌ಕ್ಲಬ್ ಮೂಡಲಗಿ ಪರಿವಾರ ಹಾಗೂ ಪಶಾಪಾಲನೆ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಇವರ ಸಹಯೋಗದಲ್ಲಿ ಗುರುವಾರ ಶ್ವಾನಗಳಿಗೆ ರೇಬೀಸ್ ಲಸಿಕೆ ಹಾಕುವ ಅಭಿಯಾನದ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದರು.

ಸಾಕು ಪ್ರಾಣಿಗಳ ಮಾಲೀಕರು ಶ್ವಾನಗಳಿಗೆ ಲಸಿಕೆ ಹಾಕಿಸಿ ಒಂದು ತಿಂಗಳ ನಂತರ ಬೂಸ್ಟರ್‌ಡೋಜ್ ಹಾಕಿಸಬೇಕು ಮತ್ತು ಪ್ರತಿ ವರ್ಷ ಲಸಿಕೆ ಹಾಕಿಸಬೇಕು ಎಂದರು. ಶಾಲಾ ಮಕ್ಕಳಲ್ಲಿಯೂ ನಾಯಿ ಕಡಿತ ಮತ್ತುರೇಬೀಸ್ ಹರಡುವ ಬಗ್ಗೆ ಜಾಗೃತ ಮೂಡಿಸುತ್ತಿದ್ದು ತಾಲ್ಲೂಕಿನಾದ್ಯಂತ ಶಾಲೆಗಳಲ್ಲಿ ಅರಿವು ಮೂಡಿಸಲಾಗುತ್ತಿದೆಎಂದರು.

ಪಾಲಿಕ್ಲಿನಿಕ್ ಉಪನಿರ್ದೇಶಕ ಡಾ. ಎಂ.ಬಿ. ವಿಭೂತಿ ಮಾತನಾಡಿ ಶ್ವಾನಗಳಿಗೆ ರೇಬೀಸ್ ಲಸಿಕೆ ಹಾಕುವ ವರ್ಷವಿಡಿ ಚಾಲ್ತಿಯಲ್ಲಿರುತ್ತದೆ, ಮೂಡಲಗಿ ಆಸ್ಪತ್ರೆ ಇಲ್ಲವೆ ತಾಲ್ಲೂಕಿನ ಆಯಾ ಗ್ರಾಮಗಳಲ್ಲಿಯ ಪಶು ಚಿಕಿತ್ಸಾ ಕೇಂದ್ರಗಳಲ್ಲಿ ಹಾಕಿಸಬಹುದಾಗಿದೆ ಎಂದರು.

ವಿವಿಧ ತಳಿಯ ಶ್ವಾನಗಳಿಗೆ ರೇಬೀಸ್ ಲಸಿಕೆಯನ್ನು ಹಾಕಿ ಅಭಿಯಾನಕ್ಕೆ ಚಾಲನೆ ನೀಡಿದರು.ಲಯನ್ಸ್ ಕ್ಲಬ್ ಅಧ್ಯಕ್ಷ ವಿಶಾಲ ಶೀಲವಂತ, ಕಾರ್ಯದರ್ಶಿ ಗಿರೀಶ ಆಸಂಗಿ, ಖಾಜಂಚಿ ಡಾ.ಪ್ರಶಾಂತ ಬಾಬಣ್ಣವರ, ವೆಂಕಟೇಶ ಸೋನವಾಲಕರ, ಈರಣ್ಣ ಕೊಣ್ಣೂರ, ಬಾಲಶೇಖರ ಬಂದಿ, ಸಂಜಯ ಮೋಕಾಶಿ, ಪ್ರಮೋದ ಪಾಟೀಲ, ಸಂಗಮೇಶ ಕೌಜಲಗಿ, ಡಾ.ಮಹಾದೇವ ಕೌಜಲಗಿ, ಡಾ.ಪಿ.ಕೆ. ಕೋಸ್ಟಿ, ಡಾ.ಸೀಮಾ ತುಂಗಳ, ಡಾ.ಎಸ್. ಎಂ.ಕುಲಗೋಡ, ಸುರೇಶ ಆದಪ್ಪಗೋಳ, ಮಹಾಂತೇಶ ಹೊಸೂರ, ಶಂಕರ ಶಾಬಣ್ಣವರ, ಸರಸ್ವತಿ ಮುನ್ಯಾಳ,ಸತೀಶ ಉಮಾರಾಣಿ, ಎಲ್. ಎಸ್. ಶಾಬಣ್ಣವರ, ಯಮನಪ್ಪ ಭರಮನಿ, ನಿರ್ಮಲಾ, ಲಕ್ಷ್ಮೀ, ಪೂಜಾ ಇದ್ದರು.



## ರಾಜ್ಯಮಟ್ಟಕ್ಕೆ ಆಯ್ಕೆ

**ರಬಕವಿ-ಬನಹಟ್ಟಿ:** ರಾಜ್ಯ ರೋಪ್ ಸ್ಕಿಪಿಂಗ್ ಹಾಗು ಫ್ರೀ ಸ್ಟೈಲ್ ರೋಪ್ ಸ್ಕಿಪಿಂಗ್ ಅಶೋಸಿಯನ್‌ದಿಂದ ಈಚೆಗೆ ವಿಜಯಪುರದಲ್ಲಿ ನಡೆದ ಚಾಂಪಿಯನ್ಸ್ 2025 ಸ್ಪರ್ಧೆಯಲ್ಲಿ ಯಲ್ಲಟ್ಟಿಯ ಕೊಣ್ಣೂರ ಆಂಗ್ಲ ಮಾಧ್ಯಮ ಶಾಲೆಯ ವಿದ್ಯಾರ್ಥಿಗಳು ಗೆಲುವು ಸಾಧಿಸುವ ಮೂಲಕ ರಾಜ್ಯಮಟ್ಟಕ್ಕೆ ಆಯ್ಕೆಗೊಂಡರು.

# ಕಾಡಸಿದ್ಧೇಶ್ವರ ಜಾತ್ರೆಯಲ್ಲಿ ಪೊಲೀಸ್ ಕಣ್ಗಾವಲು

**ರಬಕವಿ-ಬನಹಟ್ಟಿ:** ಭಾರತ ಸಂಪ್ರದಾಯಗಳ ದೇಶ. ಜಾತ್ರೆಗಳು ಧಾರ್ಮಿಕ ಆಚರಣೆಯಾಗಿದ್ದು, ಎಲ್ಲರೂ ಶ್ರದ್ಧಾ ಭಕ್ತಿಯಿಂದ ಕಾನೂನು ಸುವ್ಯವಸ್ಥೆಗೆ ದಕ್ಕೆ ಬರದಂತೆ ಜಾತ್ರೆ ಆಚರಿಸಿ. ಇದು ಉತ್ತರಕರ್ನಾಟಕದ ಮಧ್ದಿನ ಜಾತ್ರೆ ಆಗಿದ್ದು ಯಾವುದೇ ಅನಾಹುತ ಸಂಭವಿಸದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳುವುದು ಅವಶ್ಯವಾಗಿದೆ ಎಂದು ಬನಹಟ್ಟಿ ಪೊಲೀಸ್ ವೃತ್ತ ನಿರೀಕ್ಷಕ ಸಂಜೀವ ಬಳಗಾರ ಹೇಳಿದರು.

ಸೆ.16 ರಿಂದ ನಗರದಲ್ಲಿ ಜರುಗುವ ಶ್ರೀ ಕಾಡಸಿದ್ದೇಶ್ವರ ಜಾತ್ರೆ ನಿಮಿತ್ತ ಬನಹಟ್ಟಿ ಕಾಡಸಿದ್ದೇಶ್ವರ ದೇವಸ್ಥಾನದ ಆವರಣದಲ್ಲಿ ಜಾತ್ರಾ ಕಮಿಟಿ ಹಿರಿಯರ ಸಮ್ಮುಖದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು. ಅಹಿತಕರ ಘಟನೆಗಳು ನಡೆಯದಂತೆ ಪೊಲೀಸರೊಂದಿಗೆ ಸಾರ್ವಜನಿಕರೂ ಸಹಕರಿಸಬೇಕು. ಅಲ್ಲದೇ ಅಪರಾಧಗಳನ್ನು ತಡೆಗಟ್ಟಲು ಜನಸಂದಣಿ ಇದ್ದಲ್ಲಿ ನೂತನ ತಂತ್ರಜ್ಞಾನ ಹೊಂದಿರುವ ಸಿಸಿ ಕ್ಯಾಮರಾಗಳನ್ನು ಬಳಗಾರ ಗುಡಾರ, ದೇವಸ್ಥಾನ ಸೇರಿದಂತೆ ಹಲವಾರು ಕಡೆ ಅಳವಡಿಸಲಾಗುವುದು. ಸೂಕ್ತ ಪೊಲೀಸ್ ಬಂದೋಬಸ್ತಿಯನ್ನು ನೀಡಲಾಗುತ್ತದೆ. ಈ ಬಾರಿ ಪಟಾಕಿ ಜೊತೆ ರೊಟ್ಟಿ ಜಾತ್ರೆಯಾಗಿ ಆಚರಿಸಲು ತಯಾರಾಗುತ್ತಿರುವುದು ಸಂತಸದ ವಿಷಯ ಎಂದರು.

ಜಾತ್ರಾ ಕಮಿಟಿ ಅಧ್ಯಕ್ಷ ಶ್ರೀಶೈಲಪ್ಪ ದಭಾಡಿ ಮಾತನಾಡಿ, ಈ ಬಾರಿ ಜಾತ್ರೆಯ ಸಂದರ್ಭದಲ್ಲಿ ಜನಸಂಖ್ಯೆ ಹೆಚ್ಚಳದಿಂದ ಪೊಲೀಸರ ಅನಿವಾರ್ಯತೆ ಇದೆ. ರಾಜಕಾರಣಿಗಳಿಗೆ ಹಾಗೂ ಅಧಿಕಾರಿಗಳಿಗೆ ಸಮಯ



ನಿಗದಿಗೊಳಿಸಿ, ರಥೋತ್ಸವ ಸಂದರ್ಭ ಸ್ಥಳವನ್ನೂ ಗುರ್ತಿಸಲಾಗಿದೆ. ಇದರೊಂದಿಗೆ ಸಹಕರಿಸಿ ಜಾತ್ರೆ ಯಶಸ್ವಿಗೊಳಿಸಬೇಕು ಅಲ್ಲದೇ ಕುಸ್ತಿಗಳು ನಡೆಯುವುದರಿಂದ ಬುಧವಾರ ಹೆಚ್ಚಿನ ಜನರು ಆಗಮಿಸುತ್ತಿದ್ದು, ಹೆಚ್ಚಿನ ಸುರಕ್ಷತೆಯನ್ನು ಒದಗಿಸಬೇಕು ಎಂದು ತಿಳಿಸಿದರು.

ಪಿಎಸ್‌ಐ ಶಾಂತಾ ಹಳ್ಳಿ ಮಾತನಾಡಿ, ಜಾತ್ರೆ ಯಶಸ್ವಿಯಾಗಿ ನಡೆಯಲು ಸಾರ್ವಜನಿಕರ ಸಹಕಾರ ಇರಲಿ, ಜಾತ್ರೆ ಯಾವುದೇ ಸಮಸ್ಯೆ ಇಲ್ಲದೇ ವಿಜೃಂಭಣೆಯಿಂದ ನಡೆಯಲು ನಗರದ ಜನತೆಯ ಸಹಕಾರವು ಅಷ್ಟೇ ಮುಖ್ಯವಾಗಿದೆ ಎ೦ದರು.

ಸೋಮವಾರ ಪೇಟೆ ಸಮಸ್ತ ದೈವ ಮಂಡಳದ ಮಲ್ಲಿಕಾರ್ಜುನ ತುಂಗಳ, ಶಿವಾನಂದ ಗಾಯಕವಾಡ, ಭೀಮಶಿ ಮಗದುಮ್, ಪೌರಾಯುಕ್ತ ರಮೇಶ ಜಾಧವ ಮಾತನಾಡಿದರು.

ದೇವಸ್ಥಾನ ಟ್ರಸ್ಟ್ ಕಮೀಟಿಯ ಅಧ್ಯಕ್ಷರಾದ ಶ್ರೀಪಾದ ಬಾಣಕಾರ, ಈಶ್ವರ ಬಿದರಿ, ಸಿದ್ದನಗೌಡ ಪಾಟೀಲ, ಪ್ರಶಾಂತ ಕೊಳಕಿ, ಕಿರಣ ಆಳಗಿ, ದಾನಪ್ಪ ಹುಲಜತ್ತಿ, ಕಿರಣ ಭದ್ರನ್ನವರ, ಮಹಾಶಾಂತ ಶೆಟ್ಟಿ ಸೇರಿದಂತೆ ಜಾತ್ರಾ ಕಮೀಟಿಯ ಎಲ್ಲ ಸದಸ್ಯರು, ಕಾಡಸಿದ್ದೇಶ್ವರ ದೇವಸ್ಥಾನ ಟ್ರಸ್ಟನ ಸರ್ವ ಸದಸ್ಯರು ಸೇರಿದಂತೆ ಅನೇಕರಿದ್ದರು.

# ಅತ್ಯಾಚಾರ ಪ್ರಕರಣ: ಅಪರಾಧಿಗೆ ಜೈಲು ಶಿಕ್ಷೆ

**ಕೊಪ್ಪಳ:** ಅಪ್ರಾಪ್ತ ಬಾಲಕಿಯನ್ನು ಅತ್ಯಾಚಾರ ಎಸಗಿದ್ದ ಅಪರಾಧಿಗೆ 20 ವರ್ಷಗಳ ಜೈಲು ಶಿಕ್ಷೆ ಹಾಗ ರೂ.25 ಸಾವಿರಗಳ ದಂಡವನ್ನು ವಿಧಿಸಿ ಹೆಚ್ಚುವರಿ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರು ಹಾಗೂ ತ್ವರಿತ ವಿಲೇವಾರಿ ನ್ಯಾಯಾಲಯ(ಪೋಕ್ಸೋ)ದ ನ್ಯಾಯಾಧೀಶರಾದ ಕುಮಾರ ಡಿ.ಕೆ ಅವರು ತೀರ್ಪು ನೀಡಿದ್ದಾರೆ.

ತಾವರಗೇರಾದ ಬಸವಣ್ಣ ಕ್ಯಾಂಪ್ ನಿವಾಸಿ ತಿಪ್ಪಣ್ಣ ಭೋವಿ ಎಂಬ ವ್ಯಕ್ತಿಯು ತನ್ನ ಮನೆಯ ಹತ್ತಿರದ ಅಪ್ರಾಪ್ತ ಬಾಲಕಿಗೆ ಮದುವೆಯಾಗುವುದಾಗಿ ನಂಬಿಸಿ ಹಾಗೂ ಯಾರಿಗೂ ಹೇಳದಂತೆ ಜೀವ ಬೆದರಿಕೆ ಒಡ್ಡಿ ಹಲವಾರು ಬಾರಿ ಅತ್ಯಾಚಾರ ಎಸಗಿದ್ದು, ಬಾಲಕಿ ಗರ್ಭಿಣಿಯಾದ ನಂತರ ವಿಷಯ ತಿಳಿದ ಬಾಲಕಿಯ ತಾಯಿ ತಾವರಗೇರಾ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದರು. ದೂರು ದಾಖಲಿಸಿಕೊಂಡ ಠಾಣೆಯ ಪಿಎಸ್‌ಐ ತಿಮ್ಮಣ್ಣ ಅವರು ಪ್ರಥಮ ಹಂತದ ತನಿಖೆ ನಿರ್ವಹಿಸಿದ್ದರು. ಮುಂದಿನ ತನಿಖೆ ಕೈಗೊಂಡ ಕುಷ್ಟಗಿ ಸಿಪಿಐ ನಿಂಗಪ್ಪ ಎನ್.ಆರ್ ಹಾಗೂ ಯಶವಂತ ಬಿಸನಳ್ಳಿ ಅವರು ಆರೋಪಿತನ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿ ಸಲ್ಲಿಸಿದ್ದರು.

ಪ್ರಕರಣವು ಸ್ಪೇ.ಎಸ್‌ಸಿ(ಪೋಕ್ಸೋ) ಸಂ:50/203 ರಲ್ಲಿ ದಾಖಲಾಗಿದ್ದು, ವಿಚಾರಣೆಯನ್ನು ನಡೆಸಿದ ನ್ಯಾಯಾಲಯವು ಆರೋಪಿತನ ಮೇಲಿನ ಆರೋಪಗಳು ಸಾಬೀತಾದ ಹಿನ್ನೆಯಲ್ಲಿ ಅಪರಾಧಿ ಎಂದು ನಿರ್ಣಯಿಸಿ 20 ವರ್ಷಗಳ ಜೈಲು ಶಿಕ್ಷೆ ಹಾಗೂ ರೂ.25,000/- ಗಳ ದಂಡವನ್ನು ಭರಿಸುವಂತೆ ಹಾಗೂ ದಂಡದ ಮೊತ್ತದಲ್ಲಿ ರೂ.10,000/- ಗಳನ್ನು ಬಾಧಿತಳಿಗೆ ನೀಡುವಂತೆ ಮತ್ತು ಸರ್ಕಾರದಿಂದ ರೂ.4 ಲಕ್ಷಗಳ ಪರಿಹಾರವನ್ನು ಬಾಧಿತಳಿಗೆ ನೀಡಬೇಕೆಂದು ಸೆಪ್ಟೆಂಬರ್ 9 ರಂದು ನ್ಯಾಯಾಧೀಶರು ತೀರ್ಪಿನಲ್ಲಿ ಆದೇಶಿಸಿದ್ದಾರೆ.

ಪ್ರಕರಣದಲ್ಲಿ ವಿಶೇಷ ಸರ್ಕಾರಿ ಅಭಿಯೋಜಕರಾದ(ಪೋಕ್ಸೋ) ಗೌರಮ್ಮ ದೇಸಾಯಿ ಅವರು ಸರ್ಕಾರದ ಪರವಾಗಿ ವಾದ ಮಂಡಿಸಿದ್ದರು. ತಾವರಗೇರಾ ಪೊಲೀಸ್ ಠಾಣೆ ಸಿಬ್ಬಂದಿ ರಂಗನಾಥ ಹಾಗೂ ವೀರೇಶ ಅವರು ಸಾಕ್ಷಿದಾರರನ್ನು ನ್ಯಾಯಾಲಯಕ್ಕೆ ಹಾಜರುಪಡಿಸುವಲ್ಲಿ ಸಹಕಾರ ನೀಡಿದ್ದಾರೆ ಎಂದು ಹೆಚ್ಚುವರಿ ಜಿಲ್ಲಾ ಹಾಗೂ ಸತ್ರ ನ್ಯಾಯಾಲಯದ ವಿಶೇಷ ಸರ್ಕಾರಿ ಅಭಿಯೋಜಕರ(ಪೋಕ್ಸೋ) ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

# ಗ್ರಾಮೀಣ ಉಪವಿಭಾಗ ಸ್ಥಳಾಂತರ ತಡೆಹಿಡಿಯುವಂತೆ ಒತ್ತಾಯಿಸಿ ಮನವಿ

**ವಿಜಯಪುರ:** ಗ್ರಾಮೀಣ ಉಪ ವಿಭಾಗವನ್ನು ಶಿವಗಿರಿಗೆ ಸ್ಥಳಾಂತರ ಮಾಡುವುದನ್ನು ತಡೆಹಿಡಿಯುವಂತೆ ಒತ್ತಾಯಿಸಿ ರೈತ ಭಾರತ ಪಕ್ಷದಿಂದ ಅಧೀಕ್ಷಕ ಅಭಿಯಂತರರು ಹೆಸ್ಕಾಂ ವಿಜಯಪುರ ಇವರ ಮೂಲಕ ಮಾನ್ಯ ವ್ಯವಸ್ಥಾಪಕ ನಿರ್ದೇಶಕರು. ಹೆಸ್ಕಾಂ ನವನಗರ, ಹುಬ್ಬಳ್ಳಿ, ನಗರ ಶಾಸಕರು ಹಾಗೂ ನಾಗಠಾಣ ಮತಕ್ಷೇತ್ರದ ಶಾಸಕರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ರೈತ ಭಾರತ ಪಕ್ಷದ ರಾಜ್ಯಾಧ್ಯಕ್ಷ ಮಲ್ಲಿಕಾರ್ಜುನ ಕೆಂಗನಾಳ ಮಾತನಾಡಿ, ಹೊಸ ಕಟ್ಟಡವನ್ನು ಕಟ್ಟಿಸಿರುತ್ತೀರಿ ಅಂತ ಅಲ್ಲಿಗೆ ಗ್ರಾಮೀಣ ಉಪವಿಭಾಗವನ್ನು ಸ್ಥಳಾಂತರ ಮಾಡುವ ಕುರಿತು ಎಲ್ಲರೂ ಹೇಳುತ್ತಿದ್ದು ಇದರಿಂದ ಎಲ್ಲಾ ಹಳ್ಳಿಯ ಜನರಿಗೆ ನೇರವಾಗಿ ತಮ್ಮ ಕೆಲಸಗಳನ್ನು ಮಾಡಿಕೊಳ್ಳಲು ಅನಾನುಕೂಲಗಳೆ ಜಾಸ್ತಿ ಆಗುತ್ತವೆ. ಏನೆಂದರೆ ನೇರವಾಗಿ ಅಲ್ಲಿಗೆ ಹೋಗಲು ಬಸ್ಸಿನ ಸೌಕರ್ಯವನ್ನು ಇರುವುದಿಲ್ಲ ಮತ್ತು ಗ್ರಾಹಕರಿಗೆ ಇದರಿಂದ ಅನುಕೂಲವಾಗುವುದಿಲ್ಲ ಆದಕಾರಣ ಕೂಡಲೇ ಗ್ರಾಮೀಣ ಉಪ ವಿಭಾಗವನ್ನು ಸ್ಥಳಾಂತರ ಮಾಡದೆ ಇದ್ದ ಜಾಗದಲ್ಲಿಯೇ ಮುಂದುವರಿಸಿ ವಿಜಯಪುರ ನಗರದಲ್ಲಿ ಇನ್ನೊಂದು ಉಪ ವಿಭಾಗವನ್ನು ಮಾಡಿ ಈ ಭಾಗದ



ಜನರು ತಮ್ಮ ದಿನ ನಿತ್ಯದ ಕೆಲಸಗಳಿಗೆ ಎಂಬಿ ಪಾಟೀಲ್ ನಗರಕ್ಕೆ ಹೋಗಿಬರುವುದು ತುಂಬಾ ಅನಾನುಕೂಲವಾಗುತ್ತದೆ ಈಗಿರುವ ಬಿಡ್ಲಿಂಗನಲ್ಲಿ ವಿಜಯಪುರ ನಗರ ವಿಭಾಗ -3 ನ್ನು ಆರಂಭಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕು ಮತ್ತು ಗ್ರಾಮೀಣ ಉಪ ವಿಭಾಗವನ್ನು .ಸ್ಥಳಾಂತರ ಮಾಡಬಾರದೆಂದು ಕೇಳಿಕೊಳ್ಳುತ್ತೇವೆ. ಒಂದು ವೇಳೆ ಮಾಡಲು ಮುಂದಾದರೆ ಉಗ್ರ ಹೋರಾಟವನ್ನು ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದ್ದಾರೆ.

ಈ ಸಂದರ್ಭದಲ್ಲಿ ಹೆಗಡಿಹಾಳ ತಾಂಡಾದ ಮುಖಂಡರಾದ ಗಂಗಾರಾಮ ರಾಠೋಡ ಉಪಸ್ಥಿತರಿದ್ದರು.

## ಕಾಮಗಾರಿ ಬೇಗ ಮುಗಿಸಲು ಸೂಚನೆ

**ಘಟಪ್ರಭಾ:** ಇಲ್ಲಿನ ರೈಲು ನಿಲ್ದಾಣದಲ್ಲಿ ನಡೆಯುತ್ತಿರುವ ಕಾಮಗಾರಿ ನಿಧಾನವಾಗಿ ಸಾಗುತ್ತಿದೆ ಮತ್ತು ಗುಣಮಟ್ಟ ಕಳಪೆಯಾಗಿದೆ ಆದ್ದರಿಂದ ಪ್ರಯಾಣಿಕರಿಗೆ ಅದರಲ್ಲೂ ವಿಶೇಷವಾಗಿ ಅಂಗವಿಕಲರು ಮಹಿಳೆಯರು, ವೃದ್ಧರಿಗೆ ಆಗುತ್ತಿರುವ ತೊಂದರೆ ಪರಿಹರಿಸಲು ನವೀಕರಣ ಕಾರ್ಯವನ್ನು ಆದಷ್ಟು ಬೇಗ ಮುಗಿಸಬೇಕೆಂದು ಅಧಿಕಾರಿಗಳಿಗೆ ಮಾಜಿ ಮುಖ್ಯ ಮಂತ್ರಿ ಹಾಗೂ ಸಂಸದರಾದ ಜಗದೀಶ ಶೆಟ್ಟರ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಬೆಳಗಾವಿ ಜಿಲ್ಲೆಯ ಗ್ರಾಮೀಣ ಬಿಜೆಪಿ ಘಟಕದ ಅಧ್ಯಕ್ಷ ಸುಭಾಷ ಪಾಟೀಲ, ಗೋಕಾಕ ಗ್ರಾಮೀಣ ಅಧ್ಯಕ್ಷ ರಾಜೇಂದ್ರ ಗೌಡಪ್ಪಗೋಳ, ಘಟಪ್ರಭಾದ ಸಾಮಾಜಿಕ ಕಾರ್ಯಕರ್ತರಾದ ಶ್ರೀಕಾಂತ ವಿ ಮಹಾಜನ, ಬಿಜೆಪಿ ಮುಖಂಡ ಸುರೇಶ ಪಾಟೀಲ,ರಾಜು ಕತ್ತಿ, ರಾಮಣ್ಣ ದೇಮಣ್ಣವರ, ರಾಮಣ್ಣ ಹುಕ್ಕೇರಿ, ಕರವೇ ರಾಜ್ಯಾಧ್ಯಕ್ಷ ಕೆಂಪಣ್ಣಾ ಚೌಕಸಿ , ಅಪ್ಪಾಸಾಬ ಮುಲ್ಲಾ, ಗುರುಬಸಯ್ಯಾ ಕರ್ಪೂರಮಠ, ಶೇಖರ ರಜಪೂತ,ಕುಮಾರ್ ಕರ್ಪೂರಮಠ,ಸಚಿನ್ ಖಡಬಡಿ, ಗಣೇಶ ಗಾಣಿಗ, ವಿಜಯ ಗುಪ್ತಾ ,ನೂರ್ ಪೀರಜಾದೆ, ಪ್ರಶಾಂತ ಅರಳಿಕಟ್ಟಿ ಮುಂತಾದವರು ಸೇರಿದಂತೆ ಘಟಪ್ರಭಾ ಹಾಗೂ ಸುತ್ತಮುತ್ತಲಿನ ನೂರಾರು ನಾಗರೀಕರು ಹಾಜರಿದ್ದರು.



# ಸೆ.18ರಂದು ಕ್ರೀಡಾ, ಸಾಂಸ್ಕೃತಿಕ ಸ್ಪರ್ಧೆ

**ಧಾರವಾಡ:** ವಿಶ್ವ ಹಿರಿಯ ನಾಗರಿಕರ ದಿನಾಚರಣೆ-2025ರ ಪ್ರಯುಕ್ತ ಜಿಲ್ಲೆಯ ಹಿರಿಯ ನಾಗರಿಕರಿಗೆ ಸೆಪ್ಟೆಂಬರ 16, 2025 ರಂದು ಆಯೋಜಿಸಲಾಗಿತ್ತು. ಕಾರಣಾಂತರಗಳಿಂದ ಸದರಿ ಸ್ಪರ್ಧೆಗಳನ್ನು ಸೆಪ್ಟೆಂಬರ 18, 2025 ಬೆಳಿಗ್ಗೆ 10 ಗಂಟೆಯಿಂದ ಮದ್ಯಾಹ್ನ 1:30ವರೆಗೆ ಆರ್.ಎನ್.ಶೆಟ್ಟಿ ಜಿಲ್ಲಾ ಕ್ರೀಡಾಂಗಣದಲ್ಲಿ ಹಿರಿಯ ನಾಗರಿಕರಿಗೆ ಕ್ರೀಡಾಕೂಟವನ್ನು ಹಾಗೂ ಅದೇ ದಿನ ಮದ್ಯಾಹ್ನ 2:30 ಯಿಂದ ಸಂಜೆ 5:30 ವರೆಗೆ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಕ್ರೀಡಾ ಸ್ಪರ್ಧೆಗಳಾದ ಬಿರುಸಿನ ನಡಿಗೆ, ಬಾಲ್‌ನ್ನು ಬಕೆಟ್‌ನಲ್ಲಿ ಎಸೆಯುವುದು, ಮ್ಯೂಜಿಕಲ್ ಚೇರ್ಸ್ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳಾದ ಗಾಯನ ಸ್ಪರ್ಧೆ, ಏಕಪಾತ್ರಾಭಿನಯ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ. ಆಸಕ್ತರು ಹಿರಿಯ ನಾಗರಿಕರ ಗುರುತಿನ ಚೀಟಿ ಅಥವಾ ವಯಸ್ಸಿನ ಪ್ರಮಾಣ ಪತ್ರ (ಶಾಲಾ ದಾಖಲಾತಿ/ಆಧಾರ ಕಾರ್ಡ)ವನ್ನು ಕಡ್ಡಾಯವಾಗಿ ತರುವುದು. ಹೆಚ್ಚಿನ ಮಾಹಿತಿಗಾಗಿ ಕಛೇರಿ ದೂರವಾಣಿ ಸಂಖ್ಯೆ:0836-2744474 ಹಾಗೂ ಅಣ್ಣಪ್ಪ ಕೋಳಿ (9945731984) ನ್ನು ಸಂಪರ್ಕಿಸಬಹುದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಸವಿತಾ ಕಾಳೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



## ಬಹ್ಮಶ್ರೀ ನಾರಾಯಣ ಗುರುಗಳ ಜಯಂತಿ

**ಹಾವೇರಿ:** ಜಿಲ್ಲಾ ಆಡಳಿತ ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಜಿಲ್ಲಾಧಿಕಾರಿಗಳ ಸಭಾ ಭವನ ಹಾವೇರಿಯಲ್ಲಿ ಬಹ್ಮಶ್ರೀ ನಾರಾಯಣ ಗುರುಗಳ ಜಯಂತಿಯನ್ನು ಆಚರಿಸಲಾಯಿತು. ಸದರಿ ಕಾರ್ಯಕ್ರದಲ್ಲಿ ಮಾನ್ಯ ಜಿಲ್ಲಾಧಿಕಾರಿಗಳು ಹಾಗೂ ಅಪರ ಜಿಲ್ಲಾಧಿಕಾರಿಗಳು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಸಮಾಜ ಬಾಂಧವರಾದ ಸತೀಶ ಈಳಗೇರ, ಆಂಜನೇಯ ಈಳಿಗೇರ, ಪ್ರಕಾಶ ಈಳಗೇರ, ಪರಶುರಾಮ ಈಳಗೇರ, ಮಾರತೆಣ್ಣ ಈಳಗೇರ, ಮುತ್ತಣ್ಣ ಈಳಗೇರ,ಶಿವಾನಂದ ಈಳಗೇರ, ಶ್ರಿ ಜಗದೀಶ ಈಳಗೇರ, ಅರುಣ ಈಳಗೇರ, ಸುಭಾಷ್ ಈಳಗೇರ ಇನ್ನಿತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ನಾಳೆ ಸಚಿವ ತಿಮ್ಮಾಪೂರ ಹುಟ್ಟು ಹಬ್ಬದ ಆಚರಣೆಗೆ ನಿರ್ಧಾರ

**ಮುಧೋಳ:** ಕೃಷ್ಣಾ ಮೇಲ್ದಂಡೆ ಯೋಜನೆಯ ಸಂತ್ರಸ್ತ ರೈತರ ಸಮಸ್ಯೆಗಳಿಗೆ ಆದ್ಯತೆ ನೀಡಿರುವ ಕರ್ನಾಟಕದ ಅಬಕಾರಿ ಮತ್ತು ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ. ತಿಮ್ಮಾಪುರ, ತಮ್ಮ 64ನೇ ಹುಟ್ಟುಹಬ್ಬದ ಆಚರಣೆಯನ್ನು ಒಂದು ದಿನ ಮುಂಚಿತವಾಗಿ ಅಂದರೆ ಸೆಪ್ಟೆಂಬರ್ 15ರಂದು ಆಚರಿಸಲು ಅಭಿಮಾನಿ ಬಳಗ ನಿರ್ಧರಿಸಿದ್ದಾರೆ.

ಸೆಪ್ಟೆಂಬರ್ 16ರಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದಲ್ಲಿ ವಿಧಾನಸೌಧದಲ್ಲಿ ನಡೆಯಲಿರುವ ವಿಶೇಷ ಸಂಪುಟ ಸಭೆಯಲ್ಲಿ ಭಾಗವಹಿಸಬೇಕಾದ ಕಾರಣ ಸಚಿವರು ಈ ನಿರ್ಧಾರಕ್ಕೆ ಬಂದಿದ್ದಾರೆ. ಈ ಸಭೆಯು ಕೃಷ್ಣಾ ಮೇಲ್ದಂಡೆ ಯೋಜನೆ (ಯುಕೆಪಿ) ಹಂತ-3ರ ಭೂಸ್ವಾಧೀನ ಪ್ರಕ್ರಿಯೆ ಕುರಿತು ಚರ್ಚಿಸಲು ಕರೆಯಲಾಗಿದ್ದು, ರೈತರ ಪಾಲಿಗೆ ಅತ್ಯಂತ ಮಹತ್ವದ್ದಾಗಿದೆ. ಸಚಿವರ ಈ ನಡೆಯು ರೈತರ ಸಮಸ್ಯೆಗಳಿಗೆ ಅವರ ಬದ್ಧತೆ ಮತ್ತು ಸರ್ಕಾರಿ ಜವಾಬ್ದಾರಿಗೆ ಅವರು ನೀಡಿದ ಆದ್ಯತೆಯನ್ನು ಎತ್ತಿ ತೋರಿಸುತ್ತದೆ.

**ಕಾರ್ಯಕ್ರಮಗಳ ಮರುಹೊಂದಾಣಿಕೆ:** ಆರ್.ಬಿ. ತಿಮ್ಮಾಪುರ ಫೌಂಡೇಶನ್ ಮತ್ತು ಅಭಿಮಾನಿ ಬಳಗವು ಈ ಬಗ್ಗೆ ಪತ್ರಿಕಾ ಪ್ರಕಟಣೆ ಹೊರಡಿಸಿದ್ದು, ಆರಂಭದಲ್ಲಿ ಸೆಪ್ಟೆಂಬರ್ 14, 15, ಮತ್ತು 16ರಂದು ನಡೆಯಬೇಕಿದ್ದ ಹಲವು ಕಾರ್ಯಕ್ರಮಗಳನ್ನು ಮುಧೋಳ ನಗರದ ರೂ 199 ಕೋಟಿ ಕುಡಿವ ನೀರಿನ ಯೋಜನೆಯನ್ನು ಹೊರತಪಡಿಸಿ ಮರುಹೊಂದಿಸಿದೆ. ಅದರಂತೆ, ಹುಟ್ಟುಹಬ್ಬದ ಪ್ರಮುಖ ಕಾರ್ಯಕ್ರಮಗಳು ಈಗ ಯಥಾವತ್ತಾಗಿ ಸೆಪ್ಟೆಂಬರ್ 14 ಮತ್ತು 15ರಂದು ನಡೆಯಲಿವೆ ಎಂದು ಸ್ಪಷ್ಟಪಡಿಸಿದೆ.

**ಸಚಿವರ ನಿರ್ಧಾರಕ್ಕೆ ಶ್ಲಾಘನೆ:** ಸಚಿವರ ಈ ನಿರ್ಧಾರಕ್ಕೆ ಮುಧೋಳ ಮತಕ್ಷೇತ್ರದ ಕಾಂಗ್ರೆಸ್ ಪಕ್ಷದ ಬ್ಲಾಕ್ ಅಧ್ಯಕ್ಷರಾದ ಅಶೋಕ್ ಕಿವಡಿ, ಸದುಗೌಡ ಪಾಟೀಲ್, ಗ್ಯಾರಂಟಿ ಅಧ್ಯಕ್ಷ ಮಹಾಂತೇಶ ಮಾಚಕನೂರ ಉದಯ ಸಾರವಾಡ, ರಾಜೂಗೌಡ ಪಾಟೀಲ, ಸಂಜು ನಾಯಕ, ರಾಘು ಮೊಕಾಶಿ,ಗೋವಿಂದಪ್ಪ ಗುಜ್ಜನವರ, ಬಿಡಿಸಿಸಿ ಬ್ಯಾಂಕ್ ಮಾಜಿ ಉಪಾಧ್ಯಕ್ಷ ಶಿವಾನಂದ ಉದಪುಡಿ ಭೀಮನಗೌಡ ಪಾಟೀಲ ಲಕ್ಷ್ಮಣ ಮಾಲಗಿ, ಪ್ರವೀಣ ಪಾಟೀಲ, ಈರಪ್ಪ ಕಿತ್ತೂರ, ದಾನೇಶ್ ತಡಸಲೂರು, ಜಾವೇದ ಸಾಂಗ್ಲಿಕರ, ಪ್ರಕಾಶ್ ಹಲಗಲಿ, ಸುರೇಶ ಗೋಲಶೆಟ್ಟಿ, ಅಡಿವೆಪ್ಪ ಉಳ್ಳಾಗಡ್ಡಿ ಸೇರಿದಂತೆ ಇತರರು ಅಭಿಮಾನಿ ಬಳಗ ಮತ್ತು ಮುಖಂಡರು ಬೆಂಬಲ ವ್ಯಕ್ತಪಡಿಸಿದ್ದಾರೆ.

# ಶಿಷ್ಯವೇತನ ಮಂಜುರಾತಿ ಪತ್ರ ವಿತರಣೆ

**ರಾಯಬಾಗ:** ಇವತ್ತಿನ ದಿನ ರಾಯಬಾಗ್ ತಾಲೂಕು ವ್ಯಾಪ್ತಿಯ 73 ವಿದ್ಯಾರ್ಥಿಗಳಿಗೆ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಸುಜ್ಞಾನ ನಿಧಿ ಶಿಷ್ಯವೇತನ ಮಂಜುರಾತಿ ಪತ್ರ ವಿತರಣಾ ಕಾರ್ಯಕ್ರಮವನ್ನು ರಾಯಬಾಗದ ಮಲ್ಲಿಕಾರ್ಜುನ ದೇವಸ್ಥಾನದ ಸಭಾಭವನದಲ್ಲಿ ಹಮ್ಮಿಕೊಳ್ಳಲಾಯಿತು.

ಈ ಕಾರ್ಯಕ್ರಮ ದಲ್ಲಿ ಅಥಣಿ ಜಿಲ್ಲೆಯ ಜಿಲ್ಲಾ ನಿರ್ದೇಶಕರಾದ ಶ್ರೀಮತಿ ನಾಗರತ್ನ ಏನ್ ಹೆಗಡೆ ಅವರು ಕಾರ್ಯಕ್ರಮದ ಕುರಿತು ಪ್ರಾಸ್ತಾವಿಕವಾಗಿ ಮನುಷ್ಯ ಹುಟ್ಟಿನಿಂದ ಹಿಡಿದು ಸಾಯೋತನಕ ಏನೆಲ್ಲಾ ಅವಶ್ಯಕತೆ ಇದೆ ಎಲ್ಲವನ್ನು ಪರಮಪೂಜ್ಯ ಡಾ. ಡಿ ವೀರೇಂದ್ರ ಹೆಗ್ಗಡೆ ಯವರು ಸಾಮಾಜಿಕ ಕಾರ್ಯಕ್ರಮಗಳನ್ನು ಮಾಡುತ್ತಾ ಬಂದಿರುತ್ತಾರೆ,ಎಂದು ತಿಳಿಸಿದರು. ಅದೇರೀತಿ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಬಸವರಾಜಪ್ಪ. ಆರ್ ಅವರು ಕಾರ್ಯಕ್ರಮ ಉದ್ಘಾಟನೆ ಮಾಡಿ ವಿದ್ಯಾರ್ಥಿಗಳಿಗೆ ಸುಜ್ಞಾನ ನಿಧಿ ಶಿಷ್ಯವೇತನ ಮಂಜೂರಾತಿ ಪತ್ರವನ್ನು ವಿತರಣೆ ಮಾಡಿದರು. ಅದೇರೀತಿ ಕಾರ್ಯಕ್ರಮದಲ್ಲಿ ಶ್ರೀ ಗಿರಿಶ ಪಾಟೀಲ್ ಜಿಲ್ಲಾ ಜನಜಾಗೃತಿ ವೇದಿಕೆಯ ಉಪಾಧ್ಯಕ್ಷರು, ಶ್ರೀ ದೀಪಕ್ ಪಾಟೀಲ್ ಜಿಲ್ಲಾ ಜನಜಾಗೃತಿ ವೇದಿಕೆ ಸದಸ್ಯರು, ಮಾವರ್ಕರ್ ಸಹಾಯಕ ಕೃಷಿ ನಿರ್ದೇಶಕರು, ಜಿನೇಂದ್ರ ಖೇಮಲಾಪುರೆ ಜಿಲ್ಲಾ ಜನಜಾಗೃತಿ ವೇದಿಕೆಯ ಸದಸ್ಯರು, ಶ್ರೀ ಬಾಹುಬಲಿ ಪಾಟೀಲ್ ಬಾಹುಬಲಿ ಮೊಬೈಲ್ಸ್ ರಾಯಬಾಗ, ತಾಲೂಕಿನ ಮಾನ್ಯ ಯೋಜನಾಧಿಕಾರಿಗಳಾದ ಮಹೇಶ್ವರಪ್ಪ ಜಿ,ಹಾಗೂ ಮೇಲ್ವಿಚಾರಕರಾದ ಶ್ರೀ ವೆಂಕಟೇಶ್, ಮಂಜುನಾಥ, ಕೃಷಿ ಮೇಲ್ವಿಚಾರಕರಾದ ಗೋಪಾಲ್, ಜ್ಞಾನ ವಿಕಾಸ ಸಮನ್ವಯ ಅಧಿಕಾರಿ ಆದ ಸುರೇಖಾ ಹಾಗೂ ಸ್ಥಳೀಯ ಸೇವಾ ಪ್ರತಿನಿಧಿಗಳು, ಊರಿನ ಗಣ್ಯರು, ಶೌರ್ಯ ಸದಸ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.



# ಕತ್ತಿ-ಪಾಟೀಲ ಬಣಕ್ಕೆ ಬೆಂಬಲಿಸಿ ಪಾದಯಾತ್ರೆ



**ಹುಕ್ಕೇರಿ:** ಸಹಕಾರಿ ತತ್ವದಡಿ ವಿದ್ಯುತ್ ಪೂರೈಸುತ್ತಿರುವ ದೇಶದ ಏಕೈಕ ಸಂಸ್ಥೆ ಎಂಬ ಹೆಗ್ಗಳಿಕೆಗೆ ಪಾತ್ರವಾಗಿರುವ ಪ್ರತಿಷ್ಠಿತ ದಿ.ಹುಕ್ಕೇರಿ ಗ್ರಾಮೀಣ ವಿದ್ಯುತ್ ಸಹಕಾರಿ ಸಂಘದ ಆಡಳಿತ ಮಂಡಳಿಗೆ ನಡೆಯಲಿರುವ ಚುನಾವಣೆಯಲ್ಲಿ ಮಾಜಿ ಸಂಸದ ರಮೇಶ ಕತ್ತಿ, ಮಾಜಿ ಸಚಿವ ಎ.ಬಿ.ಪಾಟೀಲ ಪೆನಲ್‌ಗೆ ಬೆಂಬಲಿಸಿ ಸೂಚಿಸಿ ತಾಲೂಕಿನ ಸಾರಾಪುರ ಗ್ರಾಮದಲ್ಲಿ ಶುಕ್ರವಾರ ಗ್ರಾಮಸ್ಥರು ಪಾದಯಾತ್ರೆ ನಡೆಸಿದರು.

ಬಸ್ ನಿಲ್ದಾಣದಿಂದ ಆರಂಭವಾದ ಪಾದಯಾತ್ರೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ, ಗ್ರಾಮ ಪಂಚಾಯಿತಿ ಕಚೇರಿವರೆಗೆ ಮುಕ್ತಾಯವಾಯಿತು. ಇದಕ್ಕೂ ಮೊದಲು ಮಹಾಕಾಳಿ ದೇವಸ್ಥಾನ ಆವರಣದಲ್ಲಿ ಜಮಾಯಿಸಿದ ಕತ್ತಿ-ಪಾಟೀಲ ಬೆಂಬಲಿತ ಮುಖಂಡರು, ಹಿತೈಷಿಗಳು, ಕಾರ್ಯಕರ್ತರು, ಸ್ವಯಂ ಪ್ರೇರಿತವಾಗಿ ಪ್ರತಿಜ್ಞೆ ಮಾಡಿದರು.

ಎಪಿಎಂಸಿ ಮಾಜಿ ಅಧ್ಯಕ್ಷ ಕೆ.ಜಿ.ಪಾಟೀಲ, ಗ್ರಾಪಂ ಮಾಜಿ ಅಧ್ಯಕ್ಷ ಸತ್ಯಪ್ಪಾ ಹಾಲಟ್ಟಿ, ಸದಸ್ಯ ಪುಟ್ಟು ಚೌಗಲಾ, ಪಿಕೆಪಿಎಸ್ ಅಧ್ಯಕ್ಷ ರಾಮಗೌಡ ಹೆಬ್ಬಾಳ, ಸದಸ್ಯರಾದ ಶಂಕರ ಬಡಗಾಂವಿ, ಸಿದ್ದಪ್ಪ ಪೂಜೇರಿ, ರಾಜು ಕಂಠೀಕಾರ, ಮಲ್ಲಪ್ಪಾ ಚೌಗಲಾ, ಅನಿಲ ಗುಡದಿ, ಬಸವರಾಜ ಮದಕರಿ, ಎಸ್‌ಡಿಎಂಸಿ ಅಧ್ಯಕ್ಷ ಶಾಂತಿನಾಥ ಹೆಬ್ಬಾಳ, ಮುಖಂಡರಾದ ಸಿದ್ದು ಉಪಾಧ್ಯೆ, ಪಾಂಡು ಗುಡದಿ, ರವೀಂದ್ರ ಪಾಟೀಲ, ರಾಮಪ್ಪಾ ಪೂಜೇರಿ, ಮಹಾವೀರ ಮಗದುಮ್ಮ, ಅಜೀತ ತಂಗಡಿ, ವಿಠ್ಠಲ ಮಾಸಪ್ಪಗೋಳ, ವಾಸುದೇವ ಹಾಲಟ್ಟಿ, ಪ್ರಕಾಶ ಪಾಟೀಲ, ನಾಗರಾಜ ಗಸ್ತಿ, ಸಂತೋಷ ಹಟ್ಟಿ, ಪ್ರಕಾಶ ಕಾಂಬಳೆ, ತಬ್ಬು ಮಕಾನದಾರ ಮತ್ತಿತರರು ಉಪಸ್ಥಿತರಿದ್ದರು.

# ಮನೋಬಲದಿಂದ ಆತ್ಮಹತ್ಯೆ ನಿಯಂತ್ರಣ: ಮೇಟಿ

**ಬಾಗಲಕೋಟೆ:** ದೇಶದಲ್ಲಿ ಆತ್ಮಹತ್ಯೆ ಪ್ರಕರಣಗಳು ದಿನದಿನಕ್ಕೆ ಹೆಚ್ಚುತ್ತಿದ್ದು ಮಾನಸಿಕ ಕಿನ್ನತೆ ಮತ್ತು ಮನೋ ದೌರ್ಬಲ್ಯ ಪ್ರಮುಖ ಕಾರಣವೆಂದು ಬಿವಿವಿ ನರ್ಸಿಂಗ್ ಮಹಾವಿದ್ಯಾಲಯದ ಮಾನಸಿಕ ಆರೋಗ್ಯ ವಿಭಾಗದ ಮುಖ್ಯಸ್ಥರಾದ ಪೂರ್ಣಿಮಾ ಮೇಟಿ ಅವರು ಹೇಳಿದರು.

ನಗರದ ಬಿವಿವಿ ಸಂಘದ ಬಸವೇಶ್ವರ ಕಲಾ ಮಹಾವಿದ್ಯಾಲಯದಲ್ಲಿ ಶುಕ್ರವಾರದಂದು ಸಭಾಭವನದಲ್ಲಿ ಹಮ್ಮಿಕೊಂಡಿದ್ದ ಎನ್‌ಎಸ್‌ಎಸ್ ಘಟಕ ಹಾಗೂ ಬಿವಿವಿಎಸ್ ನರ್ಸಿಂಗ್ ವಿಜ್ಞಾನ ಮಹಾವಿದ್ಯಾಲಯದ ಸಹಯೋಗದಲ್ಲಿ ಹಮ್ಮಿಕೊಂಡ ವಿಶ್ವ ಆತ್ಮಹತ್ಯೆ ತಡೆ ದಿನಾಚರಣೆಯನ್ನು ಸಸಿಗೆ ನೀರೆರೆಯುವುದರ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು ಆತ್ಮಹತ್ಯೆ ಅಂದರೆ ನಮ್ಮ ದೇಹವನ್ನು ನಾವೇ ಹಾಳು ಮಾಡಿಕೊಳ್ಳುವ ಪರಿಸ್ಥಿತಿ ಎಂದರ್ಥ.ಭಾರತದಲ್ಲಿ ಆತ್ಮಹತ್ಯೆ ಹೆಚ್ಚುತ್ತಿರುವುದು ವಿಷಾದನೀಯ. ಕುಟುಂಬದ ಸಮಸ್ಯೆ, ಭಯ, ಮಾನಸಿಕ ಕಿರಿಕಿರಿಯಿಂದ ಸಾವಿಗೆ ಶರಣಾಗುತ್ತಿರುವುದು ವಿಷಾದನೀಯ ಎಂದರು.

ಜೀವನದಲ್ಲಿ ಮಾನಸಿಕವಾಗಿ



ಸದೃಢವಾಗಿರಬೇಕು. ಮನುಷ್ಯನಿಗೆ ಸಮಸ್ಯೆಗಳನ್ನು ಎದುರಿಸಲು ಮಾನಸಿಕ ಸ್ಥಿತಿಯೂ ಮುಖ್ಯವಾಗಿರುತ್ತದೆ. ಅವಿಭಕ್ತ ಕುಟುಂಬದಲ್ಲಿ ಹಿರಿಯರ ಸಹಕಾರ, ಪ್ರೋತ್ಸಾಹಕ್ಕೆ ಕೊರತೆ ಇರದ ಕಾರಣ ಆತ್ಮಹತ್ಯೆ ಪ್ರಸಂಗಗಳು ಕಂಡುಬರುತ್ತಿರಲಿಲ್ಲ. ವಿಭಕ್ತ ಕುಟುಂಬಗಳಲ್ಲಿ ಪರಸ್ಪರ ಅಸಹಕಾರ, ಹೊಂದಾಣಿಕೆ ಕೊರತೆ ಮತ್ತು ವತ್ತಡಕ್ಕೆ ಒಳಗಾಗಿ ದಿನೆದಿನೆ ಆತ್ಮಹತ್ಯೆ ಹೆಚ್ಚುತ್ತಿವೆ. ಆತ್ಮ ಸ್ಥೈರ್ಯ, ಮಾನಸಿಕವಾಗಿ ಸದೃಢವಾಗಿ, ಧೈರ್ಯದಿಂದ ಇದ್ದರೆ ಇಂತಹ ಸಮಸ್ಯೆಗಳನ್ನು ತಡೆಯಬಹುದು. ನಮ್ಮಲ್ಲಿರುವ ಸಮಸ್ಯೆಯನ್ನು ಆತ್ಮೀಯರಾದವರಿಗೆ ಹೇಳಿಕೊಳ್ಳಬೇಕು. ಇದರಿಂದ ಮಾನಸಿಕ ಒತ್ತಡ ಕಡಿಮೆ ಆಗುತ್ತದೆ. ಎಲ್ಲವನ್ನೂ ಮುಕ್ತವಾಗಿ ಹಂಚಿಕೊಳ್ಳಬೇಕು. ಸಮಸ್ಯೆಯನ್ನು ಬಗೆಹರಿಸಿಕೊಳ್ಳುವಂತಹ ಸಾಮರ್ಥ್ಯವನ್ನು ಬೆಳೆಸಿಕೊಳ್ಳಬೇಕು ಎಂದರು.

ಪ್ರಾಚಾರ್ಯರಾದ ಎಸ್. ಆರ್ ಮೂಗನೂರಮಠ ಅವರು ಮಾತನಾಡಿ ಆತ್ಮಹತ್ಯೆ ಎನ್ನುವುದು ಮಹಾಪಾಪ. ಆತ್ಮ ಯಾವತ್ತೂ ಸಾಯುವುದಿಲ್ಲ ಶರೀರ ಮಾತ್ರ ಸಾಯುತ್ತದೆ ಎನ್ನುವುದು ಘೋಷ ವಾಕ್ಯವಾಗಿದೆ. ಆತ್ಮಹತ್ಯೆ ಎನ್ನುವುದು ಒಂದು ಮಾನಸಿಕ ಸಮಸ್ಯೆಯಾಗಿದೆ. ಮೆದುಳಿನಲ್ಲಿ ಹ್ಯಾಪಿನೆಸ್ ಹಾರ್ಮೋನ್ ಪ್ರಮಾಣ ಹೆಚ್ಚು ಕಡಿಮೆಯಾದಾಗ ಈ ತರಹದ ಸಮಸ್ಯೆ ಎದುರಾಗುತ್ತವೆ. ಸಮಸ್ಯೆಯಿಂದ ಹೊರ ಬರಲು ಎಲ್ಲರೊಂದಿಗೆ ಬೆರೆಯಬೇಕು. ತಪ್ಪು ಕಲ್ಪನೆ ಮಾಡಿಕೊಳ್ಳುವುದನ್ನು ಬಿಟ್ಟು, ಕಟ್ಟಿರುವ ಕನಸುಗಳ ಬಗ್ಗೆ ಹೆಚ್ಚಿನ ಗಮನ ಹರಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ಎನ್‌ಎಸ್‌ಎಸ್ ಘಟಕದ ಮುಖ್ಯಸ್ಥರಾದ ಡಾ. ಎಂ.ಹೆಚ್.ವಡ್ಡರ, ಡಾ.ವಿರುಪಾಕ್ಷ ಎನ್.ಬಿ, ಡಾ. ಆರ್.ಆರ್. ಅರಿಶಿನಗೋಡಿ, ಜ್ಯೋತಿ ದಿವಟೆ ಸೇರಿದಂತೆ ಬೋಧಕ ಬೋಧಕೇತರ ಸಿಬ್ಬಂದಿಗಳು ಹಾಗೂ ವಿಧ್ಯಾರ್ಥಿಗಳು ಉಪಸ್ಥಿತರಿದ್ದರು.

## ರೇಬಿಸ್ ರೋಗ ಜಾಗೃತಿ ಅಗತ್ಯ



**ಹಳ್ಳೂರ:** ರೇಬಿಸ್ ಲಸಿಕೆ ಹಾಕುವುದರಿಂದ ರೋಗವನ್ನು ನಿಯಂತ್ರಿಸಲು ಸಾಧ್ಯ ಎಂಬುದನ್ನು ವಿದ್ಯಾರ್ಥಿಗಳಿಗೆ ಪಾಠದ ಮೂಲಕ ಅರಿವು ಮೂಡಿಸಿ ರೋಗ ರುಜಿನಗಳು ಬಾರದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಪಶು ವೈದ್ಯಾಧಿಕಾರಿ ವಿಶ್ವನಾಥ ಹುಕ್ಕೇರಿ ಹೇಳಿದರು.

ಅವರು ಗ್ರಾಮದ ಶಿವಶಂಕರ ನಗರದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ರೇಬಿಸ್ ಜಾಗೃತಿ ಶಿಬಿರದ ಕಾರ್ಯಕ್ರಮದಲ್ಲಿ ಮಾತನಾಡಿ ಪ್ರತಿಯೊಂದು ನಾಯಿಗಳಿಗೆ ರೇಬಿಸ್ ಲಸಿಕೆ ಹಾಕುವುದು ಒಳ್ಳೆಯದು. ಹುಚ್ಚು ನಾಯಿ ಕಂಡುಬಂದರೆ ಜಾಗೃತ ವಹಿಸಿ ಲಸಿಕೆಯನ್ನು ಕಡ್ಡಾಯವಾಗಿ ಹಾಕಿಸಬೇಕು. ರೋಗದ ಬಗ್ಗೆ ರೋಗ ಹರಡುವ ವಿಧಾನ,ಲಕ್ಷಣಗಳು, ತಡೆಗಟ್ಟುವ ಮಾರ್ಗಗಳು ಲಸಿಕೆ ಮಹತ್ವವನ್ನು ಸಂಪೂರ್ಣ ಮಾಹಿತಿ ನೀಡಿದರು. ಈ ಸಮಯದಲ್ಲಿ ಪ್ರಧಾನ ಗುರುಗಳಾದ ಆರ್ ಕೆ ಮೇಲಗಡೆ. ಮುರಿಗೆಪ್ಪ ಮಾಲಗಾರ. ಬಿ ಜೆ ಪಾರ್ಥನಳ್ಳಿ. ಶೋಭಾ ಮುತಾರಿ. ಆರ್ ಪಿ ಹರಿಜನ ಸೇರಿದಂತೆ ವಿದ್ಯಾರ್ಥಿಗಳಿದ್ದರು.

### ಜಿಲ್ಲಾ ಮಟ್ಟದ ಮಾಸ್ಟರ್ ಟ್ರೈನರಗಳಿಗಾಗಿ ಒಂದು ದಿನದ ತರಬೇತಿ ಕಾರ್ಯಾಗಾರ

# ಸಮೀಕ್ಷೆಯಿಂದ ಯಾರು ಬಿಟ್ಟು ಹೋಗದಂತೆ ನೋಡಿಕೊಳ್ಳಬೇಕು

**ಕೊಪ್ಪಳ:** ಕೊಪ್ಪಳ ಜಿಲ್ಲೆಯಲ್ಲಿ ಸೆಪ್ಟೆಂಬರ್ 22 ರಿಂದ ಅಕ್ಟೋಬರ್ 7 ರವರೆಗೆ ನಡೆಯಲಿರುವ ನಾಗರಿಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳ ಕುರಿತ ಸಮೀಕ್ಷೆಯಲ್ಲಿ ಯಾರು ಬಿಟ್ಟು ಹೋಗದಂತೆ ನೋಡಿಕೊಳ್ಳಬೇಕೆಂದು ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಹೇಳಿದರು.

ಅವರು ಶುಕ್ರವಾರ ಕೊಪ್ಪಳ ಜಿಲ್ಲಾ ಪಂಚಾಯತ ಜೆ.ಎಚ್. ಪಟೇಲ್ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಕೊಪ್ಪಳ ಇವರ ಸಹಯೋಗದಲ್ಲಿ ಕರ್ನಾಟಕ ರಾಜ್ಯ ನಾಗರಿಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಕುರಿತು ಸಮೀಕ್ಷೆ–2025ರ ಜಿಲ್ಲಾ ಮಟ್ಟದ ಮಾಸ್ಟರ್ ಟ್ರೈನರಗಳಿಗಾಗಿ ಹಮ್ಮಿಕೊಂಡಿದ್ದ ಒಂದು ದಿನದ ತರಬೇತಿ ಕಾರ್ಯಾಗಾರದ ಉದ್ಘಾಟನೆ ನೆರವೇರಿಸಿ ಮಾತನಾಡಿದರು.

ತಾವು ಮಾಡುವ ಕೆಲಸ ಬಹಳ ಜವಾಬ್ದಾರಿಯಿಂದ ಇರುವುದರಿಂದ ಯಾವುದೇ ಮನೆಗಳು ಸಮೀಕ್ಷೆಯಲ್ಲಿ ಬಿಟ್ಟು ಹೋಗದಂತೆ ಎಚ್ಚರವಹಿಸಬೇಕು. ಸಮೀಕ್ಷೆಯಲ್ಲಿರುವ ಎಲ್ಲಾ ಪ್ರಶ್ನೆಗಳ ಬಗ್ಗೆ ಮೊದಲು ತಾವು ತಿಳಿದುಕೊಂಡು ಅರ್ಥಮಾಡಿಕೊಳ್ಳಬೇಕು. ಸಮಸ್ಯೆಗಳಿದ್ದರೆ ರಾಜ್ಯ ಮಟ್ಟದ ಮಾಸ್ಟರ್ ಟ್ರೇನರಗಳಿಂದ ಕೇಳಿ ತಿಳಿದಿಕೊಳ್ಳಬೇಕು. ಗಣತಿದಾರರು ಪ್ರತಿ ಮನೆಗಳ ಸಮೀಕ್ಷೆಗೆ ಹೋದಾಗ ತಮಗೆ ನೀಡಿದ ನೇಮಕಾತಿ ಆದೇಶ ಪ್ರತಿ ಮತ್ತು ಐಡಿ ಕಾರ್ಡಗಳನ್ನು ಕಡ್ಡಾಯವಾಗಿ ಧರಿಸಿಕೊಂಡು ಹೋಗಬೇಕು. ಸಮಗ್ರ ಮಾಹಿತಿ ಇರುವವರಿಂದ ಪ್ರಶ್ನೆಗಳನ್ನು ಕೇಳಿ ಮಾಹಿತಿ ಪಡೆಯಬೇಕು. ಮನೆಯಲ್ಲಿ ಯಾರು ಇಲ್ಲದಿದ್ದರೆ ಮತ್ತೊಮ್ಮೆ



ಮನೆಗಳಿಗೆ ಭೇಟಿ ನೀಡಿ ಮಾಹಿತಿ ಪಡೆದುಕೊಳ್ಳಬೇಕು ಎಂದು ಹೇಳಿದರು. ಈ ಸಮೀಕ್ಷೆ ಕಾರ್ಯಕ್ಕೆ ಕೊಪ್ಪಳ ಜಿಲ್ಲೆಯಲ್ಲಿ 2685 ಪ್ರಾಥಮಿಕ ಶಾಲೆಯ ಶಿಕ್ಷಕರನ್ನು ನಿಯೋಜನೆ ಮಾಡಲಾಗಿದೆ. 150 ಮನೆಗಳಿಗೆ ಒಬ್ಬ ಗಣತಿದಾರರು ಇರಲಿದ್ದಾರೆ. ಜಿಲ್ಲೆಯಲ್ಲಿ ಅಂದಾಜು 3 ಲಕ್ಷ 55 ಸಾವಿರ ಮನೆಗಳಿದ್ದು, ಈ ಎಲ್ಲಾ ಮನೆಗಳಿಗೆ ಈಗಾಗಲೇ ಜೆಸ್ಕಾಂನವರು ಶೇ. 85 ಪ್ರತಿಶತ ಜಿಯೊ ಟ್ಯಾಗ್ ಮಾಡಿದ್ದಾರೆ ಇದನ್ನು ಮಾಡದ ಮನೆಗಳಿಗೆ ಚೀಟಿಗಳನ್ನು ಅಂಟಿಸಲಾಗಿದೆ ಎಂದರು.

ನಮ್ಮ ಸಂವಿಧಾನದ ಪ್ರಸ್ತಾವನೆಯಲ್ಲಿ ಹೇಳಿದಂತೆ ಪ್ರತಿಯೊಬ್ಬರಿಗೂ ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ನ್ಯಾಯ ನೀಡುವುದಾಗಿದೆ. ಅಸಮಾನತೆ, ಲಿಂಗ ತಾರತಮ್ಯ, ವರ್ಗ, ಧರ್ಮ, ಜಾತಿ ಆಧಾರಿತ ಅಸಮಾನತೆ ಹೋಗಲಾಡಿಸಿ ಎಲ್ಲರಿಗೂ ಸಮಾನ ಅವಕಾಶಗಳನ್ನು ನೀಡಿ ಸಮ ಸಮಾಜ ನಿರ್ಮಾಣ ಮಾಡುವುದಾಗಿದೆ. ಪ್ರತಿ 10 ವರ್ಷಕ್ಕೆ ಸರಕಾರ ಜನರ ಸಾಮಾಜಿಕ. ಶೈಕ್ಷಣಿಕ ಸ್ಥಿತಿಗತಿಗಳ ಅಧ್ಯಯನ ಮಾಡುತ್ತದೆ ಎಂದು ಹೇಳಿದರು.

ಜಿಲ್ಲಾ ಮಟ್ಟದ ಮಾಸ್ಟರ್ ತರಬೇತಿದಾರರು ಈ ತರಬೇತಿ ಕಾರ್ಯಾಗಾರದಲ್ಲಿ ಹೇಳಿದ್ದನ್ನು ಸರಿಯಾಗಿ ತಿಳಿದುಕೊಂಡು ಮನೆ–ಮನೆಗೆ ಭೇಟಿ ನೀಡುವ ಗಣತಿದಾರರಿಗೆ ತಾವು ಚೆನ್ನಾಗಿ ತಿಳಿಸಬೇಕು. ಯಾವುದೇ ಸಮಸ್ಯೆಗಳಿದ್ದರೆ ಮೇಲಧಿಕಾರಿಗಳ ಗಮನಕ್ಕೆ ತರಬೇಕು. ಗಣತಿದಾರರು ತಮ್ಮ ಮನೆಗಳ ಸಮೀಕ್ಷೆಗೆ ಬಂದಾಗ ಜಿಲ್ಲೆಯ ಸಾರ್ವಜನಿಕರು ಅವರಿಗೆ ಸರಿಯಾದ ಮಾಹಿತಿ ನೀಡಿ ಸಹಕರಿಸಬೇಕೆಂದು ಹೇಳಿದರು.

ರಾಜ್ಯ ಮಟ್ಟದ ಮಾಸ್ಟರ್ ಟ್ರೈನರ್ ತರಬೇತಿದಾರರಾದ ಕೊಪ್ಪಳ ಜಿಲ್ಲಾ ತರಬೇತಿ ಸಂಸ್ಥೆಯ ಪ್ರಾಂಶುಪಾಲರಾದ ಕೃಷ್ಣಮೂರ್ತಿ ದೇಸಾಯಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಅಜ್ಜಪ್ಪ ಸೊಗಲದ., ಜಿಲ್ಲಾ ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ ಅಜ್ಮೀರ್ ಅಲಿ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಮಂಜುನಾಥ ಗುಂಡೂರ್ ಅವರು ತರಬೇತಿ ಕಾರ್ಯಾಗಾರದ ಕುರಿತು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ನಾಗಮಣಿ ಹೊಸಮನಿ. ವಾರ್ತಾ ಇಲಾಖೆಯ ಸಹಾಯಕ ನಿರ್ದೇಶಕ ಸುರೇಶ ಜಿ. ಸೇರಿದಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಮಾಸ್ಟರ ಟ್ರೈನರಗಳು ಈ ತರಬೇತಿ ಕಾರ್ಯಾಗಾರದಲ್ಲಿ ಭಾಗವಹಿಸಿದ್ದರು.



## ತಾಲೂಕು ಮಟ್ಟದ ಕ್ರೀಡಾಕೂಟಕ್ಕೆ ಚಾಲನೆ

**ಯರಗಟ್ಟಿ:** ಪಟ್ಟಣದ ಬಸವೇಶ್ವರ ಪ್ರೌಢ ಶಾಲಾ ಆವರಣದಲ್ಲಿ ಆಯೋಜಿಸಿದ್ದ 2025–26 ನೇ ಸಾಲಿನ ತಾಲೂಕು ಮಟ್ಟದ ಕ್ರೀಡಾಕೂಟಕ್ಕೆ ಕ್ಷೇತ್ರ ಸಮಸ್ವಾಧಿಕಾರಿ ಬಿ. ಎಸ್. ಬ್ಯಾಳಿ ಚಾಲನೆ ನೀಡಿದರು.

ನಂತರ ಮಾತನಾಡಿ, ಕ್ರೀಡೆ ದೈಹಿಕವಾಗಿ ಮಾನಸಿಕವಾಗಿ ಸದೃಢರಾಗಲು ಸಹಕಾರಿಯಾಗಿದೆ. ಪರಿಪೂರ್ಣ ಬದುಕು ಸಾಗಿಸಲು ಕ್ರೀಡೆಯಲ್ಲಿ ಹೆಚ್ಚಾಗಿ ತೊಡಗಿಸಿಕೊಳ್ಳಬೇಕು. ವಿದ್ಯಾಭ್ಯಾಸದ ಜತೆಗೆ ಕ್ರೀಡೆಯಲ್ಲಿ ವಿದ್ಯಾರ್ಥಿಗಳು ತೊಡಗಿಸಿಕೊಳ್ಳಬೇಕು ಎಂದರು.

ಪ. ಪಂ. ಮುಖ್ಯಾಧಿಕಾರಿ ಮಹೇಶ ಭಜಂತ್ರಿ, ಮರಡಿ ಬಸವೇಶ್ವರ ವಿದ್ಯಾ ಪ್ರಸಾರ ಮಂಡಳಿ ಅಧ್ಯಕ್ಷ ಗೌಡಪ್ಪ ದೇವರಡ್ಡಿ, ಉಪಾಧ್ಯಕ್ಷ ಮಂಜುನಾಥ ತಡಸಲೂರ, ಪ. ಪಂ. ಸದಸ್ಯರಾದ ಹನಮಂತ ಹಾರೂಗೊಪ್ಪ, ನಿಖಿಲ ಪಾಟೀಲ, ವೈಧ್ಯಾಧಿಕಾರಿ ಡಾ. ಅನಸುಯಾ ಕಿವಡಸಣ್ಣನವರ, ಸಿಆರ್‌ಸಿ ವಸಂತ ಬಡಿಗೇರ, ಪ್ರಾಧಾನ ಗುರುಗಳಾದ ಬಿ. ಎಸ್. ಆಲದಕಟ್ಟಿ, ಎನ್. ಎಸ್. ಕಾಂಬಳೆ, ಡಾ. ಕುಮಾರ ದಾಸರ, ಶಿವಾನಂದ ಮಿಕಲಿ, ಎಮ್. ಎಸ್. ಗುಗ್ಗರನಟ್ಟಿ, ಆರ್. ಬಿ. ಗಾಣಗೇರ, ಎಮ್. ಎನ್. ಚೌಡಪ್ಪನ್ನವರ ಸೇರಿದಂತೆ ಅನೇಕರು ಇತರರು ಇದ್ದರು.

## ರಾಹುಲ್ ಸ್ಪರ್ಧೆ ಬಗ್ಗೆ ಇನ್ನು ನಿರ್ಧರಿಸಿಲ್ಲ

**ಬೆಳಗಾವಿ:** ಬಿಡಿಸಿಸಿ ಬ್ಯಾಂಕ್ ಚುನಾವಣೆಗೆ ಕಾಲಾವಕಾಶವಿದೆ. ಡಿಸಿಸಿ ಬ್ಯಾಂಕ್ ನ ನಿರ್ದೇಶಕ ಸ್ಥಾನಕ್ಕೆ ರಾಹುಲ್ ಜಾರಕಿಹೊಳಿ ಸ್ಪರ್ಧಿಸುವ ಕುರಿತು ಇನ್ನು ಯಾವುದೇ ನಿರ್ಧಾರವಾಗಿಲ್ಲ ಎಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಎದುರು ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಹುಕ್ಕೇರಿಯಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿಲ್ಲ. ಕಳೆದೆರೆಡು ದಿನಗಳಲ್ಲಿ ಆಗುತ್ತಿರುವ ಬೆಳವಣಿಗೆಗಳಿಗೆ ನಾವು ಕಾರಣವಲ್ಲ. ಡಿಸಿಸಿ ಬ್ಯಾಂಕ್ ಚುನಾವಣೆಗೆ ಸಂಬಂಧಿಸಿದಂತೆ ನಾವು ಯಾರನ್ನು ಹೈಜಾಕ್ ಮಾಡಿಲ್ಲ. ನೀವು ಯಾರದೋ ಮಾತು ಕೇಳಿ ನಮ್ಮನ್ನು ಪ್ರಶ್ನಿಸಬಾರದು ಎಂದು ಮಾಧ್ಯಮದವರಿಗೆ ತಿಳಿ ಹೇಳಿದರು.

ಪ್ರೊಡ್ಯೂಸರ್, ಡೈರೆಕ್ಟರ್ ಜಿಲ್ಲೆಯಲ್ಲಿ ಬಿಡಿಸಿಸಿ ಬ್ಯಾಂಕ್ ಚುನಾವಣೆ ಮಾಡುತ್ತಿದ್ದಾರೆ. ಸಮಯ ಬಂದಾಗ ಅಕ್ಕಾಡಕ್ಕೆ ಇಳಿಯುತ್ತಾರೆ. ಇನ್ನು ಚುನಾವಣೆಗೆ ಕಾಲಾವಕಾಶವಿದೆ ಎಂದರು.

## ಮದಿಹಳ್ಳಿ ಘಟನೆ: ಕ್ಷಮೆಯಾಚಿಸಿದ ಮಹಿಳೆ

**ಬೆಳಗಾವಿ:** ಕಳೆದ ನಾಲ್ಕೈದು ದಿನಗಳ ಹಿಂದೆ ಹುಕ್ಕೇರಿ ತಾಲೂಕಿನ ಮದಿಹಳ್ಳಿ ಗ್ರಾಮದಲ್ಲಿ ಸಚಿವ ಸತೀಶ್ ಜಾರಕಿಹೊಳಿ ಅವರ ಎದುರು ಗಂಡನ ಕೊರಳಪಟ್ಟಿ ಹಿಡಿದು ಎಳೆದಾಡಿದ ಮಹಿಳೆ, ಇಂದು ಸ್ವತಃ ಸಚಿವ ಸಚತೀಶ ಜಾರಕಿಹೊಳಿ ಅವರಲ್ಲಿ ಕ್ಷಮೆಯಾಚಿಸಿದ್ದಾರೆ.

ಸೆ. 9 ರಂದು ಹುಕ್ಕೇರಿ ತಾಲೂಕಿನ ಮದಿಹಳ್ಳಿ ಗ್ರಾಮದಲ್ಲಿ ಬೆಳಗಾವಿ ಡಿಸಿಸಿ ಬ್ಯಾಂಕ್ ಚುನಾವಣೆ ಹಿನ್ನೆಲೆಯಲ್ಲಿ ಮದಿಹಳ್ಳಿ ಗ್ರಾಮದ ಪಿಕೆಪಿಎಸ್ ಸದಸ್ಯರು ಸೇರಿಕೊಂಡು ಒಬ್ಬರಿಗೆ ಮತದಾನ ಮಾಡುವ ಹಕ್ಕು ನೀಡಲು ಸಭೆ ನಿಗದಿ ಮಾಡಿದ್ದರು. ಈ ವೇಳೆ ಪಿಕೆಪಿಎಸ್ ಸದಸ್ಯ ಮಾರುತಿ ಸನದಿ ಪತ್ನಿ ಸಚಿವ ಸತೀಶ್ ಜಾರಕಿಹೊಳಿ ಅವರ ಎದುರೇ ಮಾರುತಿ ಸನದಿ ಕೊರಳು ಪಟ್ಟಿ ಹಿಡಿದು ಎಳೆದಾಡಿದ್ದರು.

ಪಿಕೆಪಿಎಸ್ ಸದಸ್ಯ ಮಾರುತಿ ಸನದಿ ಪತ್ನಿ ಲಗಮವ್ವಾ ಸನದಿ ಅವರು ಈಗ ತಮ್ಮ ತಪ್ಪಿನ ಅರಿವಾಗಿ ಇಂದು ಸ್ವತಃ ಸಚಿವ ಸತೀಶ ಜಾರಕಿಹೊಳಿ ಅವರಲ್ಲಿ ಕ್ಷಮೆಯಾಚಿಸಿದ್ದಾರೆ. ಸಚಿವ ಸತೀಶ್ ಜಾರಕಿಹೊಳಿ ಅವರು ಅಲ್ಲಿ ಇರುವುದು ನನ್ನ ಗಮನಕ್ಕೆ ಬಂದಿಲ್ಲ. ಸಚಿವರು ನಮ್ಮ ಜಿಲ್ಲೆಯ ನಾಯಕರು. ಅವರ ಮುಂದೆ ನನ್ನ ಪತಿ ಅವರೊಂದಿಗೆ ಕೆಟ್ಟದಾಗಿ ನಡೆದುಕೊಂಡಿದ್ದು ನನಗೂ ಬೇಸರ ತರಿಸಿದೆ ಎಂದು ಕ್ಷೇಮೆ ಯಾಚಿಸಿದ್ದಾರೆ.

## ರಂಗ ಕಲಾವಿದರ ಪ್ರೋತ್ಸಾಹಕ್ಕೆ ಮನವಿ

**ಗೋಕಾಕ:** ನಗರದ ಬಸ್ ನಿಲ್ದಾಣ ಸಮೀಪದ ಮಾರಾಭಾಯಿ ದೇವಸ್ಥಾನದ ಹತ್ತಿರದಲ್ಲಿ ಹಾಕಿರುವ ರಂಗಮಂದಿರದಲ್ಲಿ ವಿಶ್ವ ಜ್ಯೋತಿ ಶ್ರೀ ಪಂಚಾಕ್ಷರಿ ನಾಟ್ಯ ಸಂಘ ಜೇವರ್ಗಿ ಇವರಿಂದ ರಾಜಣ್ಣ ಜೇವರ್ಗಿ ವಿರಚಿತ ನಾಟಕ ಖಾನಾವಳಿ ಚೆನ್ನಿ ಅರ್ಥಾತ್ ಬಸ್ ಕಂಡಕ್ಟರ್ ನಾಟಕವು ಪ್ರಾರಂಭಗೊಂಡಿದೆ.

ಮುಖ್ಯ ಪಾತ್ರದಲ್ಲಿ ಸುಜಾತಾ ಜೇವರ್ಗಿ, ಕಾಮಿಡಿ ಕಿಲಾಡಿ ಮಾರುತಿ ಶೆಟ್ಟಿ ಕಾಣಿಕೊಳ್ಳಲಿದ್ದು ಮುಂಬರುವ ದಿನಗಳಲ್ಲಿ ವಿವಿಧ ನಾಟಕ ಪ್ರದರ್ಶನ ಮಾಡಲಿದ್ದು ಕಲಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ನಾಟಕವನ್ನು ನೋಡಿ ಬಡ ರಂಗ ಕಲಾವಿದರನ್ನು ಪ್ರೋತ್ಸಾಹಿಸಬೇಕು ಎಂದು ನಾಟಕ ಕಂಪನಿ ಮಾಲಿಕರಾದ ರಾಜಣ್ಣ ಜೇವರ್ಗಿ ಪ್ರಕಟಣೆ ಮೂಲಕ ಕೋರಿದ್ದಾರೆ.

# 105ನೇ ಜ್ಞಾನೇಶ್ವರಿ ಸಪ್ತಾಹ ಧಾರ್ಮಿಕ ಕೀರ್ತನೆ ಕಾರ್ಯಕ್ರಮ

**ರಾಯಬಾಗ:** ಪಟ್ಟಣದಲ್ಲಿ ವಿಠಲ ಮಂದಿರದಲ್ಲಿ 105ನೇ ಜ್ಞಾನೇಶ್ವರಿ ಸಪ್ತಾಹ ಧಾರ್ಮಿಕ ಕೀರ್ತನೆ ಕಾರ್ಯಕ್ರಮದಲ್ಲಿ ಅಮೃತಾಶ್ರಮ ಸ್ವಾಮಿ ಮಹಾರಾಜರು ತಮ್ಮ ಓಜಸ್ವಿ ವಾಣಿಯಿಂದ ಗ್ರಾಮಸ್ಥರಿಗೆ ಆಧ್ಯಾತ್ಮಿಕ, ಸಾಮಾಜಿಕ ಹಾಗೂ ನೈತಿಕತೆ ಕುರಿತ ಅಮೂಲ್ಯ ಸಂದೇಶ ನೀಡಿದರು. ಈ ಸಮಾರಂಭಕ್ಕೆ ರಾಯಬಾಗ ಹಾಗೂ ಸುತ್ತಮುತ್ತಲಿನ ಸಾವಿರಾರು ಭಕ್ತರು ಬಹಳ ಸಂಖ್ಯೆಯಲ್ಲಿ ಹಾಜರಾಗಿದ್ದರು.



ಸ್ವಾಮಿ ಮಹಾರಾಜರು ತಮ್ಮ ಕೀರ್ತನೆಗಳಲ್ಲಿ ಸಂತ ಪರಂಪರೆಯ ಮಹತ್ವವನ್ನು ಒತ್ತಿಹೇಳಿ, ನಾಮಸ್ಮರಣೆ, ಸತ್ಯ, ಅಹಿಂಸೆ ಮತ್ತು ಪರಸ್ಪರ ಪ್ರೀತಿಯ ಅಮೂಲ್ಯ ಸಂದೇಶಗಳನ್ನು ನೀಡಿದರು. "ಜೀವನವೆಂಬುದು ಕೇವಲ ಸಾಂಸಾರಿಕ ಸುಖಕ್ಕಾಗಿ ಅಲ್ಲ, ಅದು ಇಶ್ವರ ಪ್ರಾಪ್ತಿಗಾಗಿ" ಎಂದು ತಿಳಿಸಿ, ಸಂತ ಜ್ಞಾನೇಶ್ವರ, ಸಂತ ತುಕಾರಾಮ ಹಾಗೂ ಸಂತ ಏಕನಾಥರ ಓವಿಗಳನ್ನು ಉದಾಹರಣೆಯಾಗಿ ಹೇಳಿದರು. ಇದರಿಂದ ಶ್ರೋತರ ಕಣ್ಣು ನೀರಿನಿಂದ ತೇವಗೊಂಡು, ಹೃದಯಗಳು ಭಕ್ತಿಭಾವದಿಂದ ತುಂಬಿದವು.

ಕೀರ್ತನೆ ಪ್ರಾರಂಭವಾಗುತ್ತಿದ್ದಂತೆಯೇ ಗ್ರಾಮದ ಮಹಿಳಾ ಮಂಡಳಿಯವರು ಸುಂದರ ಭಜನೆಗಳನ್ನು ಸಲ್ಲಿಸಿದರು. ತಾಳ, ಮೃದಂಗ ಮತ್ತು ಹಾರ್ಮೋನಿಯಂ ನಾದಗಳ ನಡುವೆ "ರಾಮ ಕೃಷ್ಣ ಹರೀ" ಎಂಬ ಘೋಷಣೆಗಳಿಂದ ಸಕಲ ವಾತಾವರಣವು ಭಕ್ತಿಮಯವಾಯಿತು. ಇದರಲ್ಲಿ ಮಕ್ಕಳಿಂದ ಹಿಡಿದು ವೃದ್ಧರ ತನಕ ಎಲ್ಲರೂ ಉತ್ಸಾಹದಿಂದ ಭಾಗವಹಿಸಿದರು. ಗ್ರಾಮದ ಯುವಕರೂ ಕೀರ್ತನೆಗೆ ಅಗತ್ಯವಿರುವ ಸೌಲಭ್ಯ ಹಾಗೂ ಶಿಸ್ತಿನ ವ್ಯವಸ್ಥೆಯನ್ನು ಉತ್ತಮವಾಗಿ ನಿರ್ವಹಿಸಿದರು.

ಸಮಾರಂಭದ ಅಂತ್ಯದಲ್ಲಿ ಸಾಮೂಹಿಕ ಆರತಿ ನೆರವೇರಿಸಲಾಯಿತು. ನಂತರ ಎಲ್ಲ ಭಕ್ತರಿಗೆ ಮಹಾಪ್ರಸಾದ ವಿತರಿಸಲಾಯಿತು. ಗ್ರಾಮದ ಎಲ್ಲಾ ವರ್ಗದ ಜನರ ಸಹಕಾರದಿಂದ ಈ ಕಾರ್ಯಕ್ರಮ ಯಶಸ್ವಿಯಾಗಿ ನೆರವೇರಿತು. ಭಕ್ತರು ಅಮೃತಾಶ್ರಮ ಸ್ವಾಮಿ ಮಹಾರಾಜರಿಗೆ ಮನಃಪೂರ್ವಕ ಧನ್ಯವಾದಗಳನ್ನು ತಿಳಿಸಿ, ಮುಂದೆಯೂ ಇಂತಹ ಕೀರ್ತನೆಗಳು ನಡೆಯಲಿ ಎಂದು ಹಾರೈಸಿದರು. ಈ ಸಂದರ್ಭದಲ್ಲಿ ಸುತ್ತಮುತ್ತಲಿನ ಪಂಡರಪುರ ವಾರ್ಕರಿ ಸಂಪ್ರದಾಯದ ಭಕ್ತರಲ್ಲರು ಉಪಸ್ಥಿತರಿದ್ದರು.

## ಅರಿವು ಕಾರ್ಯಕ್ರಮ

**ಕಾರವಾರ:** ಪ್ರಧಾನಮಂತ್ರಿ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ (PMEME) ಯೋಜನೆಯಡಿ ಕಿರು ಆಹಾರ ಸಂಸ್ಕರಣೆ ಅಥವಾ ಮೌಲ್ಯವರ್ಧನೆ ಘಟಕಸ್ಥಾಪನೆಗೆ ಶೇ50ರ ಸಹಾಯಧನದಲ್ಲಿ ಗರಿಷ್ಟ ರೂ. 15 ಲಕ್ಷದವರೆಗೆ ಬ್ಯಾಂಕ್ ಲೋನ್ ಮುಖಾಂತರ ಸಹಾಯಧನದ ಅವಕಾಶವಿದ್ದು, ಸದರಿ ಯೋಜನೆಯ ಜಿಲ್ಲಾ ಮಟ್ಟದ ಅರಿವು ಮೂಡಿಸುವ ಕಾರ್ಯಕ್ರಮವನ್ನು ಸೆ.16 ರಂದು ಬೆಳಗ್ಗೆ 10.30 ಗಂಟೆಗೆ ಉತ್ತರ ಕನ್ನಡ ಜಿಲ್ಲಾ ಪಂಚಾಯತ್, ಕಾರವಾರ ಸಭಾಭವನದಲ್ಲಿ ಆಯೋಜಿಸಲಾಗಿರುತ್ತದೆ. ಈ ಯೋಜನೆಯಡಿ ಲಭ್ಯವಾಗುವ ಸಾಲ ಸೌಲಭ್ಯ ಹಾಗೂ ಸಹಾಯಧನ ಕುರಿತು ಸಂಪೂರ್ಣ ಮಾಹಿತಿಯನ್ನು ಕೆಪೆಕ್ ಸಂಸ್ಥೆ, ಬೆಂಗಳೂರು ರವರು ನೀಡಲಿದ್ದು, ಆಸಕ್ತ ರೈತರು ಕಾರ್ಯಕ್ರಮದಲ್ಲಿ ಭಾಗವಹಿಸಿ ಪ್ರಯೋಜನ ಪಡೆಯಲು ತಿಳಿಸಿದೆ. ರೈತರು ಹೆಚ್ಚಿನ ಮಾಹಿತಿಗಾಗಿ ಯೋಜನೆಯ ಜಿಲ್ಲಾ ಸಂಪನ್ಮೂಲ ವ್ಯಕ್ತಿಯಾದ ಸುಜಯ ಭಟ್ ದೂ.ಸಂಖ್ಯೆ: 8088597319 / 9482287323 ನ್ನು ಸಂಪರ್ಕಿಸುಂತೆ ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

## ಕಲಾವಿದರನ್ನು ಗೌರವದಿಂದ ಕಾಣುವಂತಾಗಬೇಕು



**ರಬಕವಿ–ಬನಹಟ್ಟಿ:** ಕಂಪನಿ ನಾಟಕಗಳ ಸಂಖ್ಯೆ ದಿನದಿಂದ ಕ್ಷೀಣಿಸುತ್ತಿದ್ದು, ಉಳಿದ ಕಂಪನಿಗಳನ್ನು ಮತ್ತು ಅಲ್ಲಿರುವ ಕಲಾವಿದರನ್ನು ಪ್ರೋತ್ಸಾಹಿಸುವುದು ನಮ್ಮೆಲ್ಲರ ಕರ್ತ್ಯವ್ಯವಾಗಿದೆ ಎಂದು ನಗರದ ಮುಖಂಡ ಮಲ್ಲಿಕಾರ್ಜುನ ಬಾಣಕಾರ ತಿಳಿಸಿದರು. ಅವರು ಶುಕ್ರವಾರ ಇಲ್ಲಿನ ಕೆ ಇ ಬಿ ಮುಂಭಾಗದಲ್ಲಿ ಶ್ರೀಗುರು ಕುಮಾರೇಶ್ವರ ನಾಟ್ಯ ಸಂಘದವು ಹಾಕಿದ ಮಂಟಪದಲ್ಲಿ ನಾಟಕ ಪ್ರದರ್ಶನದ ಉದ್ಘಾಟನೆಯ ಕಾರ್ಯಕ್ರಮದಲ್ಲಿ ಮಾತನಾಡಿದರು.

ಯುವ ಮುಖಂಡ ರಾಜೇಂದ್ರ ಭದ್ರನವರ ಮಾತನಾಡಿ, ರಂಗಭೂಮಿಯನ್ನು ಉಳಿಸಿ ಬೆಳೆಸಬೇಕಾದರೆ ಹೆಚ್ಚಿನ ಸಂಖ್ಯೆಯಲ್ಲಿ ನಾಟಕಗಳು ಪ್ರದರ್ಶನಗೊಳ್ಳಬೇಕು. ನಾಟಕ ಮತ್ತು ಕಲಾವಿದರನ್ನು ಪ್ರೋತ್ಸಾಹಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದರು. ಶ್ರೀಶೈಲ ದಭಾಡಿ ಮಾತನಾಡಿದರು. ನಾಟಕ ಸಂಘದ ಶ್ರೀಧರ ಹೆಗ್ಗಡೆ, ಮ್ಯಾನೇಜರ್ ಪಂಚಾಕ್ಷರಿ ಹೂಗಾರ ಮಾತನಾಡಿದರು. ರಬಕವಿ ಬನಹಟ್ಟಿ ನಗರಸಭೆಯ ಅಧ್ಯಕ್ಷೆ ವಿದ್ಯಾ ಧಬಾಡಿ ಪ್ರದರ್ಶನವನ್ನು ಉದ್ಘಾಟಿಸಿದರು. ಬನಹಟ್ಟಿಯ ಹಿರೇಮಠದ ಶರಣಬಸವ ಶಿವಾಚಾರ್ಯರು ಸಾನ್ನಿಧ್ಯ ವಹಿಸಿದ್ದರು. ಸಿದ್ದನಗೌಡ ಪಾಟೀಲ, ಶ್ರೀಶೈಲ ಉಳ್ಳಾಗಡ್ಡಿ, ಶೇಖರ ಜವಳಗಿ, ಮಲ್ಲಪ್ಪ ಹೂಲಿ, ಶಂಕರ ಜಾಲಿಗಿಡದ, ದಾನಪ್ಪ ಹುಲಜತ್ತಿ, ರವಿ ಬಾಡಗಿ, ವಿಶ್ವಪಜ ಕಾಡದೇವರ, ಶಿವಾನಂದ ಮಹಾಬಳಶೆಟ್ಟಿ, ಯಶವಂತ ವಾಜಂತ್ರಿ, ಪ್ರಕಾಶ ಕುಂಬಾರ ಸೇರಿದಂತೆ ಅನೇಕರು ಇದ್ದರು.

### ಶ್ರೀ ಮಹಾತ್ಮಾ ಬಸವೇಶ್ವರ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರಿ ಸಂಘ ನಿ., ಹಾರೂಗೇರಿ

**5ನೇ ವಾರ್ಷಿಕ ಸರ್ವ ಸಾಧಾರಣ ಸಭೆಯ ನೋಟಿಸು**

ಸಂಘದ ಸನ್ 2024–25 ನೇ ಸಾಲಿನ ವಾರ್ಷಿಕ ಸರ್ವಸಾಧಾರಣ ಸಭೆಯನ್ನು ಶುಕ್ರವಾರ ದಿನಾಂಕ 19–9–2025 ರಂದು ಸಂಜೆ 4 ಗಂಟೆಗೆ ಸಂಘದ ಕಚೇರಿಯ ಆವರಣದಲ್ಲಿ ಸಂಘದ ಅಧ್ಯಕ್ಷರಾದ ಶ್ರೀ ಸಿದಗೌಡ ಕಲಗೌಡ ಪಾಟೀಲ ಇವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಆಯೋಜಿಸಲಾಗಿದೆ. ಸಂಘದ ಎಲ್ಲಾ ಸದಸ್ಯರಿಗೆ ಈಗಾಗಲೇ ಸಭೆಯ ನೋಟಿಸುಗಳನ್ನು ತಲುಪಿಸಲಾಗಿದ್ದು. ಆದರೂ ಕೂಡ ಯಾರಿಗಾದರೂ ನೋಟೀಸ್ ತಲುಪದೇ ಇದ್ದಲ್ಲಿ ಇದನ್ನು ನೋಟಿಸ್ ಎಂದು ಪರಿಗಣಿಸಿ ಸರ್ವ ಸದಸ್ಯರು ನಿಗದಿತ ಸಮಯಕ್ಕೆ ಸಭೆಗೆ ಹಾಜರಾಗಲು ಸರ್ವ ಸದಸ್ಯರಲ್ಲಿ ವಿನಂತಿಸಿಕೊಳ್ಳುತ್ತೇನೆ.

**ಆಡಳಿತ ಮಂಡಳಿಯ ಪರವಾಗಿ**

**ಸ್ಥಳ: ಹಾರೂಗೇರಿ**
**ದಿನಾಂಕ: 11–09–2025**

| ಸಹಿ | ಸಹಿ |
|---|---|
| ಶ್ರೀ ಆನಂದ ಮಾ ಅಂಗಡಿ<br>ಮುಖ್ಯ ಕಾರ್ಯನಿರ್ವಾಹಕರು. | ಶ್ರೀ ಸಿದಗೌಡ ಕಲಗೌಡ ಪಾಟೀಲ<br>ಅಧ್ಯಕ್ಷರು. |

# ದಸರಾ ಹಬ್ಬದ ಪ್ರಯುಕ್ತ ವಿವಿಧ ಕಾರ್ಯಕ್ರಮ

**ಜಮಖಂಡಿ:** ದಸರಾ ಹಬ್ಬದ ಪ್ರಯುಕ್ತ ಸೆ, 22 ರಿಂದ 4–10–2025 ರವರೆಗೆ ಲೋಕ ಕಲ್ಯಾಣಕ್ಕಾಗಿ ಹೋಮ, ರುದ್ರಾಭೀಷೇಕ, ದೇವಿಅಭಿಷೇಕ, ಕುಂಕುಮಾರ್ಚಣೆ ಹೀಗೆ ಹಲವಾರು ಕಾರ್ಯಕ್ರಮಗಳನ್ನು ಮುತ್ತಿನಕಂತಿ ಮಠದಲ್ಲಿ ನಡೆಯುತ್ತವೆ. ಇಂತಹ ಕಾರ್ಯಗಳನ್ನು ಮಾಡುವ ಮೂಲಕ ದೇಶಕ್ಕೆ ಒಳಿತನ್ನು ನೀಡುವ ಸಂಕಲ್ಪವನ್ನು ಶ್ರೀಮಠ ಹೊಂದಿದೆ ಎಂದು ಮುತ್ತಿನಕಂತಿ ಮಠದ ಶಿವಲಿಂಗ ಪಂಡಿತರಾಧ್ಯ ಶಿವಾಚಾರ್ಯ ಶ್ರೀಗಳು ಹೇಳಿದರು.

ನಗರದ ಮುತ್ತಿನಕಂತಿ ಮಠದ ಸಭಾಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ದಸರಾ ಹಬ್ಬದ ನಿಮಿತ್ತವಾಗಿ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು, ದಸರಾ ಮಹೋತ್ಸವವು ನಾಡಹಬ್ಬ ಸಡಗರ ಸಂಭ್ರಮದಿಂದ ನಡೆಯುತ್ತಾ ಬಂದಿರುವ ಹಬ್ಬವಾಗಿದೆ. 2008 ರಲ್ಲಿ ದಸರಾ ಉತ್ಸವವನ್ನು ಶ್ರೀಮಠದಲ್ಲಿ ಪ್ರಾರಂಭ ಮಾಡಲಾಯಿತು. ದೇವಿ ಕೃಪೆಯಿಂದ ಸಮಾಜದಲ್ಲಿ ಬದಲಾವಣೆ ಮಾಡಲು ಅನುಕೂಲವಾಯಿತು. ವಿವಿಧ ಸಂಸ್ಕೃತಿಕ ಕಾರ್ಯಕ್ರಮ ಹಮ್ಮಿಕೊಳ್ಳುವ ಜೊತೆಗೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ಸನ್ಮಾನಿಸಿ ಗೌರವಿಸುತ್ತಾ ಬಂದಿದೆ. ಅದರ ಜೊತೆಗೆ ಪರಿಸರ ರಕ್ಷಣೆ ಮಾಡುತ್ತಾ ಬಂದಿದೇವೆ. ಕೇವಲ ಮಠದ ಜವಾಬ್ದಾರಿ ಅಲ್ಲ. ಸಮಾಜದ ಜವಾಬ್ದಾರಿ ಆಗಿದೆ. ಜಾತಿ, ಮತ, ಪಂತ, ಭೇದ, ಭಾವ ಮರೆತು ಸಮಾನತೆಯನ್ನು ಕಾಣುವ ಮಠದ ಕಾರ್ಯನಿರ್ವಹಿಸುತ್ತಾ ಬಂದಿದೆ. ಮಠದ ಭಕ್ತರು ಸಾಕ?ಟ್ಟಿ ಮಠದಲ್ಲಿ ಸಾಮಾಜಿಕ ಸೇವೆಯನ್ನು ಸಲಿಸುತ್ತಾ ಬಂದಿದ್ದಾರೆ. ಲೋಕ ಕಲ್ಯಾಣಕ್ಕಾಗಿ ದೇವಿಯ ಪೂಜೆಯನ್ನು ಸಲಿಸುತ್ತಾ ಬಂದಿದೆ. ತಂದೆಗಿಂತಲು ತಾಯಿ ಬಹಳ ಬೇಗನೆ ಒಳಿಯುತ್ತಾಳೆ. ಅದಕ್ಕಾಗಿ ನಾಡ ಹಬ್ಬ ಎಂದರೆ ದೇವಿ ಹಬ್ಬವಾಗಿದೆ ಎಂದರು.

2007, ಮಠದ ಜವಾಬ್ದಾರಿ ಜೊತೆಗೆ ಸಮಾಜವನ್ನು ಸುಧಾರಣೆಗೆಯನ್ನು ನನ್ನ ಮೇಲೆ ಶ್ರೀಗಳು ನೀಡಿದ್ದಾರೆ. ಅವರ ಕೃಪಾಶೀರ್ವಾದದಿಂದ ಹೇಗೆ ಮುನ್ನಡೆಸಬೇಕೆಂಬ ಉದ್ದೇಶವನ್ನು ಹೊಂದಿದೆ. ಕೇವಲ ಮಠದ ಜವಾಬ್ದಾರಿ ಅಲ್ಲ. ಸಮಾಜದ ಜವಾಬ್ದಾರಿಯು ಸಹ ಬಹಳ ಮುಖ್ಯವಾಗಿದೆ. ಇಂದಿನ ಯುಗದಲ್ಲಿ ಹಿಂದಿನ ಸಂಸ್ಕೃತಿಯನ್ನು ಹಾಳುವ ಮಾಡುತ್ತಿದ್ದೇವೆ. ಅದನ್ನು ತಡೆಯುವ ಕೆಲಸವನ್ನು ಶ್ರೀಮಠದ ಜೊತೆಗೆ ಭಕ್ತರು ಮಾಡಬೇಕಾಗಿದೆ. ಅನ್ನಪ್ರಸಾದ, ಉಡಿತುಂಬುವ ಕೆಲಸ ಹೀಗೆ ಹಲವಾರು ಕಾರ್ಯಕ್ರಮಗಳು ಸತತವಾಗಿ 18 ವರ್ಷಗಳ ಕಾಲ ಜರುಗುತ್ತಾ ಬಂದಿವೆ ಎಂದರು. ಆನಂದ ದೇವರು, ಹುಲ್ಯಾಳ ದುಂಡಪ್ಪ ಅಜ್ಜನ್ನವರು, ಜಗ್ಗದ ಯಲ್ಲಮ್ಮ ದೇವಿಯ ಅರ್ಚಕ ಪರುಶುರಾಮ ಪೂಜಾರಿ ಸುದ್ದಿಗೋಷ್ಠಿಯಲ್ಲಿ ಇದ್ದರು. ಸಾಗರ ಸ್ವಾಗತಿಸಿದರು, ಪ್ರಾಸ್ತಾವಿಕವಾಗಿ ಪ್ರದೀಪ ಮೆಟ್ಟಗುಡ್ಡ ಮಾತನಾಡಿದರು.

# ಸಾಲಾಪೂರ ಏತ ನೀರಾವರಿ ಕಾಮಗಾರಿ

## ಉಪ ಹಂಚು ಕಾಲುವೆ ನಿರ್ಮಾಣಕ್ಕೆ ಭೂಮಿಪೂಜೆ



**ರಾಮದುರ್ಗ:** ಸಾಲಾಪೂರ ಬಸವೇಶ್ವರ ಏತ ನೀರಾವರಿ ಯೋಜನೆ ಅಡಿಯಲ್ಲಿ ತಾಲೂಕಿನ 19 ಗ್ರಾಮಗಳ ಸುಮಾರು 13 ಸಾವಿರ ಹೆಕ್ಟರ್ ಭೂ ಪ್ರದೇಶ ನೀರಾವರಿ ಸೌಲಭ್ಯ ಪಡೆಯಲಿದೆ. ಶೀಘ್ರ ಕಾಮಗಾರಿಯನ್ನು ಮುಕ್ತಾಯಗೊಳಿಸಲು ಶ್ರಮಿಸುವುದಾಗಿ ವಿಧಾನಸಭೆ ಮುಖ್ಯ ಸಚೇತಕ ಹಾಗೂ ಶಾಸಕ ಅಶೋಕ ಪಟ್ಟಣ ಭರವಸೆ ನೀಡಿದರು.

ತಾಲೂಕಿನ ಬಟಕುರ್ಕಿ ಗ್ರಾಮದ ಹತ್ತಿರ ಬೃಹತ್ ಮತ್ತು ಮಧ್ಯಮ ನೀರಾವರಿ ಇಲಾಖೆ ಹಾಗೂ ಜಸಸಂಪನ್ಮೂಲ ಇಲಾಖೆಯ ಅಡಿಯಲ್ಲಿ ಸುಮಾರು 27 ಕೋಟಿ ವೆಚ್ಚದಲ್ಲಿ ಸಾಲಾಪೂರ ಏತ ನೀರಾವರಿ ಮಲಪ್ರಭಾ ಎಡದಂಡೆ ಕಾಲುವೆಯ ಸುಮಾರು 27 ಕಿ.ಮೀ ರೈತರ ಜಮೀನಿಗೆ ನೀರಾವರಿ ಸಂಪರ್ಕ ಕಲ್ಪಿಸುವ ಉಪ ಹಂಚು ಕಾಲುವೆ ನಿರ್ಮಾಣ, ಮುದೇನಕೊಪ್ಪ ಕಾಗಿ ಹಳ್ಳಕ್ಕೆ 2.70 ಕೋಟಿ ವೆಚ್ಚದಲ್ಲಿ ಬ್ರಿಡ್ಜ್ ಕಂ. ಬ್ಯಾರೇಜ ನಿರ್ಮಾಣ, ಕೊಳಚಿ ಬಲದಂಡೆ ಮುಖ್ಯ ಕಾಲುವೆಯನ್ನು ಸುಮಾರು 4.11 ಕೋಟಿ ವೆಚ್ಚದಲ್ಲಿ ಸುಧಾರೀಕರಣ, 40 ಲಕ್ಷ ವೆಚ್ಚದಲ್ಲಿ ಎಂ. ಕಲ್ಲಾಪೂರ ಗ್ರಾಮದ ಕೆರೆ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು. ರೈತರಿಗೆ ನೀರಾವರಿ ಸೌಲಭ್ಯ ಕಲ್ಪಿಸುವುದು ಸೇರಿದಂತೆ ಅಂತರ್ಜಲ ಮಟ್ಟ ಸುಧಾರಣೆಗೆ ಹಳ್ಳಕ್ಕೆ ಬ್ರಿಡ್ಜ ಕಂ–ಬ್ಯಾರೇಜ್ ನಿರ್ಮಾಣಕ್ಕೆ ಸರಕಾರದಿಂದ ಅನುದಾನ ಮಂಜೂರು ಮಾಡಿಸಿದ್ದೇನೆ. ರೈತರು ಅವುಗಳ ಸದ್ಭಳಕೆ ಮಾಡಿಕೊಳ್ಳಬೇಕು. ತಾಲೂಕಿನ ರೈತರ ಆಶಾಕಿರಣವಾದ ಕಾಮಗಾರಿಗಳನ್ನು ಶೀಘ್ರ ಮುಕ್ತಾಯಗೊಳಿಸಲು ಸರಕಾರದಿಂದ ಅನುದಾನ ಮಂಜೂರು ಮಾಡಿಸುತ್ತೇನೆ. ತಾಲೂಕಿನ ಜನತೆ ಅಭಿವೃದ್ಧಿಗೆ ಸಹಕಾರ ನೀಡಬೇಕು ಎಂದರು.

ಈ ಸಂದರ್ಭದಲ್ಲಿ ಮುಖಂಡರಾದ ಬಸನಗೌಡ ಪ್ಯಾಟಿಗೌಡ್ರ, ರಾಮಣ್ಣ ಬಿಡಕಿ, ಗ್ರಾ.ಪಂ ಅಧ್ಯಕ್ಷ ಹಣನಂತ ಲಕ್ಕನ್ನವರ, ಮಾಜಿ ಜಿ.ಪಂ ಸದಸ್ಯ ಜಹೂರ ಹಾಜಿ, ಪರಪ್ಪ ಜಂಗವಾಡ, ಇಲಾಖೆಯ ಅಧಿಕಾರಿಗಳಾದ ಶ್ರೀನಿವಾಸ್, ಮಲ್ಲಿಕಾರ್ಜುನ ಸೇರಿದಂತೆ ಗುತ್ತಿಗೆದಾರರು ಮತ್ತಿತರರಿದ್ದರು.

# ಸರಕಾರಿ ನೌಕರರಿಗೆ ಉಚಿತ ಆರೋಗ್ಯ ತಪಾಸಣೆ ಶಿಬಿರ

**ಇಂಡಿ:** ಸರಕಾರವು ಬಡವರಿಗೆ ಮತ್ತು ಜನಸಾಮಾನ್ಯರಿಗೆ ರೂಪಿಸುವ ಯೋಜನೆಗಳು ಜನ ಸಾಮಾನ್ಯರಿಗೆ ಮುಟ್ಟಿಸುವ ಕೆಲಸ ಸರಕಾರ ನೌಕರರ ಮೇಲಿದೆ. ಜನರ ಮನಸ್ಸನ್ನು ಗೆದ್ದು ಸರಕಾರಿ ನೌಕರರು ಕೆಲಸ ಮಾಡುವ ಅವಶ್ಯಕತೆ ಇದೆ ಎಂದು ಶಾಸಕ ಯಶವಂತರಾಯಗೌಡ ಪಾಟೀಲರು ಹೇಳಿದರು.

ಪಟ್ಟಣದ ಗುರುಭವನದಲ್ಲಿ ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘ ಇಂಡಿ ಇವರಿಂದ ನಡೆದ 2024–25 ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆ, ಹಾಗೂ ಅನುಪಮಾ ಸೇವಾ ಪ್ರಶಸ್ತಿ ಮತ್ತು ಸರಕಾರಿ ನೌಕರರಿಗೆ ಉಚಿತ ಆರೋಗ್ಯ ತಪಾಸಣೆ ಶಿಬಿರದಲ್ಲಿ ಮಾತನಾಡುತ್ತಿದ್ದರು. ಕರ್ತವ್ಯ ಪ್ರಜ್ಞೆ,ಮನುಷ್ಯ ಧರ್ಮದಿಂದ ಕೆಲಸ ಮಾಡಬೇಕಾಗಿದೆ. ಯಾರಿಗೂ ಶೋಷಣೆ ಮಾಡದೇ ಪಾರದರ್ಶಕತೆಯಿಂದ ಕೆಲಸ




ಮಾಡಿ ತಾಲೂಕಿನ ಅಭಿವೃದ್ಧಿಗೆ ಶ್ರಮಿಸಲು ಕೇಳಿಕೊಂಡರು. ಐದು ಗ್ಯಾರಂಟಿ ಜನರಿಗೆ ಪ್ರಾಮಾಣಿಕವಾಗಿ ತಲುಪಿಸುವ ಜವಾಬ್ದಾರಿ ರಾಜ್ಯ ಸರಕಾರಿ ನೌಕರರ ಮೇಲಿದೆ. ಸರಕಾರಿ ನೌಕರರ ಒಪಿಎಸ್ ಕುರಿತು ರಾಜ್ಯದ ಮುಖ್ಯಮಂತ್ರಿ ಉಪಮುಖ್ಯಮಂತ್ರಿ ಮತ್ತು ವಿಧಾನಸಭೆಯಲ್ಲಿ ಗಮನ ಸೆಳೆಯುವದಾಗಿ ತಿಳಿಸಿದರು. ರಾಜ್ಯ ಸರಕಾರಿ ನೌಕರರಿಗೆ 6 ನೇ ಮತ್ತು 7 ನೇ ವೇತನ ಆಯೋಗ ಕಾಂಗ್ರೆಸ್ ಸರಕಾರದ ನೀಡಿದೆ. ಹೀಗಾಗಿ ಸರಕಾರಿ ನೌಕರರು ಜನರ ಮನಸ್ಸು ಗೆಲ್ಲುವ ಶ್ರದ್ಧೆಯಿಂದ ಕೆಲಸ ಮಾಡಬೇಕು ಎಂದರು.

ರಾಜ್ಯ ಹಿರಿಯ ಉಪಾಧ್ಯಕ್ಷ ಸರಕಾರಿ ನೌಕರರ ಸಂಘದ ಜಿಲ್ಲಾ ಅಧ್ಯಕ್ಷ ಸುರೇಶ ಶೇಡಶ್ಯಾಳ ಮಾತನಾಡಿ ಸರಕಾರಿ ನೌಕರರಿಗೆ ಒಪಿಎಸ ಜಾರಿಗೆ ಮಾಡಲು ಸರಕಾರದ ಗಮನ ಸೆಳೆಯಲು ಶಾಶಕರು ಪ್ರಾಮಾಣಿಕ ಪ್ರಯತ್ನ ಮಾಡಲು ವಿನಂತಿಸಿಕೊಂಡರು.

ತಾಲೂಕಾ ಘಟಕದ ಸಂಘದ ಅಧ್ಯಕ್ಷ ಬಸವರಾಜ ರಾಹೂರ ಮಾತನಾಡಿ ಸರಕಾರಿ ನೌಕರರ ಸಂಘದ ಅಕೌಂಟನಲ್ಲಿ ಒಟ್ಟು ನಿವ್ವಳ ಲಾಭ ಆರು ಲಕ್ಷ ಇದ್ದು ಒಂದು ಲಕ್ಷ 66 ಸಾವಿರ ಬ್ಯಾಂಕಿನಲ್ಲಿ ಉಳಿದಿದೆ. ಅದಲ್ಲದೆ ಸೇವೆ ಮಾಡುವ ಕೈಗಳು ಶ್ರೇಷ್ಠ ಎಂಬ ಭಾವನೆಯಲ್ಲಿ ನೌಕರರು ಕೆಲಸ ಮಾಡುತ್ತಿದ್ದು ತಾಲೂಕಿನ ಪ್ರಗತಿಗೆ ಪೂರಕ ಕೆಲಸ ಮಾಡುವ ಜವಾಬ್ದಾರಿ ಸರಕಾರಿ ನೌಕರರ ಮೇಲಿದೆ ಎಂದರು.

ವೇದಿಕೆಯ ಮೇಲೆ ಇಒ ಬಿ.ಎಚ್. ಕನ್ನೂರ, ಶಿವರಾಜ ಬಿರಾದಾರ, ಶಿವಾನಂದ ಮಂಗಾನವರ, ವಿಜಯಕುಮಾರ ಕ್ಷತ್ರಿ ಮತ್ತಿತರಿದ್ದರು. ನಂತರ ಸರಕಾರಿ ನೌಕರರಿಗೆ ಸ್ಪಂದನಾ ಆಸ್ಪತ್ರೆಯ ಸಹಯೋಗದಲ್ಲಿ ಆರೋಗ್ಯ ತಪಾಸಣೆ ಮಾಡಲಾಯಿತು.




**ಬೈಲಹೊಂಗಲ:** ಪಟ್ಟಣದ ಶಾಸಕರ ಮತಕ್ಷೇತ್ರ ಸರಕಾರಿ ಮಾದರಿ ಹಿರಿಯ ಪ್ರಾಥಮಿಕ ಕನ್ನಡ ಶಾಲೆ ನಂ 4 ರಲ್ಲಿ ವಿದ್ಯಾರ್ಥಿಗಳಿಗೆ ಶುಕ್ರವಾರ ಎಸ್‌ಡಿಎಂಸಿ ಅಧ್ಯಕ್ಷ ಅರ್ಜುನ ಕಲಕುಟಕರ ಶೂ, ಸಾಕ್ಸಗಳನ್ನು ವಿತರಿಸಿದರು. ಈ ಸಂದರ್ಭದಲ್ಲಿ ಸದಸ್ಯರಾದ ಗದಿಗೆಪ್ಪ ಮಡಿವಾಳರ, ಮಹಾಂತೇಶ ರಾಜಗೋಳಿ, ಪ್ರಭಾರಿ ಮುಖ್ಯೋಪಾಧ್ಯಾಯ ಡಿ.ಎನ್.ಹಲಕಿ ಹಾಗೂ ಸಹ ಶಿಕ್ಷಕ/ಶಿಕ್ಷಕಿಯರು ಉಪಸ್ಥಿತರಿದ್ದರು.

## ದಸರಾ ಉತ್ಸವದ ಪೂರ್ವಭಾವಿ ಸಭೆ

**ತೇರದಾಳ:** ಇದೇ ಸಪ್ಟಂಬರ ತಿಂಗಳಲ್ಲಿ ನಡೆಯಲಿರುವ ನಾಡ ಹಬ್ಬ ದಸರಾ ಉತ್ಸವದ ನಿಮಿತ್ತವಾಗಿ ಇಲ್ಲಿನ ಕಲ್ಲಟ್ಟಿ ಗಲ್ಲಿ ಆಧಿಶಕ್ತಿ ತರುಣ ಮಂಡಳಿ ಹನುಮಾನ ದೇವಸ್ಥಾನ ಆವರಣದಲ್ಲಿ ಪೂರ್ವಭಾವಿ ಸಭೆ ನಡೆಸಿದರು.

ಈ ವರ್ಷದ ಉತ್ಸವ 27ನೇ ವರ್ಷದ್ದಾಗಿದೆ. ಪ್ರತಿ ವರ್ಷದಂತೆ ಈ ವರ್ಷವು ಒಂಬತ್ತು ದಿನಗಳ ಕಾಲ ಆಧಿಶಕ್ತಿ ದೇವಿ ಮೂರ್ತಿ ಪ್ರತಿಷ್ಠಾಪನೆ, ಒಂಬತ್ತು ದಿನಗಳ ವರೆಗೆ ವಿವಿಧ ಸ್ಪರ್ಧೆ, ಮುತ್ತೈದೆಯರಿಗೆ ಉಡಿ ತುಂಬುವುದು ಅನ್ನಪ್ರಸಾದ ವ್ಯವಸ್ಥೆ ಸೇರಿದಂತೆ ದಸರಾ ಉತ್ಸವನ್ನು ಅದ್ದೂರಿಯಿಂದ ಆಚರಿಸಲು ನಿರ್ಧರಿಸಲಾಯಿತು. 27ನೇ ವರ್ಷದ ದಸರಾ ಉತ್ಸವ ಸಮಿತಿ ಅಧ್ಯಕ್ಷರಾಗಿ ರಾಯಪ್ಪ ಅಥಣಿ, ಉಪಾಧ್ಯಕ್ಷರಾಗಿ ಸಂಗಮೇಶ ಸನಪೇಟೆ, ಕಾರ್ಯದರ್ಶಿಯಾಗಿ ತಮ್ಮಣಿ ನಾಗರೆಡ್ಡಿ, ಖಜಾಂಚಿಯಾಗಿ ಸಂಗಮೇಶ ನಿವರಗಿ ಅವರನ್ನು ಇದೇ ಸಂದರ್ಭದಲ್ಲಿ ಆಯ್ಕೆ ಮಾಡಲಾಯಿತು.

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :187, Postal Reg No. PMG/KA/NK/BM/135/25-27 / POST AT Vantamury Colony Post Office